ಸಂಪುಟ: 01 VOLUVE 01 | ಸಂಚಿಕೆ: 49 ISSUE: 49 | ಪುಟ: 06 PAGE: 06 | ಭಾನುವಾರ 30-08-2026 SUNDAY 30-08-2026
VD
REG-PRGI NO KNKAN/26/A5239 ಮೋ: 9880010077
vkbharath25@gmail.com

# ವಿಜಯ ದುಂಬಿ

VIJAYA DUMBI KANNADA DAILY ವಿಶ್ವಾಸದ ಕನ್ನಡಿ
ಕನ್ನಡ ದಿನಪತ್ರಿಕೆ
Rs.3/-

2 ಪ್ರಿಯಾಂಕ್ ರಾಜೀನಾಮೆಗೆ ಹೆಚ್‌ಡಿಕೆ ಆಗ್ರಹ
4 ಕಳಪೆ ಗುಣಮಟ್ಟದ ಔಷಧಿ ಸರಬರಾಜು ಕುರಿತು ತನಿಖೆಗೆ ಸಮಿತಿ ರಚನೆ : ಯು.ಟಿ.ಖಾದರ್
6 ಡಿಕೆಶಿ ಟೀಮ್‌ನ ಮೊದಲ ವಿಕೆಟ್ ಉರುಳಿಸಿದ ಬಿಜೆಪಿ, ಕಣ್ಣೀರಿಡುತ್ತ ನಾಗೇಂದ್ರ ರಾಜೀನಾಮೆ

## ಬಿಜೆಪಿ ಕುತಂತ್ರದಿಂದಾಗಿ ನಾಗೇಂದ್ರ 2 ಬಾರಿ ರಾಜೀನಾಮೆ ಕೊಡುವಂತಾಗಿದೆ : ಪರಮೇಶ್ವರ್

**ವಿಜಯ ದುಂಬಿ ಸುದ್ದಿ....**

**ಬೆಂಗಳೂರು: ಸಚಿವ ಸ್ಥಾನಕ್ಕೆ ಬಿ. ನಾಗೇಂದ್ರ ರಾಜೀನಾಮೆ ನೀಡುವ ಅಗತ್ಯ ಇರಲಿಲ್ಲ. ಬಿಜೆಪಿಯವರ ಕುತಂತ್ರದಿಂದಾಗಿ ಅವರು ಎರಡು ಬಾರಿ ರಾಜೀನಾಮೆ ನೀಡುವಂತಾಗಿದೆ. ಈ ಬಗ್ಗೆ ಮುಂದಿನ ದಿನಗಳಲ್ಲಿ ಜನತಾ ನ್ಯಾಯಾಲಯದ ಮುಂದೆ ಕಾಂಗ್ರೆಸ್ ವಸ್ತುಸ್ಥಿತಿಯನ್ನು ಮಂಡಿಸಲಿದೆ ಎಂದು ಉಪ ಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್ ಹೇಳಿದಾರೆ.**



ಮೈಸೂರಿನಲ್ಲಿ ಚಾಮುಂಡೇಶ್ವರಿ ದೇವಿಯ ದರ್ಶನ ಪಡೆದ ಬಳಿಕ ಪಕ್ಷದ ಕಾರ್ಯಕರ್ತರ ಮನೆಗೆ ಭೇಟಿ ನೀಡಿದ ಅವರು, ಸುದ್ದಿಗಾರರೊಂದಿಗೆ ಮಾತನಾಡಿದರು. ಯಾವುದೇ ಅಪರಾಧ ಮಾಡದಿದ್ದರೂ ನಾಗೇಂದ್ರ ಅವರು ಎರಡು ಬಾರಿ ರಾಜೀನಾಮೆ ನೀಡುವಂತೆ ಬಿಜೆಪಿಯವರು ಮಾಡಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದ ಅವರು, ಪಕ್ಷ, ಸರ್ಕಾರ ಹಾಗೂ ಮುಖಂಡ-ರಿಗೆ ಮುಜುಗರವಾಗಬಾರದು ಎಂಬ ಕಾರಣಕ್ಕೆ ಶಿಸ್ತಿನ ಸಿಪಾಯಿಯಂತೆ ನಾಗೇಂದ್ರ ರಾಜೀನಾಮೆ ನೀಡಿದ್ದಾರೆ. ಆದರೆ, ಅದರ ಅಗತ್ಯ ಖಂಡಿತ ಇರಲಿಲ್ಲ ಎಂದರು. ಸಿಬಿಐ ಅಥವಾ ಜಾರಿ ನಿರ್ದೇಶನಾಲಯದ ತನಿಖೆಯಲ್ಲಾಗಲಿ ನಾಗೇಂದ್ರ ಅವರ ಹೆಸರು ಎಲ್ಲಿಯೂ ಪ್ರಸ್ತಾಪವಾಗಿರಲಿಲ್ಲ. ಅವರಿಂದ ಯಾವುದೇ ಹಣ ವಸೂಲಾಗಿರಲಿಲ್ಲ. ತಾವು ಹಿಂದೆ ಗೃಹ ಸಚಿವರಾಗಿದ್ದಾಗಲೇ ದುರುಪಯೋಗವಾಗಿದ್ದ 84 ಕೋಟಿ ರೂ. ಮರುವಸೂಲಿ ಕಾರ್ಯ ಆರಂಭವಾಗಿ-ತ್ತು. ಈ ಪೈಕಿ 79 ಕೋಟಿ ರೂ. ವಾಪಸ್ ಪಡೆಯಲಾಗಿದ್ದು, ಇನ್ನೂ 5 ಕೋಟಿ ರೂ. ಬಾಕಿ ಇದೆ ಎಂದು ತಿಳಿಸಿದರು. “ಎಲ್ಲಿಯೂ ನಾಗೇಂದ್ರ ಅವರ ಹೆಸರು ಕೇಳಿಬರಲಿಲ್ಲ. ಸಿಬಿಐನ ದೋಷಾರೋಪಣಾ ಪಟ್ಟಿಯಲ್ಲೂ ಅವರ ಹೆಸರು ಇರಲಿಲ್ಲ.

## ಆತ್ಮ ಶ್ರೇಷ್ಟಕೃಷಿಕ ಪ್ರಶಸ್ತಿಗೆ ಅರ್ಜಿ ಆಹ್ವಾನ

**ವಿಜಯ ದುಂಬಿ ಸುದ್ದಿ....**

**ನೆಲಮಂಗಲ: ಕೃಷಿ ಇಲಾಖೆಯ ತಾಲೂಕು ಹಾಗೂ ಜಿಲ್ಲಾ ಮಟ್ಟದ ಆತ್ಮ ಶ್ರೇಷ್ಟಕೃಷಿಕ ಪ್ರಶಸ್ತಿ ನೀಡಲು ರೈತರಿಂದ ಅರ್ಜಿ ಆಹ್ವಾನಿಸಲಾಗಿದೆ. ತಾಲೂಕಿನಲ್ಲಿ ಸಮಗ್ರ ಕೃಷಿ ಪದ್ದತಿ, ಮಣ್ಣು, ಹಾಗೂ ನೀರಿನ ಸಂರಕ್ಷಣೆ, ಸಾವಯವ ಹಾಗೂ ನೈಸರ್ಗಿಕ ಕೃಷಿ ಪದ್ದತಿಯನ್ನು ಅಳವಡಿಸಿಕೊಂಡಿರುವ ರೈತರು ಹಾಗೂ ರೈತ ಮಹಿಳೆಯರು ಈ ಪ್ರಶಸ್ತಿಗೆ ಅರ್ಜಿ ಸಲ್ಲಿಸಬಹುದಾಗಿದೆ.**

ರೈತ ಸಂಪರ್ಕ ಕೇಂದ್ರ ಭೇಟಿ: ಆಸಕ್ತ ರೈತರು ಅರ್ಜಿಯನ್ನು ಸಲ್ಲಿಸಲು ಸೆ.1ರಿಂದ 15ರವರೆಗೂ ಅವಕಾಶ ನೀಡಲಾಗಿದ್ದು, ಅರ್ಹತೆ ಹಾಗೂ ಹೆಚ್ಚಿನ ಮಾಹಿತಿಯನ್ನು ಪಡೆದುಕೊಳ್ಳಲು ರೈತರು ಸಮೀಪದ ರೈತ ಸಂಪರ್ಕ ಅಥವಾ ತಾಲೂಕು ಸಹಾಯಕ ಕೃಷಿ ನಿರ್ದೇಶಕರ ಕಚೇರಿಯಲ್ಲಿ ಸಂಪರ್ಕಿಸಿ ಮಾಹಿತಿ ಪಡೆದುಕೊಳ್ಳಬಹುದು ಹಾಗೂ ಅರ್ಜಿ ಸಲ್ಲಿಸಬಹುದು ಎಂದು ನೆಲಮಂಗಲ ತಾಲೂಕು ಸಹಾಯಕ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಾಜ್ಯಾದ್ಯಂತ ಸೆ.5 ರಿಂದ ಪ್ರಜಾಸೇವೆ ಅಭಿಯಾನ

## ಪ್ರತಿ ಶನಿವಾರ ಜಿಲ್ಲಾ ಉಸ್ತುವಾರಿ ಸಚಿವರಿಂದ ಮತ್ತು ಶಾಸಕರಿಂದ ಜನಸ್ಪಂದನ

**ಬೆಂಗಳೂರು:ಸಾರ್ವಜನಿಕರ ಕುಂದುಕೊರತೆಗಳನ್ನು ಆಲಿಸಿ, ಸಕಾಲದಲ್ಲಿ ಸೂಕ್ತ ಪರಿಹಾರ ಒದಗಿಸುವ ಉದ್ದೇಶದಿಂದ ಕರ್ನಾಟಕ ಸರ್ಕಾರವು ರಾಜ್ಯಾದ್ಯಂತ ಹಮ್ಮಿಕೊಳ್ಳಲಿರುವ ‘ಪ್ರಜಾಸೇವೆ ಅಭಿಯಾನ’ ರಾಜ್ಯಾದ್ಯಂತ ಸೆ.5 ರಿಂದ ಆರಂಭವಾಗಲಿದೆ.**

ಈ ಸಂಬಂಧ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯು ಮಾರ್ಗಸೂಚಿಗಳನ್ನು ಹೊರಡಿಸಿದೆ. ಪ್ರತಿಯೊಂದು ಜಿಲ್ಲೆಯಲ್ಲೂ ಜಿಲ್ಲಾ ಉಸ್ತುವಾರಿ ಸಚಿವರು ಮತ್ತು ಸ್ಥಳೀಯ ಶಾಸಕರ ನೇತೃತ್ವದಲ್ಲಿ ಪ್ರತಿ ತಿಂಗಳ ಎಲ್ಲಾ ಶನಿವಾರಗಳಂದು ಈ ಪ್ರಜಾಸೇವೆ (ಜನಸ್ಪಂದನ) ಅಭಿಯಾನ ಸಭೆಗಳನ್ನು ಆಯೋಜಿಸಲಾಗುತ್ತದೆ.

ಸಾರ್ವಜನಿಕ ಅರ್ಜಿಗಳ ನಿರ್ವಹಣೆ ಮತ್ತು ಸೇವೆ: ಸಭೆಯ ಸ್ಥಳಗಳಲ್ಲಿ ನಾಗರಿಕರಿಂದ ಅರ್ಜಿ ಹಾಗೂ ದೂರುಗಳನ್ನು ಸ್ವೀಕರಿಸಲು ‘ಗ್ರಾಮ ಒನ್’ ಮತ್ತು ‘ಕರ್ನಾಟಕ ಒನ್’ ಕೇಂದ್ರಗಳನ್ನು ಸ್ಥಾಪಿಸಲಾಗುವುದು. ನಾಗರಿಕರಿಗೆ ಉಚಿತ



ಸೇವೆ ಒದಗಿಸುವ ನಿಟ್ಟಿನಲ್ಲಿ ಅಗತ್ಯವಿರುವ ಕಂಪ್ಯೂಟರ್ ಹಾಗೂ ಆಪರೇಟರ್‌ಗಳ ಲಭ್ಯತೆಯನ್ನು ಜಿಲ್ಲಾಧಿಕಾರಿಗಳ ಹಂತದಲ್ಲೇ ಖಚಿತಪಡಿಸಿಕೊಳ್ಳಲು ಸೂಚಿಸಲಾಗಿದೆ. ಜನಸ್ಪಂದನ ದಿನದಂದು ಸ್ವೀಕರಿಸುವ ದೂರುಗಳನ್ನು ಕ್ಷಿಪ್ರವಾಗಿ ವಿಲೇವಾರಿ ಮಾಡಲು ಎರಡು ಪ್ರತ್ಯೇಕ ಸರದಿ ವ್ಯವಸ್ಥೆ ಮಾಡಲಾಗುತ್ತದೆ.

**ಸರದಿ1:** ಹೊಸ ದೂರುಗಳು: ಸಾರ್ವಜನಿಕರು ಮೊದಲ ಬಾರಿಗೆ ಸಲ್ಲಿಸುವ ಅರ್ಜಿಗಳ ನಿರ್ವಹಣೆ.

**ಸರದಿ2:** ಇತ್ಯರ್ಥವಾಗದ ತೃಪ್ತಿಕರವಾಗಿ ಇತ್ಯರ್ಥವಾಗದ ದೂರುಗಳು: ಐಪಿಜಿಆರ್‌ಎಸ್ ಪೋರ್ಟಲ್‌ನಲ್ಲಿ ದಾಖಲಾಗಿ, ನಿಗದಿತ 21 ದಿನಗಳ ಅವಧಿ ಮುಗಿದರೂ ಸೂಕ್ತ ಪ್ರತಿಕ್ರಿಯೆ ಸಿಗದ ದೂರುಗಳಿಗಾಗಿ ಪ್ರತ್ಯೇಕ ವ್ಯವಸ್ಥೆ.

ಈಗಾಗಲೇ ನಿರ್ದೇಶಿಸಿರುವಂತೆ ಜನಸ್ಪಂದನಾ ಸಭೆಗಳನ್ನು ಆಯೋಜಿಸುವ ದಿನದಂದು ಸರ್ಕಾರಿ ಯೋಜನೆಗಳ ಬಗ್ಗೆ ನಾಗರೀಕರಿಗೆ ಮಾಹಿತಿ ಪ್ರಸಾರ ಮಾಡಲು ವಿವಿಧ ಸರ್ಕಾರಿ ಇಲಾಖೆಗಳ ಅಡಿಯಲ್ಲಿ ಲಭ್ಯವಿರುವ ಐ.ಇ.ಸಿ (ಮಾಹಿತಿ, ಶಿಕ್ಷಣ ಮತ್ತು ಸಂವಹನ) ಅನುದಾನವನ್ನು ಉಪ ವಿಭಾಗಾಧಿಕಾರಿಗಳು ಬಳಸಿಕೊಳ್ಳಬೇಕು.

ಜಿಲ್ಲಾ ಉಸ್ತುವಾರಿ ಸಚಿವರ ಹಾಗೂ ಶಾಸಕರ ಅಧ್ಯಕ್ಷತೆಯಲ್ಲಿ ನಡೆಯುವ ಎರಡೂ ಬಗೆಯ ಜನಸ್ಪಂದನ ಸಭೆಗಳಲ್ಲಿ ಸ್ವೀಕರಿಸಲಾಗುವ ಎಲ್ಲಾ ಅರ್ಜಿಗಳು ಮತ್ತು ದೂರುಗಳನ್ನು ಪ್ರತಿ ಬುಧವಾರ ನಡೆಯುವ ಮೂರು ಹಂತದ ಪರಿಶೀಲನಾ ವ್ಯವಸ್ಥೆಯ ಮೂಲಕ ಬೆಳಿಗ್ಗೆ 9:00 ರಿಂದ 11:00: ತಾಲ್ಲೂಕು ಮಟ್ಟದಲ್ಲಿ ತಹಶೀಲ್ದಾರ್ ಮತ್ತು ತಾಲ್ಲೂಕು ಪಂಚಾಯತ್ ಸಿಇಒ ನೇತೃತ್ವದಲ್ಲಿ, ಬೆಳಿಗ್ಗೆ 11.00 ರಿಂದ ಮಧ್ಯಾಹ್ನ 1.00, ಉಪ ವಿಭಾಗ ಮಟ್ಟದಲ್ಲಿ ಸಹಾಯಕ ಆಯುಕ್ತರ ನೇತೃತ್ವದಲ್ಲಿ ಮತ್ತು ಮಧ್ಯಾಹ್ನ 3:00 ರಿಂದ ಸಂಜೆ 5:00, ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾ-ರಿಗಳ ನೇತೃತ್ವದಲ್ಲಿ ಪರಿಶೀಲನೆ ಮಾಡಬೇಕು.

ತಮ್ಮ ದೂರಿನ ವಿಲೇವಾರಿಯಿಂದ ತೃಪ್ತರಾಗದ ಸಾರ್ವಜನಿಕರು ಈ ಪರಿಶೀಲನಾ ಸಭೆಗಳಿಗೆ ಖುದ್ದು ಹಾಜರಾಗಿ, ಅಧಿಕಾರಿಗಳ ಸಮ್ಮುಖದಲ್ಲೇ ನೇರವಾಗಿ ತಮ್ಮ ಅಹವಾಲು ಬಗೆಹರಿಸಿಕೊಳ್ಳಲು ಅವಕಾಶ ನೀಡಲಾಗಿದೆ.

ಸಿಎಲ್ ಹಾಗೂ ಜಾಗೃತಿ ಅನುದಾನ: ತಿಂಗಳ 2ನೇ ಮತ್ತು 4ನೇ ಶನಿವಾರದ ರಜಾ ದಿನಗಳಲ್ಲಿ ಕೆಲಸ ಮಾಡುವ ಗ್ರೂಪ್ ‘ಸಿ’ ಮತ್ತು ಗ್ರೂಪ್ ‘ಡಿ’ ಸಿಬ್ಬಂದಿಗೆ ಸಂಬಂಧಪಟ್ಟ ಜಿಲ್ಲಾಧಿಕಾರಿಗಳ ಹಂತದಲ್ಲೇ ಕಾಂಪೆನ್ಸೇಟರಿ ಸಿಎಲ್ ಮಂಜೂರು ಮಾಡಲು ಅವಕಾಶ ನೀಡಲಾಗಿದೆ. ಗ್ರೂಪ್ ‘ಎ’ ಮತ್ತು ಗ್ರೂಪ್ ‘ಬಿ’ ಸಿಬ್ಬಂದಿಗೆ ರಜೆ ಮಂಜೂರಾತಿ ಕುರಿತು ಪ್ರತ್ಯೇಕ ಆದೇಶ ಹೊರಡಿಸಲಾಗುವುದು ಎಂದು ಪ್ರಜಾ ಸೇವಾ ಇಲಾಖೆಯ ಸರ್ಕಾರದ ಉಪ ಕಾರ್ಯದರ್ಶಿ ಸುಮಾ ಬಿ.ಎಸ್ ಅವರು ಸುತ್ತೋಲೆ ಹೊರಡಿಸಿದ್ದಾರೆ.

# ಕಲಬುರಗಿ ಮಹಾನಗರ ಪಾಲಿಕೆ ಕಾಂಗ್ರೆಸ್‌ಗೆ ಅಧಿಕಾರದ ಚುಕ್ಕಾಣಿ

**ವಿಜಯ ದುಂಬಿ ಸುದ್ದಿ....**

**ಮೇಯರ್ ಆಗಿ ಅಜ್ಜಲ್ ಅಹಮದ್, ಉಪ ಮೇಯರ್ ಆಗಿ ಫರ್ಹಾನಾಜ್ ಆಯ್ಕೆ: ಕಲಬುರಗಿ: ಭಾರಿ ಕುತೂಹಲ ಮೂಡಿಸಿದ್ದ ಕಲಬುರಗಿ ಮಹಾನಗರ ಪಾಲಿಕೆಯ 24ನೇ ಅವಧಿಯ ಮೇಯರ್ ಹಾಗೂ ಉಪ ಮೇಯರ್ ಚುನಾವಣೆಯಲ್ಲಿ ಕಾಂಗ್ರೆಸ್ ಮೇಲುಗೈ ಸಾಧಿಸಿದ್ದು, ಪಾಲಿಕೆಯ ಆಡಳಿತದ ಚುಕ್ಕಾಣಿಯನ್ನು ಮತ್ತೊಮ್ಮೆ ತನ್ನದಾಗಿಸಿಕೊಂಡಿದೆ.**

ಶನಿವಾರ ನಡೆದ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಅಜ್ಜಲ್ ಅಹಮದ್ ಗೋಳಾ ನೂತನ ಮೇಯರ್ ಆಗಿ ಮತ್ತು ಫರ್ಹಾನಾಜ್ ಖುಸ್ರೋ ಜಹಗೀರ್ದಾರ್ ಉಪ ಮೇಯರ್ ಆಗಿ ಆಯ್ಕೆಯಾಗುವ ಮೂಲಕ




ನಗರದ ಆಡಳಿತದ ಹೊಣೆ ಹೊತ್ತಿದ್ದಾರೆ.

ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ 35 ಮತಗಳನ್ನು ಪಡೆಯುವ ಮೂಲಕ ಸ್ಪಷ್ಟ ಮೆಜಾರಿಟಿ ಸಾಧಿಸಿದರೆ, ಪ್ರತಿಸ್ಪರ್ಧಿ ಬಿಜೆಪಿ ಅಭ್ಯರ್ಥಿ 29 ಮತಗಳನ್ನು ಪಡೆದು ಮುಖಭಂಗ ಅನುಭವಿಸಿದರು.

ಆಗಸ್ಟ್ 7ರಂದು ಈ ಚುನಾವಣೆ ನಡೆಯಬೇಕಾಗಿತ್ತು. ಆದರೆ, ಕೆಲ ತಾಂತ್ರಿಕ ಹಾಗೂ ಆಡಳಿತಾತ್ಮಕ ಕಾರಣಗಳಿಂದ ಚುನಾವಣೆ ಮುಂದೂಡಿಕೆಯಾಗಿತ್ತು. ತದನಂತರ ಪ್ರಾದೇಶಿಕ ಆಯುಕ್ತರಾದ ಜಾಹೀರಾ ನಶೀಮ್ ಅವರು ಆಗಸ್ಟ್ 29ರಂದು ಚುನಾವಣೆ ನಡೆಸುವಂತೆ ಪರಿಷ್ಕೃತ ಅಧಿಸೂಚನೆ ಹೊರಡಿಸಿದ್ದರು. ಅದರಂತೆ ಶನಿವಾರ ಶಾಂತಿಯುತವಾಗಿ ಚುನಾವಣೆ ನಡೆದು, ಫಲಿತಾಂಶ ಹೊರಬಿದ್ದಿದೆ

# ಹಾಸನ ಜಿಲ್ಲಾಧಿಕಾರಿ ಲತಾಕುಮಾರಿ ರಕ್ಷಣೆ ನೀಡಬೇಕೆಂದು ಪ್ರೆಸ್ ಕ್ಲಬ್ ಕೌನ್ಸಿಲ್ ತಂಡದವರಿಂದ ಮುಖ್ಯ ಕಾರ್ಯದರ್ಶಿಗಳಿಗೆ ಮನವಿ ಪತ್ರ

**ವಿಜಯ ದುಂಬಿ ಸುದ್ದಿ.... ಬೆಂಗಳೂರು: ಹಾಸನ ಜಿಲ್ಲಾಧಿಕಾರಿಗಳಾದ ಶ್ರೀಮತಿ ಕೆ ಎಸ್ ಲತಾ ಕುಮಾರಿ ಐಎಎಸ್ ರವರು ದಕ್ಷ ಹಾಗೂ ಪ್ರಾಮಾಣಿಕವಾಗಿ ಕಾನೂನು ಪ್ರಕಾರ ಕರ್ತವ್ಯ ನಿರ್ವಹಿಸಿಕೊಂಡು ಬರುತ್ತಿರುವ ಇವರಿಗೆ ಹಾಸನ ಜಿಲ್ಲೆಯ ಗ್ರಾಮ ಪಂಚಾಯಿತಿ ಚುನಾವಣೆಗೆ ಸಂಬಂಧಿಸಿದ ಮೀಸಲಾತಿ**






**ನಿಗದಿ ವಿಷಯದಲ್ಲಿ ಮಾಜಿ ಸಚಿವ ಎಚ್ ಡಿ ರೇವಣ್ಣ ರವರು ಹಾಸನ ಜಿಲ್ಲಾಧಿಕಾರಿ ಶ್ರೀಮತಿ ಕೆ ಎಸ್ ಲತಾ ಕುಮಾರಿ ರವರ ವಿರುದ್ಧ ಅವಹೇಳನಕಾರಿ,**

ವೈಯಕ್ತಿಕ ಮತ್ತು ಕೀಳು ಮಟ್ಟದ ಹೇಳಿಕೆ ನೀಡಿರುವ ಬಗ್ಗೆ ಪ್ರೆಸ್ ಕ್ಲಬ್ ಕೌನ್ಸಿಲ್ ಪತ್ರಿಕಾ ಸಂಸ್ಥೆಯು ತನ್ನ ಎಲ್ಲಾ ಪದಾಧಿಕಾರಿಗಳೊಂದಿಗೆ ಮುಖ್ಯ ಕಾರ್ಯದರ್ಶಿಗಳಿಗೆ ದೂರು ಸಲ್ಲಿಸಿ ಹಾಸನ ಜಿಲ್ಲಾಧಿಕಾರಿಗಳಾದ ಲತಾ ಕುಮಾರಿ ರವರಿಗೆ ರಕ್ಷಣೆ ನೀಡಬೇಕೆಂದು ಹಾಗೂ ಕೂಡಲೇ ಮಾಜಿ ಸಚಿವ ಎಚ್ ಡಿ ದೇವಣ್ಣ ವಿರುದ್ಧ ಕ್ರಮ ಕೈಗೊಳ್ಳಬೇಕೆಂದು ಮನವಿ ಮಾಡಲಾಯಿತು.

# ಸೋಲದೇವನಹಳ್ಳಿ ನ್ಯಾಯಬೆಲೆ ಅಂಗಡಿಯಲ್ಲಿ ಕಿರುಕುಳ, ಅವ್ಯವಸ್ಥೆ ಆರೋಪ

## ಕ್ರಮಕ್ಕೆ ಗ್ರಾಮಸ್ಥರ ಆಗ್ರಹ, ನರಸೇಗೌಡ ವಿರುದ್ಧ ಆಕ್ರೋಶ

**ವಿಜಯ ದುಂಬಿ ಸುದ್ದಿ....**

**ನೆಲಮಂಗಲ: ತಾಲ್ಲೂಕಿನ ಸೋಲದೇವನಹಳ್ಳಿ ಗ್ರಾಮದ ಸರ್ಕಾರಿ ನ್ಯಾಯಬೆಲೆ ಅಂಗಡಿ ಸಂಖ್ಯೆ-19ರಲ್ಲಿ ನಿಯಮ ಉಲ್ಲಂಘನೆ ಹಾಗೂ ಸಾರ್ವಜನಿಕರಿಗೆ ಕಿರುಕುಳ ನೀಡಲಾಗುತ್ತಿದೆ ಎಂಬ ಗಂಭೀರ ಆರೋಪಗಳು ಕೇಳಿಬಂದಿದ್ದು, ಆಹಾರ ಇಲಾಖೆಯ ಉನ್ನತ ಅಧಿಕಾರಿಗಳು ತಕ್ಷಣ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಗ್ರಾಮಸ್ಥರು ಒತ್ತಾಯಿಸಿದ್ದಾರೆ.**

ನ್ಯಾಯಬೆಲೆ ಅಂಗಡಿಯ ಆಹಾರ ವಿತರಕ ನರಸೇಗೌಡ ಅವರು ಪಡಿತರ ಚೀಟಿದಾರರಿಂದ ಮುಂಚಿತವಾಗಿಯೇ ಬಯೋಮೆಟ್ರಿಕ್ (ಹೆಬ್ಬೆರಳ ಗುರುತು) ಪಡೆದುಕೊಂಡು, ಧಾನ್ಯ ವಿತರಿಸಲು ಹಲವು ದಿನಗಳ ಕಾಲ ವಿಳಂಬ ಮಾಡುತ್ತಿದ್ದಾರೆ ಎಂದು ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಸರ್ಕಾರವು ನ್ಯಾಯಬೆಲೆ ಅಂಗಡಿಗಳನ್ನು ದಿನನಿತ್ಯ ನಿಯಮಿತ ವೇಳಾಪಟ್ಟಿಯಂತೆ ತೆರೆಯಲು ಸ್ಪಷ್ಟ




ಆದೇಶ ನೀಡಿದ್ದರೂ, ಅದನ್ನು ಗಾಳಿಗೆ ತೂರಲಾಗಿದೆ.



ತಿಂಗಳಿಗೆ ಕೇವಲ 2 ರಿಂದ 3 ದಿನ ಮಾತ್ರ ಅಂಗಡಿ ತೆರೆಯುತ್ತಿರುವುದರಿಂದ, ಸಾರ್ವಜನಿಕರು ಕೆಲಸ-ಕಾರ್ಯಗಳನ್ನು ಬಿಟ್ಟು ಗಂಟೆಗಟ್ಟಲೆ ಕಾಯುವ ಹಾಗೂ ಪಡಿತರಕ್ಕಾಗಿ ಪದೇಪದೇ ಅಂಗಡಿಗೆ ಅಲೆದಾಡುವ ದುಸ್ಥಿತಿ ನಿರ್ಮಾಣವಾಗಿದೆ.

**ಪ್ರಶ್ನಿಸಿದರೆ ಬೆದ-ರಿಕೆ ದೂರು ನೀಡಲು ಗ್ರಾಮೀಣರ ಆತಂಕ:** ಬಯೋಮೆಟ್ರಿಕ್ ನೀಡಿದ ತಕ್ಷಣ ಪಡಿತರ ನೀಡದೆ ವಿಳಂಬ ಮಾಡುತ್ತಿರುವುದನ್ನು ಪ್ರಶ್ನಿಸಿದ



ಸಾರ್ವಜನಿಕರಿಗೆ, ವಿತರಕರು ಹಾಗೂ ಅವರ ಕುಟುಂಬದ ಸದಸ್ಯರು ಬೆದರಿಕೆ ಹಾಕುತ್ತಿದ್ದಾರೆ ಎನ್ನಲಾಗಿದೆ. ಗ್ರಾಮದಲ್ಲಿ ತಮ್ಮದೇ ಆದ ಬೆಂಬಲಿಗರನ್ನು ಕಟ್ಟಿಕೊಂಡು ಸಾರ್ವಜನಿಕರಿಗೆ ಆತಂಕ ಹುಟ್ಟಿಸುತ್ತಿರುವುದರಿಂದ, ಬಡ ಕುಟುಂಬಗಳು ಭಯದಲ್ಲೇ ಪಡಿತರ ಪಡೆಯುವಂತಾಗಿದೆ. ಈ ಹಿಂದೆ ಆಹಾರ ಇಲಾಖೆಯ ಅಧಿಕಾ-ರಿಗಳ ಗಮನಕ್ಕೆ ತಂದರೂ, ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುವ ಬದಲು ರಾಜೀ ಸಂಧಾನದ ಮೂಲಕ ವಿಚಾರ ಮುಚ್ಚಿಹಾಕಲು ಯತ್ನಿಸಲಾಗಿದೆ ಎಂಬ ದೂರುಗಳು ಕೇಳಿಬಂದಿವೆ. ಪರಿಣಾಮವಾಗಿ, ತಮಗೆ ಧಾನ್ಯ ಸಿಗದೇ ಹೋಗಬಹುದು ಅಥ-’ವಾ ವಿತರಕರಿಂದ ತೊಂದರೆಯಾಗಬಹುದು ಎಂಬ ಭೀತಿಯಿಂದ ಸ್ಥಳೀಯರು ಅಧಿಕೃತ ದೂರು ನೀಡಲು ಹಿಂದೇಟು ಹಾಕುತ್ತಿದ್ದಾರೆ.

**ಆಹಾರ ನಿರೀಕ್ಷಕರ ಭೇಟಿ:** ಸಾರ್ವಜನಿಕರ ದೂರುಗಳ ಹಿನ್ನೆಲೆಯಲ್ಲಿ ನೆಲಮಂಗಲ ತಾಲ್ಲೂಕು ಆಹಾರ ನಿರೀಕ್ಷಕರಾದ ಜೈಕುಮಾರ್ ಅವರು ಇತ್ತೀಚೆಗೆ ಸೋಲದೇವನಹಳ್ಳಿ ಗ್ರಾಮಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಈ ಸಂದರ್ಭದಲ್ಲಿ ಗ್ರಾಮಸ್ಥರು ಅಂಗಡಿಯ ಅವ್ಯವಸ್ಥೆ ಹಾಗೂ ವಿತರಕರ ವರ್ತನೆಯ ಕು-ರಿತು ಅಧಿಕಾರಿಗೆ ಮನವರಿಕೆ ಮಾಡಿಕೊಟ್ಟಿದ್ದಾರೆ. ಸರ್ಕಾರಿ ಪಡಿತರ ವ್ಯವಸ್ಥೆಯಲ್ಲಿ ಪಾರದರ್ಶಕತೆ ಕಾಯ್ದುಕೊಳ್ಳಲು ಮತ್ತು ಬಡಜನರ ಹಕ್ಕನ್ನು ರಕ್ಷಿಸಲು ಆಹಾರ ಇಲಾಖೆ ಹಾಗೂ ಜಿಲ್ಲಾಡಳಿತ ತಕ್ಷಣವೇ ಈ ಅಂಗಡಿಯ ಪರವಾನಗಿ ಪರಿಶೀಲಿಸಿ ಸೂಕ್ತ ಕಾನೂನು ಕ್ರಮ ಜರುಗಿಸಬೇಕಿದೆ.

# ಪ್ರಿಯಾಂಕ್ ರಾಜೀನಾಮೆಗೆ ಹೆಚ್‌ಡಿಕೆ ಆಗ್ರಹ

**ವಿಜಯ ದುಂಬಿ ಸುದ್ದಿ....**

**ಬೆಂಗಳೂರು: ಕೆಪಿಎಸ್ ಸಿ ಯಿಂದ ಈ ಹಿಂದೆ ನಡೆದಿದ್ದ ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಇಲಾಖೆಯ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಗಳ ನೇಮಕಾತಿಗಳಲ್ಲಿ ಭಾರೀ ಅಕ್ರಮ ನಡೆದಿದೆ ಎಂದು ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಗಂಭೀರ ಆರೋಪ ಮಾಡಿದ್ದು,ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅವರ ರಾಜೀನಾಮೆಗೆ ಆಗ್ರಹಿಸಿದ್ದಾರೆ.**

ಜೆಡಿಎಸ್ ಕಚೇರಿಯಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಪ್ರಿಯಾಂಕ್ ಖರ್ಗೆಯವರು ಗ್ರಾಮೀಣಾಭಿವೃದ್ಧಿ ಇಂಜಿನಿಯರ್ ಗಳ ನೇಮಕಾತಿ ಅಕ್ರಮಗಳ ದಾಖಲೆಗಳನ್ನು ಬಿಡುಗಡೆ ಮಾಡಿ ಮಾತನಾಡಿದ ಅವರು 2022ರಲ್ಲಿ ನೋಟಿಫಿಕೇಶನ್ ಆಗಿದ್ದ ಅಸಿಸ್ಟೆಂಟ್ ಎಕ್ಸಿಕ್ಯುಟಿವ್ ಇಂಜಿನಿಯರ್ ಹುದ್ದೆಗಳ ಆಯ್ಕೆ ಪಟ್ಟಿಯಲ್ಲಿ ಅಕ್ರಮ ನಡೆದಿದೆ. ಪ್ರಾವಿಷನಲ್ ಲಿಸ್ಟ್‌ನಲ್ಲಿದ್ದ 1, 3, 4, 6, 7, 8, 9 ಸೀರಿಯಲ್ ನಂಬರ್‌ನ ಅಭ್ಯರ್ಥಿಗಳು ಪರೀಕ್ಷೆಯಲ್ಲೇ ಪಾಸಾಗಿರಲಿಲ್ಲ ಎಂದು ಆರೋಪಿಸಿದರು ಒಎಮ್‌ಆರ್ ಶೀಟ್‌ಗಳನ್ನು ತಿದ್ದಿರುವುದು ಸಿಐಡಿ ತನಿಖೆಯಿಂದ ಸ್ಪಷ್ಟವಾಗಿದೆ.

ಸಿಸಿಟಿವಿ ಫೂಟೇಜ್ ಇಲ್ಲದಿದ್ದರೂ ಹಾಗೂ ಸಬ್ ಕಮಿಟಿ ತನಿಖೆಗೆ ಸಹಕಾರ ಸಿಗದಿದ್ದರೂ ತರಾತುರಿಯಲ್ಲಿ ಅಂತಿಮ ಪಟ್ಟಿ ಪ್ರಕಟಿಸಲಾಗಿದೆ. ಕೋರ್ಟ್ ಆದೇಶ ಹಾಗೂ ನಿಯಮಗಳನ್ನು ಗಾಳಿಗೆ ತೂರಿ, ಅಧ್ಯಕ್ಷರ ಸಹಿಯೂ ಇಲ್ಲದೆ ಅಕ್ರಮವಾಗಿ 24 ಜನ ಎಡಬ್ಲು ಇ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ನೀಡಿ, ಕಳೆದ ಒಂದು ವರ್ಷದಿಂದ ಸಂಬಳ ನೀಡಲಾಗುತ್ತಿದೆ ಎಂದು ದೂರಿದರು. ಕೆಪಿಎಸ್‌ಸಿ ಮೂಲಕ ನಡೆದ ನೇಮಕಾತಿ ಪ್ರಕ್ರಿಯೆಯಲ್ಲಿ ಅಕ್ರಮವಾಗಿರುವುದು ಗೊತ್ತಿದ್ದರೂ ಗ್ರಾಮೀಣಾಭಿವೃದ್ಧಿ ಸಚಿವರಾಗಿದ್ದ ಪ್ರಿಯಾಂಕ್ ಖರ್ಗೆ ಅವರು ಏಕೆ ನೇಮಕಾತಿ ಆದೇಶ ಕೊಟ್ಟರು,



ಅವರ ಜವಾಬ್ದಾರಿ ಎಂದು ವಾಗ್ದಾಳಿ ನಡೆಸಿ, ಗೃಹ ಸಚಿವರ ಹೇಳಿಕೆಗಳು ಮತ್ತು ಸಚಿವ ಪ್ರಿಯಾಂಕ್ ಖರ್ಗೆ ಅವರ ಇಲಾಖೆಯ ಕಾರ್ಯವೈಖರಿಯನ್ನು ತೀವ್ರವಾಗಿ ತರಾಟೆಗೆ ತೆಗೆದುಕೊಂಡಿರುವ ಅವರು, ತಕ್ಷಣವೇ ಪ್ರಿಯಾಂಕ್ ಖರ್ಗೆ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಬೇಕೆಂದು ಆಗ್ರಹಿಸಿದ್ದಾರೆ.

'ನಿತ್ಯ ಆಡು ಮುಟ್ಟುವ ಸೊಪ್ಪಿಲ್ಲ' ಎಂಬಂತೆ ಪ್ರಿಯಾಂಕ್ ಖರ್ಗೆ ಮಾತನಾಡಿದ ವಿಚಾರವಿಲ್ಲ. ನಿಮ್ಮ ನಾಲಿಗೆಗೆ ಗೌರವ ಕೊಡವುದಾದರೆ ಪಾರದರ್ಶಕ ಆಡಳಿತಕ್ಕೆ ಬದ್ಧವಾದರೆ, ತಕ್ಷಣವೇ ರಾಜೀನಾಮೆ ನೀಡಿ ಗ್ರಾಮೀಭಣಾಭಿವೃದ್ದಿ ಇಲಾಖೆಯ ಇಂಜಿನಿಯರ್ ನೇಮಕಾತಿ ಪ್ರಕಾರಣವನ್ನು ಸಿಬಿಐ ತನಿಖೆಗೆ ವಹಿಸಿ ಎಂದು ಒತ್ತಾಯಿಸಿದರು. ಪಶುವೈದ್ಯಕೀಯ ಅಧಿಕಾರಿ ನೇಮಕಾತಿಗೆ 80 ಲಕ್ಷ ರೂ. ಬೇಡಿಕೆ ಇಟ್ಟ ಆರೋಪ ಎದುರಿಸುತ್ತಿರುವ ಐಎಎಸ್ ಅಧಿಕಾರಿ ಜ್ಞಾನೇಂದ್ರ ಕುಮಾರ್ ವಿಚಾರದಲ್ಲಿ ಗೃಹ ಸಚಿವರು ಹಾದಿ ತಪ್ಪಿಸುತ್ತಿದ್ದಾರೆ.

"ಜ್ಞಾನೇಂದ್ರ ಕುಮಾರ್ ತಂದೆಗೆ ಹುಷಾರಿಲ್ಲ ಎಂದು ಊರಿಗೆ ಹೋಗಿದ್ದಾರೆ, 2–3 ದಿನದಲ್ಲಿ ಬರ್ತಾರೆ" ಎಂದು ಆಗಸ್ಟ್ 23ರಂದು ಹೇಳಿದ್ದ ಗೃಹ ಸಚಿವರು, ಆಗಸ್ಟ್ 25ಕ್ಕೆ "ಅವ ಎಲ್ಲಿದ್ದಾನೆ ಗೊತ್ತಿಲ್ಲ" ಎಂದು ಉಲ್ಟಾ ಹೊಡೆದಿದ್ದಾರೆ. ಸುಳಿವೇ ಇಲ್ಲದ ಮೇಲೆ ಗೃಹ ಇಲಾಖೆ ಏಕೆ ನಡೆಸುತ್ತಿದ್ದೀರಿ ಎಂದು ಪ್ರಶ್ನಿಸಿದರು. ಕಳೆದ 3 ವರ್ಷಗಳಿಂದ 75 ಸಾವಿರ ಹುದ್ದೆ ಭರ್ತಿ ಮಾಡುತ್ತೇವೆ ಎಂದು ಯುವಕ–ರಿಗೆ ಮೋಸ ಮಾಡಲಾಗುತ್ತಿದೆ. ಕೋಟಿ ಕೋಟಿ ಹಣ ನೀಡಿ ಲಂಚ ಕೊಟ್ಟು ಬರುವವರಿಂದ ವ್ಯವಸ್ಥೆ ಹಾಳಾಗುತ್ತಿದೆ. ಯುವಕರು ಮತ್ತು 'ಝೆನ್ ಜೆ' ಪೀಳಿಗೆಯ ನಿರುದ್ಯೋಗಿಗಳು ತಮಗಾಗುತ್ತಿರುವ ಅನ್ಯಾಯದ ವಿರುದ್ಧ ರಸ್ತೆಗಿಳಿದು ಹೋರಾಟ ನಡೆಸಬೇಕು ಎಂದು ಕರೆ ನೀಡಿದರು.

ಪ್ರಿಯಾಂಕ್ ಖರ್ಗೆ ರಾಜೀನಾಮೆಗೆ ಪಟ್ಟು: "ಪಾರದರ್ಶಕತೆ ಬಗ್ಗೆ ಮಾತನಾಡುವ ಸಚಿವ ಪ್ರಿಯಾಂಕ್ ಖರ್ಗೆ ಅವರ ಇಲಾಖೆಯಲ್ಲೇ ಕಿಕ್‌ಬ್ಯಾಕ್ ವ್ಯವಹಾರ ನಡೆದಿದೆ. ದೆಹಲಿಯಲ್ಲಿ 360 ಡಿಗ್ರಿ ತನಿಖೆ ಮಾತನಾಡುವ ನಾಯಕರು ಇಲ್ಲಿ ಅಕ್ರಮವಾಗಿ ನೇಮಕಾತಿ ಆದೇಶ ನೀಡುತ್ತಿದ್ದಾರೆ. ಪ್ರಿಯಾಂಕ್ ಖರ್ಗೆ ಮೊದಲು ತಮ್ಮ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿ ಹೊರಬರಲಿ," ಎಂದು ಕುಮಾರಸ್ವಾಮಿ ಒತ್ತಾಯಿಸಿದರು.

## ಸಾಹುಕಾರ್‌ಗೆ ಕೆಪಿಎಸ್‌ಸಿ ಅಧ್ಯಕ್ಷ ಪಟ್ಟ ನೀಡಿದ್ದು ಯಾರು

**ವಿಜಯ ದುಂಬಿ ಸುದ್ದಿ....**

ಬೆಂಗಳೂರು: ಕರ್ನಾಟಕ ಲೋಕಸೇವಾ ಆಯೋಗದಲ್ಲಿ ನಡೆದಿರುವ ನೇಮಕಾತಿ ಹಗರಣ ಸಂಬಂಧ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಹೇಳಿಕೆಗೆ ತಿರುಗೇಟು ನೀಡಿರುವ ಗೃಹ ಸಚಿವ ಪ್ರಿಯಾಂಕ್ ಖರ್ಗೆ, ಶಿವಶಂಕರಪ್ಪ ಸಾಹುಕಾರ್‌ಗೆ ಕೆಪಿಎಸ್‌ಸಿ ಅಧ್ಯಕ್ಷ ಸ್ಥಾನ ನೀಡಿದ್ದು ಯಾರು? ಖಾರವಾಗಿ ಪ್ರಶ್ನಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಶಿವಶಂಕರಪ್ಪ ಸಾಹುಕಾರ್ ಹಣ ಕೊಟ್ಟು ಅಧ್ಯಕ್ಷರಾಗಿದ್ದಾರೆ.



ಎಂಬ ಮಾತು ನಿಜವೇ? ಶಿವಶಂಕರಪ್ಪ ಮನೆಯಲ್ಲಿ ಬಿ.ಎಸ್. ಯಡಿಯೂರಪ್ಪ ಪುತ್ರ ಬಿ.ವೈ. ವಿಜಯೇಂದ್ರ ಫೋಟೋ ಇರುವುದು ಸತ್ಯವೇ? ಈ ಎಲ್ಲಾ ವಿಚಾರಗಳನ್ನು ಕುಮಾರಸ್ವಾಮಿ ಸ್ನೇಹಿತರೇ ಹೇಳುತ್ತಿದ್ದಾರೆ, ಇದಕ್ಕೆ ಸ್ವತಃ ಕುಮಾರಸ್ವಾಮಿ ಏನು ಉತ್ತರ ನೀಡುತ್ತಾರೆ?" ಎಂದು ಪ್ರಶ್ನಿಸಿದರು. ಭೌಗೋಳಿಕನಕ್ಷೆ ಅನ್ವೇಷಿಸಿ ಐಎಎಸ್ ಅಧಿಕಾರಿ ನಾಪತ್ತೆಯಾಗಿದ್ದಾರೆ ಎಂಬ ಕುಮಾರಸ್ವಾಮಿ ಆರೋಪಕ್ಕೆ ಪ್ರತಿಕ್ರಿಯಿಸಿದ ಅವರು,ಸಂಬಂಧಪಟ್ಟ ಐಎಎಸ್ ಅಧಿಕಾರಿ ಎಲ್ಲಿದ್ದಾರೆ ಎಂಬುದು ನನಗೆ ಸ್ಪಷ್ಟವಾಗಿ ತಿಳಿದಿದೆ. ಆ ಅಧಿಕಾರಿ ಲಿಖಿತವಾಗಿ ರಜೆ ಅರ್ಜಿ ನೀಡಿ ತೆರಳಿದ್ದಾರೆ. ಅವರನ್ನು ವಶಕ್ಕೆ ಪಡೆದಿದ್ದೇವೆಯೇ ಅಥವಾ ಅವರು ಓಡಿ ಹೋಗಿದ್ದಾರೆಯೇ ಎಂಬ ಸಾಮಾನ್ಯ ಮಾಹಿತಿ ನಮಗೆ ತಿಳಿಯುತ್ತದೆ. ಮಾಹಿತಿ ಕೊರತೆಯಿಂದಲೋ ಅಥವಾ ಸಾಮಾನ್ಯ ಪ್ರಜ್ಞೆಯ ಅಭಾವದಿಂದಲೋ ಕುಮಾರಸ್ವಾಮಿ ಇಂತಹ ಹೇಳಿಕೆಗಳನ್ನು ನೀಡುತ್ತಿದ್ದಾರೆ. ಅಧಿಕಾರಿ ಬಂದ ಮೇಲೆ ವಿಚಾರಣೆ ನಡೆಸೋಣ, ಈ ಬಗ್ಗೆ ಕುಮಾರಸ್ವಾಮಿಯವರಿಗಾಗಲಿ ಅಥವಾ ಬಿಜೆಪಿಯವರಿಗಾಗಲಿ ಸ್ಪಷ್ಟನೆ ನೀಡುವ ಅಗತ್ಯ ನಮಗಿಲ್ಲ ಎಂದರು. ಪರಪ್ಪನ ಅಗ್ರಹಾರ ಜೈಲಿನ ಬಗ್ಗೆ ಮಾತನಾಡುವ ಕುಮಾರಸ್ವಾಮಿ,ಜೈಲಿನಲ್ಲಿರುವ ತಮ್ಮ ಕುಟುಂಬಸ್ಥರ ಬಗ್ಗೆ ಯಾಕೆ ಮಾತನಾಡುತ್ತಿಲ್ಲ.ಹಾಸನದ ಮಹಿಳೆಯರ ಮೇಲಿನ ಅತ್ಯಾಚಾರ ಪ್ರಕರಣದ ಕುರಿತು ಅವರು ಮಾತನಾಡಿಲ್ಲ. ಜೈಲಿನಲ್ಲಿರುವ ವ್ಯಕ್ತಿಯೊಬ್ಬರ ಬಳಿ ಮೊಬೈಲ್ ಪತ್ತೆಯಾಗಿರುವ ವಿಚಾರದ ಬಗ್ಗೆಯೂ ಅವರು ಮಾತನಾಡಿಲ್ಲ ಎಂದು ಆರೋಪಿಸಿದರು. ನಾಗೇಂದ್ರ ರಾಜೀನಾಮೆ ವಿಚಾರವಾಗಿ ಪ್ರತಿಕ್ರಿಯಿಸಿದ ಪ್ರಿಯಾಂಕ ಖರ್ಗೆ,ಮುಖ್ಯಮಂತ್ರಿ ಈಗಾಗಲೇ ಈ ಬಗ್ಗೆ ಸ್ಪಷ್ಟವಾಗಿ ಹೇಳಿದ್ದಾರೆ.ಪಕ್ಷದಲ್ಲಿರುವ ಎಲ್ಲರೂ ಪಕ್ಷದ ಸಿಪಾಯಿಗಳು. ಅಗತ್ಯ ಬಂದಾಗ ಯಾರು ಬೇಕಾದರೂ ತ್ಯಾಗ ಮಾಡಬೇಕಾಗುತ್ತದೆ. ಹೈಕಮಾಂಡ್ ಏನು ಹೇಳುತ್ತದೆ ಎಂಬುದೇ ಅಂತಿಮ ನಿರ್ಧಾರವಾಗಲಿದೆ. ಈ ನಿಯಮ ಮುಖ್ಯಮಂತ್ರಿ, ಶಾಸಕರು ಹಾಗೂ ಜಿಲ್ಲಾಧ್ಯಕ್ಷರು ಸೇರಿದಂತೆ ಪಕ್ಷದಲ್ಲಿರುವ ಎಲ್ಲರಿಗೂ ಅನ್ವಯಿಸುತ್ತದೆ ಎಂದು ಪ್ರಿಯಾಂಕ ಖರ್ಗೆ ಸ್ಪಷ್ಟಪಡಿಸಿದರು. ಪ್ರಿಯಾಂಕ ಖರ್ಗೆ ವಿರುದ್ಧ ಮಾತನಾಡಿದರೆ ಜೆಡಿಎಸ್ ಮತ್ತು ಬಿಜೆಪಿಗೆ ಮಾಧ್ಯಮಗಳಲ್ಲಿ ದಿನವೂ ಪ್ರಚಾರ ಹಾಗೂ ಅಂಕ ಸಿಗುತದೆ, ಅದಕ್ಕಾಗಿಯೇ ಅವರು ತಮ್ಮ ವಿರುದ್ಧ ನಿರಂತರವಾಗಿ ಇಂತಹ ಹೇಳಿಕೆಗಳೆನ್ನು ನೀಡುತ್ತಿದ್ದಾರೆ ಎಂದು ಕಿಡಿಕಾರಿದರು. ನನ್ನ ನಾಲಿಗೆ ಬಗ್ಗೆ ಮಾತನಾಡಲು ಜೆಡಿಎಸ್‌ನವರು ಯಾರು? ಎಂದು ಪ್ರಶ್ನಿಸಿದ ಅವರು, ಇಷ್ಟು ದಿನ ಬಿಜೆಪಿಗೆ ಪ್ರಿಯಾಂಕ ಖರ್ಗೆ ಬೇಕಾಗಿದ್ದರು. ಈಗ ಜೆಡಿಎಸ್‌ನವರಿಗೂ ತಮ್ಮ ಹೆಸರು ಬೇಕಾಗಿದೆ. ಅಧಿಕಾರಕ್ಕಾಗಿ ತತ್ವ ಹಾಗೂ ಸಿದ್ಧಾಂತಗಳನ್ನು ಬಿಟ್ಟು ಹೋಗುವವರಿಂದ ತಾವು ಕಲಿಯುವುದು ಏನೂ ಇಲ್ಲ. ಬಿಜೆಪಿ ಹಾಗೂ ಜೆಡಿಎಸ್‌ನಿಂದ ಕಲಿಯಬೇಕಾದ ಅಗತ್ಯವೂ ಇಲ್ಲ ಎಂದು ಹೇಳಿದರು. ಆರ್‌ಎಸ್‌ಎಸ್ ಕುರಿತು ಕುಮಾರಸ್ವಾಮಿ ಹಿಂದೆ ಬರೆದಿದ್ದ ಲೇಖನವನ್ನು ಉಲ್ಲೇಖಿಸಿದ ಖರ್ಗೆ, ಆರ್‌ಎಸ್‌ಎಸ್ ಅನ್ನು ಟೀಕಿಸಿದ್ದವರು ಅಧಿಕಾರ ಸಿಕ್ಕ ಬಳಿಕ ತಮ್ಮ ನಿಲುವು ಬದಲಿಸಿಕೊಂಡಿದ್ದಾರೆ ಎಂದು ಆರೋಪಿಸಿದರು. ಪ್ರಿಯಾಂಕ ಖರ್ಗೆಯನ್ನು ಬೈಯುವುದು ಈಗ ಹೊಸ ಫ್ಯಾಷನ್ ಆಗಿದೆ. ನನ್ನನ್ನು ಬೈದರೆ ಕೇಶವ ಕೃಪಾದಲ್ಲಿ ಅಂಕಪಟ್ಟಿಯಲ್ಲಿ ನಂಬರ್ ಹೆಚ್ಚಾಗುತ್ತಾ ಹೋಗುತ್ತದೆ" ಎಂದು ವ್ಯಂಗ್ಯವಾಡಿದರು. ಬಿಜೆಪಿಯವರು ಬಾಡಿಗೆ ಭಾಷಣಕಾರರನ್ನು ಇಟ್ಟುಕೊಂಡು ತಮ್ಮ ವಿರುದ್ಧ ಮಾತನಾಡಿಸುತ್ತಿದ್ದಾರೆ. ಈ ಹಿಂದೆ ಬಿಜೆಪಿಗೆ ಸೀಮಿತವಾಗಿದ್ದ ಟೀಕೆ ಇದೀಗ ಜೆಡಿಎಸ್‌ಗೂ ತಲುಪಿದೆ ಎಂದು ಹೇಳಿದರು. ನೇಪಾಳದಲ್ಲಿನ ಪರಿಸ್ಥಿತಿ ಇನ್ನೂ ಸಹಜ ಸ್ಥಿತಿಗೆ ಬಂದಿಲ್ಲ ಅಲ್ಲಿನ ಪರಿಸ್ಥಿತಿಗೆ ಸಂಬಂಧಿಸಿದಂತೆ ಮಾಧ್ಯಮಗಳಲ್ಲಿ ಲಭ್ಯವಾಗುತ್ತಿರುವ ಮಾಹಿತಿಯೇ ಸರ್ಕಾರಕ್ಕೂ ಲಭ್ಯವಾಗುತ್ತಿದೆ. ಸರ್ಕಾರದ ವತಿಯಿಂದ ನಿರಂತರವಾಗಿ ಸಂಪರ್ಕ ಸಾಧಿಸುವ ಪ್ರಯತ್ನ ನಡೆಯುತ್ತಿದ್ದು, ನೇಪಾಳದಲ್ಲಿರುವ ಪ್ರವಾಸಿಗರನ್ನೂ ಸಂಪರ್ಕಿಸಲಾಗುತ್ತಿದೆ.

# ಅಕ್ರಮ ಮುಚ್ಚಿಟ್ಟುಕೊಳ್ಳಲು ಕಾಂಗ್ರೆಸ್ ಹೆಣಗಾಟ

**ವಿಜಯ ದುಂಬಿ ಸುದ್ದಿ....**

**ಮಂಡ್ಯ: ರಾಜ್ಯ ಕಾಂಗ್ರೆಸ್ ಸರ್ಕಾರ ಸಾಲು ಸಾಲು ಹಗರಣಗಳಲ್ಲಿ ಮುಳುಗಿದ್ದು, ತನ್ನ ಅಕ್ರಮಗಳನ್ನು ಮುಚ್ಚಿಟ್ಟುಕೊಳ್ಳಲು ಹೆಣಗಾಡುತ್ತಿದೆ ಎಂದು ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ವಾಗಿ ಕಿಡಿಕಾರಿದ್ದಾರೆ. ಮಂಡ್ಯದಲ್ಲಿ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ಮಾಜಿ ಸಚಿವ ನಾಗೇಂದ್ರ ರಾಜೀನಾಮೆ, ಕೆಪಿಎಸ್‌ಸಿ ಅಕ್ರಮ, ತಮಿಳುನಾಡಿಗೆ ಕಾವೇರಿ ನೀರು ಹರಿಸುತ್ತಿರುವುದು ಹಾಗೂ ಗೃಹ ಸಚಿವ ಡಾ. ಜಿ. ಪರಮೇಶ್ವರ್ ಹೇಳಿಕೆಗಳಿಗೆ ದಾಖಲೆ ಸಮೇತ ಖಾರವಾಗಿ ತಿರುಗೇಟು ನೀಡಿದರು.**

ಮಾಜಿ ಸಚಿವ ನಾಗೇಂದ್ರ ರಾಜೀನಾಮೆ ವಿಚಾರವಾಗಿ ಪ್ರತಿಕ್ರಿಯಿಸಿದ ಕುಮಾರಸ್ವಾಮಿ, "ರಾಜೀನಾಮೆಯ ಕ್ರೆಡಿಟ್ ಯಾರಿಗೆ ಹೋಗುತ್ತದೆ ಎಂಬುದು ಮುಖ್ಯವಲ್ಲ. 187 ಕೋಟಿ ಅಕ್ರಮ ಎಸಗಿದ ಕಾರಣ–ಕ್ಕೆ ಕಾಂಗ್ರೆಸ್‌ಗೆ ಉಂಟಾಗುತ್ತಿರುವ ಮುಜುಗರ ತಪ್ಪಿಸಲು ನಾಗೇಂದ್ರ ರಾಜೀನಾಮೆ ನೀಡಿದ್ದಾರೆ" ಎಂದರು. ನಾಗೇಂದ್ರ ತಮ್ಮ ಮೇಲೆಯೂ ಆರೋಪ ಮಾಡಿದ್ದಾರೆ ಎಂಬ ಪ್ರಶ್ನೆಗೆ ಉತ್ತರಿಸಿ, "ನನ್ನ ಮೇಲಿರುವುದು ರಾಜ–ಕೀಯ ಪ್ರೇರಿತ ಆರೋಪ. ನಾನು ಎಲ್ಲೂ



ಹಣ ಹೊಡೆದಿಲ್ಲ. 14 ವರ್ಷಗಳಿಂದ ಆ ಆರೋಪವನ್ನು ಜೀವಂತವಾಗಿಟ್ಟಿದ್ದಾರೆ. ನಾನು ಎರಡು ಬಾರಿ ಸಿಎಂ ಆಗಿದ್ದಾಗ ಅದನ್ನು ಮುಚ್ಚಿ ಹಾಕಬಹುದಾಗಿತ್ತು, ಆದರೆ ತನಿಖೆ ಎದು–ರಿಸಲು ಬಿಟ್ಟಿದ್ದೇನೆ" ಎಂದು ಸ್ಪಷ್ಟಪಡಿಸಿದರು.

ರಾಜ್ಯದಲ್ಲಿ ನಡೆದ ಕೆಪಿಎಸ್‌ಸಿ ನೇಮಕಾತಿ ಹಗರಣದ ಕುರಿತು ಸಚಿವ ಪ್ರಿಯಾಂಕ್ ಖರ್ಗೆ ವಿರುದ್ಧ ಹಾಯ್ದೊಡಿದ ಅವರು, "2022ರಲ್ಲಿ ನೋಟಿಫಿಕೇಶನ್ ಆಗಿ, 2024ರಲ್ಲಿ ಹುದ್ದೆ ನೀಡುವ ತೀರ್ಮಾನ ಮಾಡಲಾಗಿತ್ತು. ಔಒಖ ಶೀಟ್ ತಿದ್ದಲಾಗಿದೆ, ಭ್ರಷ್ಟಾಚಾರ ನಡೆದಿದೆ ಎಂದು ವರದಿ ಬಂದಿದ್ದರೂ ನೇಮಕಾತಿ ಮಾಡಿದ್ದು ಏಕೆ? ಸಿಎಂ ಅವರೇ ಅಕ್ರಮ ನಡೆದಿದೆ ಎಂದು ಸದನದಲ್ಲಿ ಒಪ್ಪಿಕೊಂಡಿದ್ದಾರೆ. ಆದರೂ ಸರ್ಕಾರ ಕೋರ್ಟ್‌ಗೆ ಹೋಗದೆ ಮೌನಕ್ಕೆ ಶರಣಾಗಿದ್ದೇಕೆ? ಅಕ್ರಮ ಎಸಗಿದ ಆರೋಪಿಗಳಿಗೆ ಕೆಲಸ ಕೊಟ್ಟು, ಸರ್ಕಾರಿ ಖಜಾನೆಯಿಂದ ಸಂಬಳ ನೀಡುತ್ತಿರುವುದು ನಾಚಿಕೆಗೇಡು" ಎಂದು ಆಕ್ರೋಶ ಹೊರಹಾಕಿದರು.

ಕಾವೇರಿ ಜಲಾನಯನ ಪ್ರದೇಶದ ಪರಿಸ್ಥಿತಿಯ ಬಗ್ಗೆ ಕಳವಳ ವ್ಯಕ್ತಪಡಿಸಿದ ಸಚಿವರು, "ಕೆಆರ್‌ಎಸ್ ಜಲಾಶಯ ಇನ್ನೂ ಸಂಪೂರ್ಣ ಭರ್ತಿಯಾಗಿಲ್ಲ. ಆದರೂ ಕಳೆದ ಎರಡು ತಿಂಗಳಿಂದ ತಮಿಳುನಾಡಿಗೆ ನೀರು ಹ–ರಿಸಲಾಗುತ್ತಿದೆ. ನೀರು ಬಿಡುತ್ತಿದ್ದೇವೆ ಎಂದು ಜನರಿಗೆ ಹೇಳುವ ಧೈರ್ಯ ಈ ಸರ್ಕಾರಕ್ಕಿಲ್ಲ. ತಮಿಳುನಾಡಿನವರು ಮತ್ತೆ ಮತ್ತೆ ನೀರು ಸಾಲದೆಂದು ಕೋರ್ಟ್‌ಗೆ ಹೋಗುತ್ತಿದ್ದಾರೆ. ನಮ್ಮ ಸರ್ಕಾರ ಸರಿಯಾಗಿ ವಕೀಲರನ್ನು ಸಜ್ಜುಗೊಳಿಸಿ ಕೋರ್ಟ್‌ನಲ್ಲಿ ವಾದ ಮಂಡಿಸುತ್ತಿಲ್ಲ" ಎಂದು ಬೇಸರ ವ್ಯಕ್ತಪಡಿಸಿದರು.

"ಹಗರಣ ಸಾಬೀತಾದರೆ ರಾಜೀನಾಮೆ ನೀಡುತ್ತೇನೆ" ಎಂದಿರುವ ಶಾಸಕ ಬಾಲಕೃಷ್ಣ ಹೇಳಿಕೆಗೆ ಟಾಂಗ್ ನೀಡಿದ ಅವರು, "ಮಾಗಡಿಯಲ್ಲಿ ಅಭಿವೃದ್ಧಿ ಹೆಸ–ರಿನಲ್ಲಿ 600 ಕೋಟಿ ಅವ್ಯವಹಾರ ನಡೆದಿದೆ ಎಂದು ಸದನ ಸಮಿತಿ ರಚಿಸಲಾಗಿ–ತ್ತು. ಆ ಸಮಿತಿಯ ವರದಿ ಏನಾಯಿತು, ಎಲ್ಲಿಗೆ ಹೋಯಿತು? ಅಧಿಕಾರದಲ್ಲಿರುವವರು ತಮ್ಮ ಹಳೆಯ ಲೂಟಿಗಳನ್ನು ಬಹಳ ಬೇಗ ಮರೆಯುತ್ತಾರೆ" ಎಂದು ವ್ಯಂಗ್ಯವಾಡಿದರು. ಕುಮಾರಸ್ವಾಮಿ ಬರಿ ಆರೋಪ ಮಾಡುತ್ತಿದ್ದಾರೆ ಎಂಬ ಗೃಹ ಸಚಿವ ಡಾ. ಜಿ. ಪರಮೇಶ್ವರ್ ಅವರ ಹೇಳಿಕೆಗೆ ಪ್ರತಿಕ್ರಿಯಿಸಿ, "ನಾನು ಸುಮ್ಮನೆ ಗಾಳಿಯಲ್ಲಿ ಗುಂಡು ಹಾರಿಸುತ್ತಿಲ್ಲ, ದಾಖಲೆ ಇಟ್ಟುಕೊಂಡು ಮಾತನಾಡುತ್ತಿದ್ದೇನೆ. ಅಕ್ರಮ ನಡೆದಿರುವ ಆಧಾರಗಳನ್ನು ನೀಡಿದ್ದರೂ ಗಂಧದ ಕಡ್ಡಿ ಬೆಳಗಿಕೊಂಡು ಕುಳಿತಿದ್ದೀರಾ? ನೀವು ಗೃಹಸಚಿವರಾಗಿ ಏನು ಮಾಡುತ್ತಿದ್ದೀರಿ? ನಿಮ್ಮ ತೆವಲಿಗೆ ಮಾತನಾಡಬೇಡಿ. ಜೆಡಿಎಸ್ ಅಸ್ತಿತ್ವದ ಬಗ್ಗೆ ಮಾತನಾಡುವ ಕಾಂಗ್ರೆಸ್‌ನವರು ಯಾರದ್ದೋ ವಂಶಸ್ಥರ ಹೆಸರು ಇಟ್ಟುಕೊಂಡು ರಾಜಕೀಯ ಮಾಡುತ್ತಿದ್ದಾರೆ" ಎಂದು ತೀವ್ರ ಪ್ರಹಾರ ನಡೆಸಿದರು.

# ಭಯೋತ್ಪಾದನಾ ಮುಕ್ತ ಪ್ರಾಂತ್ಯ ನಿರ್ಮಾಣವೇ ಗುರಿ

**ವಿಜಯ ದುಂಬಿ ಸುದ್ದಿ....**

**ಹೊಸದೆಹಲಿ: ಭಾರತದ ಪ್ರಾದೇಶಿಕ ಭದ್ರತೆ ಹಾಗೂ 'ಭಯೋತ್ಪಾದನಾ ಮುಕ್ತ ವಲಯ'ದ ದೂರದೃಷ್ಟಿಯನ್ನು ಬಲಪಡಿಸುವ ನಿಟ್ಟಿನಲ್ಲಿ, ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ನಾಲ್ಕು ದಿನಗಳ ಮಹತ್ವದ ದ್ವಿರಾಷ್ಟ್ರ ಪ್ರವಾಸಕ್ಕಾಗಿ ಶುಕ್ರವಾರ ಅಧಿಕೃತವಾಗಿ ಚಾಲನೆ ನೀಡಿದ್ದಾರೆ. ಈ ಪ್ರವಾಸದ ಮೊದಲ ಹಂತವಾಗಿ ಅವರು ಉಜ್ಬೇಕಿಸ್ತಾನಕ್ಕೆ ಭೇಟಿ ನೀಡಿದ್ದು, ನಂತರ ಕಿರ್ಗಿಸ್ತಾನದಲ್ಲಿ ನಡೆಯುವ ಎಸ್‌ಸಿಒ ಶೃಂಗಸಭೆಯಲ್ಲಿ ಭಾಗವಹಿಸಲಿದ್ದಾರೆ.**

ಉಜ್ಬೇಕಿಸ್ತಾನದ ಅಧ್ಯಕ್ಷ ಶವ್ಕತ್ ಮಿರ್ಜಿಯೋವ್ ಅವರ ಆಹ್ವಾನದ ಮೇರೆಗೆ ತಾಷ್ಕೆಂಟ್‌ಗೆ ತೆರಳಿರುವ ಪ್ರಧಾನಿ ಮೋದಿ, ಅಲ್ಲಿ ಉನ್ನತ ಮಟ್ಟದ ನಿಯೋಗದ ಸಭೆಗಳನ್ನು ನಡೆಸಲಿದ್ದಾರೆ. ಉಜ್ಬೇಕಿಸ್ತಾನಕ್ಕೆ ಪ್ರಧಾನಿಯಾಗಿ ಮೋದಿ ಅವರ ನಾಲ್ಕನೇ ಭೇಟಿ ಇದಾಗಿದ್ದು, ಉಭಯ ದೇಶಗಳ ನಡುವಿನ ವ್ಯೂಹಾತ್ಮಕ ಪಾಲುದಾರಿಕೆಯನ್ನು ಮತ್ತಷ್ಟು ಗಟ್ಟಿಗೊಳಿಸುವ ಕುರಿತು ವಿಸ್ತೃತ ಚರ್ಚೆಗಳು ನಡೆಯಲಿವೆ.



ವ್ಯಾಪಾರ–ವ್ಯವಹಾರ, ಹೂಡಿಕೆ, ರಕ್ಷಣೆ, ಡಿಜಿಟಲ್ ಸಂಪರ್ಕ, ಇಂಧನ ಹಾಗೂ ಶಿಕ್ಷಣ ಕ್ಷೇತ್ರಗಳಲ್ಲಿ ಪರಸ್ಪರ ಸಹಕಾರವನ್ನು ಹೆಚ್ಚಿಸುವ ಕುರಿತು ನಾಯಕರು ಸಮಾಲೋಚನೆ ನಡೆಸಲಿದ್ದಾರೆ. ಅಲ್ಲದೆ, ಭಾರತದ 'ವಿಕಸಿತ ಭಾರತ 2047' ಹಾಗೂ ಉಜ್ಬೇಕಿಸ್ತಾನದ 'ಉಜ್ಬೇಕಿಸ್ತಾನ–2030' ದೂರದೃಷ್ಟಿ ಯೋಜನೆಗಳ ನಡುವಿನ ಹೊಂದಾಣಿಕೆ ಮತ್ತು ಅಭಿವೃದ್ಧಿ ಗುರಿಗಳ ಕುರಿತು ಅಭಿಪ್ರಾಯಗಳನ್ನು ಹಂಚಿಕೊಳ್ಳಲಿದ್ದಾರೆ. ಪ್ರವಾಸದ ವೇಳೆ ಪ್ರಧಾನಮಂತ್ರಿಯವರು ತಾಷ್ಕೆಂಟ್‌ನಲ್ಲಿರುವ ಶಾಸ್ತ್ರಿ ಸ್ಮಾರಕ ಹಾಗೂ ತಾಷ್ಕೆಂಟ್ ರಾಜ್ಯ ಪ್ರಾಚ್ಯಶಾಸ್ತ್ರ ವಿಶ್ವವಿದ್ಯಾಲಯದಲ್ಲಿರುವ ಮಹಾತ್ಮ ಗಾಂಧಿ ಕೇಂದ್ರಕ್ಕೂ ಭೇಟಿ ನೀಡಲಿದ್ದಾರೆ.

ಉಜ್ಬೇಕಿಸ್ತಾನದ ಪ್ರವಾಸದ ಮುಕ್ತಾಯದ ಬಳಿಕ ಪ್ರಧಾನಿ ಮೋದಿ ಅವರು ಕಿರ್ಗಿಸ್ತಾನದ ರಾಜಧಾನಿ ಬಿಶ್ಕೆಕ್‌ಗೆ ತೆರಳಲಿದ್ದಾರೆ.

ಕಿರ್ಗಿಸ್ತಾನದ ಅಧ್ಯಕ್ಷ ಸದಿರ್ ಝಪಾರೊವ್ ಅವರ ಆಹ್ವಾನದ ಮೇರೆಗೆ ಅಲ್ಲಿ ನಡೆಯಲಿರುವ 26ನೇ ಶಾಂಘೈ ಸಹಕಾರ ಸಂಸ್ಥೆಯ ಶೃಂಗಸಭೆಯಲ್ಲಿ ಅವರು ಭಾಗವಹಿಸಲಿದ್ದಾರೆ. ಎಸ್‌ಸಿಒ ಸಂಘಟನೆಯ 25ನೇ ವಾರ್ಷಿಕೋತ್ಸವದ ಸಂದರ್ಭದಲ್ಲಿ ನಡೆಯುತ್ತಿರುವ ಈ ಶೃಂಗಸಭೆಯಲ್ಲಿ, ಪ್ರಧಾನಿ ಮೋದಿ ಅವರು ಭದ್ರತೆ, ಸಂಪರ್ಕ ಮತ್ತು ಅವಕಾಶ ಎಂಬ ಭಾರತದ ಪ್ರಮುಖ ಆದ್ಯತೆಗಳನ್ನು ಜಾಗತಿಕ ವೇದಿಕೆಯಲ್ಲಿ ಮಂಡಿಸಲಿದ್ದಾರೆ. ಶೃಂಗಸಭೆಯ ಬದಿಗಳಲ್ಲಿ ಇತರೆ ರಾಷ್ಟ್ರಗಳ ನಾಯಕರೊಂದಿಗೆ ದ್ವಿಪಕ್ಷೀಯ ಸಭೆಗಳನ್ನು ನಡೆಸುವ ಜತೆಗೆ, ಮಧ್ಯ ಏಷ್ಯಾದ ಸಾಂಸ್ಕೃತಿಕ ವೈಭವವನ್ನು ಸಾರುವ 6ನೇ ವಿಶ್ವ ನೊಮ್ಯಾಡ್ ಕ್ರೀಡಾಕೂಟದ ಉದ್ಘಾಟನಾ ಸಮಾರಂಭದಲ್ಲೂ ಅವರು ಪಾಲ್ಗೊಳ್ಳಲಿದ್ದಾರೆ.

# ಬಿಜೆಪಿ ಪಾದಯಾತ್ರೆ ಮಾಡುವುದಾದರೆ ಮಾಡಲಿ : ಡಿಕೆಶಿ

**ವಿಜಯ ದುಂಬಿ ಸುದ್ದಿ....**

**ಮೈಸೂರು: ನಾಗೇಂದ್ರ ರಾಜೀನಾಮೆ ವಿಚಾರದಲ್ಲಿ ಬಿಜೆಪಿ ತಮ್ಮ ರಾಜಕೀಯಕ್ಕಾಗಿ ನಿರಪರಾಧಿಯನ್ನು ಬಲಿ ತೆಗೆದುಕೊಂಡಿದೆ. ಯಾವ ತಪ್ಪು ಮಾಡದಿದ್ದರೂ ನಾಗೇಂದ್ರ ರಾಜೀನಾಮೆ ಕೊಟ್ಟಿದ್ದಾರೆ. ರಾಜೀನಾಮೆ ನಂತರವೂ ಬಿಜೆಪಿಯವರು ಪಾದಯಾತ್ರೆ ಮಾಡುವುದಾದರೆ ಮಾಡಲಿ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸವಾಲು ಹಾಕಿದ್ದಾರೆ.**

ಮೈಸೂರಿನಲ್ಲಿಂದು ಸುದ್ಧಿಗಾರರೊಂದಿಗೆ ಮಾತನಾಡಿದ ಅವರು, ಬಿಜೆಪಿಯವರಿಗೆ ರಾಜ–ಕೀಯ ಬೇಕು. ನನ್ನ ಒಂದೇ ಒಂದು ಪ್ರಶ್ನೆಗೆ ಬಿಜೆಪಿಯವರು ಉತ್ತರ ಕೊಡಲಿಲ್ಲ. ಯಾವ ಕಾರಣ–ಕ್ಕಾಗಿ ನಾಗೇಂದ್ರ ರಾಜೀನಾಮೆ ಕೇಳಿದರು ಎಂದು ಬಿಜೆಪಿಯವರು ಉತ್ತರಿಸಲಿ ಎಂದು ಹೇಳಿದರು. ಈ ಬಾರಿ ವಿಭಿನ್ನವಾದ ದಸರಾ ಮಾಡುತ್ತೇವೆ. ದಸರಾ ಮೆರವಣಿಗೆಯ ರೂಪವನ್ನೇ ಬದಲಾಯಿಸುತ್ತೇವೆ. ಮೆರವಣಿಗೆಯಲ್ಲಿ ಮಿಲಿಟರಿ, ಸೇನಾ ಪಡೆಗಳು ಬರಲಿವೆ. ಕನ್ನಡದ ಚಿತ್ರ ನಟ–ನಟಿಯರು ಕೂಡ ಮೆರವಣಿಗೆಯಲ್ಲಿ ಸಾಗಲಿದ್ದಾರೆ. ಒಂದೇ ಪ್ರಕಾರದ ಐದು ಜನಪದ ಕಲಾವಿದರಿಗೆ ಈ ಬಾರಿ ಅವಕಾಶ



ಇಲ್ಲ. ಬದಲಾದ ಕಾಲಕ್ಕೆ ತಕ್ಕಂತೆ ಮೆರವಣಿಗೆಯ ರೂಪ ಬದಲಾಯಿಸುತ್ತೇನೆ ಎಂದರು.

ಕಂಬಳವನ್ನು ನಾನು ಪ್ರತಿಷ್ಠೆಯಾಗಿ ತೆಗೆದುಕೊಂಡಿಲ್ಲ. ಇನ್ನೂ ಕಂಬಳದ ಬಗ್ಗೆ ಚರ್ಚೆ ಮಾಡುತ್ತಿದ್ದೇನೆ. ಪರಿಸರ ಹಾನಿ ಎನ್ನುವುದೆಲ್ಲಾ ಸುಮ್ಮನೆ ನೆಪ. ಯಾವುದೇ ಪರಿಸರ ಹಾನಿಯಾಗುವುದಿಲ್ಲ, ನೀರು ಕೂಡ ಹೆಚ್ಚಾಗಿ ಬೇಕಾಗಿಲ್ಲ. ಸುಮ್ಮನೆ ಕೆಲವರು ವಿರೋಧ ಮಾಡುತ್ತಿದ್ದಾರೆ. ಈ ಬಗ್ಗೆ ಅಂತಿಮ ತೀರ್ಮಾನ ಮಾಡುತ್ತೇನೆ ಎಂದರು.

ಬರದ ನೆಪದಲ್ಲಿ ಸರಳ ದಸರಾ ಇಲ್ಲ : ಬರದ ನೆಪದಲ್ಲಿ ದಸರಾವನ್ನು ಸರಳ ಮಾಡಲು ಸಾಧ್ಯವಿಲ್ಲ. ನನ್ನ ನಿಲುವಿನಲ್ಲಿ ಯಾವ ಬದಲಾವಣೆ ಇಲ್ಲ. ದಸರಾ ಅದ್ದೂರಿಯಾಗಿ ಮಾಡುತ್ತೇನೆ, ಅದರಲ್ಲಿ ಬದಲಾವಣೆ ಪ್ರಶ್ನೆಯೇ ಇಲ್ಲ. ದಸರಾ ಮೇಲೆ ಇಡೀ ಪ್ರವಾಸೋದ್ಯಮ ನಿಂತಿದೆ ಎಂದು ಸ್ಪಷ್ಟಪಡಿಸಿದರು.

ಎಚ್‌ಡಿಕೆಗೆ ತಿರುಗೇಟು : ವಿಧಾನಸೌಧ ಮಾರುತ್ತಾರೆ ಎಂಬ ಎಚ್.ಡಿ. ಕುಮಾರಸ್ವಾಮಿ ಹೇಳಿಕೆಗೆ ತಿರುಗೇಟು ನೀಡಿದ ಸಿಎಂ, ಯಾರ್ಯಾರು ಏನೇನು ಮಾರಲು ಹೊರಟಿದ್ದರು ಎಂಬ ಚರಿತ್ರೆ ಬಿಚ್ಚಿಟ್ಟರೆ ಎಲ್ಲವೂ ಬಯಲಾಗುತ್ತದೆ. ನಾನು ಸದ್ಯಕ್ಕೆ ಆ ತಂಟೆಗೆ ಹೋಗುವುದಿಲ್ಲ. ಕುಮಾರಸ್ವಾಮಿ ಬಾಯಿ ಚಪಲ, ಚಪಲಕ್ಕೆ ಮಾತನಾಡಿ ಖುಷಿ ಪಡಲಿ ಬಿಡಿ. ಅಸೂಯೆಗೆ ಮದ್ದಿಲ್ಲ, ನಾನು ಸಿಎಂ ಆಗಿರುವುದು ಕೆಲವರಿಗೆ ಅಸೂಯೆ ತಂದಿದೆ. ಕುಮಾರಸ್ವಾಮಿ ಮಾತ್ರವಲ್ಲ, ಬಿಜೆಪಿ ಜೊತೆಗೆ ಎನ್‌ಡಿಎ ಇಡೀ ಕೂಟಕ್ಕೆ ನಾನು ಸಿಎಂ ಆಗಿರುವುದು ಸಹಿಸಲು ಸಾಧ್ಯವಿಲ್ಲ. ಟೀಕೆಗಳು ಸಾಯುತ್ತವೆ, ಮಾಡಿದ ಕೆಲಸ ಉಳಿಯುತ್ತದೆ ಎಂಬುದನ್ನು ನಂಬಿದವನು ನಾನು ಎಂದರು.

ಗ್ರೇಟರ್ ಮೈಸೂರು ರಚನೆಗೆ ಚಿಂತನೆ: ಕಾವೇರಿ ಸಮಸ್ಯೆ ಇದ್ದ ಕಾರಣ ಮೈಸೂರು ಕಡೆ ಗಮನ ಹರಿಸಲು ಆಗಿರಲಿಲ್ಲ. ಉತ್ತರ ಕರ್ನಾಟಕ ಭಾಗದ ಬಗ್ಗೆ ಗಮನ ಹರಿಸಿದ್ದೆ, ಈಗ ಮೈಸೂರು ಕಡೆಗೂ ಗಮನ ಹರಿಸುತ್ತೇನೆ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದ್ದಾರೆ. ಡಿಜಿಟಲ್ಮ್ಯಾಪ್ ಮತ್ತು ನ್ಯಾವಿಗೇಷನ್ ಉಪಕರಣಗಳನ್ನು ಬಳಸುವುದು ಮೈಸೂರಿನಲ್ಲಿ ಮಾತನಾಡಿದ ಅವರು, ಬೆಂಗಳೂ–ರಿಗಿಂತ ಮೈಸೂರು ಬಹಳ ಅಚ್ಚುಕಟ್ಟಾದ ನಗರ. ಮೈಸೂರು ಅಚ್ಚುಕಟ್ಟಾಗಿ ಬೆಳೆಯುತ್ತಿದೆ, ಇದನ್ನು ಕಾಪಾಡುವುದು ನನ್ನ ಜವಾಬ್ದಾರಿ. ಭವಿಷ್ಯದ ದೃಷ್ಟಿಯಿಂದ ಹಲವು ಯೋಜನೆಗಳನ್ನು ಚಿಂತನೆ ಮಾಡಿದ್ದೇನೆ. ಸಿದ್ದರಾಮಯ್ಯನವರು ಗ್ರೇಟ–ರ್ ಮೈಸೂರು ಬಗ್ಗೆ ಭರವಸೆ ಕೊಟ್ಟಿದ್ದರು, ಅದನ್ನು ಈಡೇರಿಸುವುದು ನಮ್ಮ ಜವಾಬ್ದಾರಿ.

ಕೆಲ ದಿನಗಳಲ್ಲೇ ಈ ಭಾಗದ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳನ್ನು ಕರೆದು ಸಭೆ ನಡೆಸಿ ಚರ್ಚಿಸುತ್ತೇನೆ ಎಂದರು. ಹನೂರು ಶೂಟೌಟ್ ಪ್ರಕರಣ ಸಿಒಡಿಗೆ : ಹನೂರು ಶೂಟೌಟ್ ವಿಚಾರಕ್ಕೆ ಸಂಬಂಧಿಸಿದಂತೆ ತನಿಖಾ ವರದಿ ಕೈಸೇರಿದೆ. ಇಡೀ ಪ್ರಕರಣವನ್ನು ಸಿಒಡಿಗೆ ವಹಿಸಿದ್ದೇವೆ, ತನಿಖೆ ನಡೆಯುತ್ತಿದೆ. ಈಗ ಬಂದಿರುವ ತನಿಖಾ ವರದಿಯಲ್ಲಿ ಹಲವು ಅಂಶಗಳಿವೆ. ಆರೋಪಿಗಳು ಹತ್ತಿರದಿಂದ ಶೂಟ್ ಮಾಡಿರುವ ಬಗ್ಗೆ, ಅವರ ಬಳಿ ಏನೇನು ವಸ್ತುಗಳಿದ್ದವು, ಕಾಡಿಗೆ ಯಾವ ಕಾರಣಕ್ಕೆ ಹೋದರು ಎಂಬ ಬಗ್ಗೆ ಪ್ರಸ್ತಾಪವಿದೆ. ಸಿಒಡಿ ತನಿಖೆ ಮುಗಿದ ಬಳಿಕ ಎಲ್ಲವೂ ಬಹಿರಂಗವಾಗುತ್ತದೆ ಎಂದು ಸಿಎಂ ಸ್ಪಷ್ಟಪಡಿಸಿದರು

# ಸಾರ್ವಜನಿಕ ಸ್ಥಳಗಳಲ್ಲಿ ಮಲ ತ್ಯಾಜ್ಯ ಸುರಿದರೆ ಪ್ರಕರಣ ದಾಖಲು: ಸಿಇಓ ಡಾ. ವೈ.ನವೀನ್ ಭಟ್

**ವಿಜಯ ದುಂಬಿ ಸುದ್ದಿ....**

**ಚಿಕ್ಕಬಳ್ಳಾಪುರ: ಜಿಲ್ಲೆಯಲ್ಲಿ ಸ್ವಚ್ಛ ಭಾರತ್ ಮಿಷನ್(ಗ್ರಾಮೀಣ) ಯೋಜನೆಯಡಿ ಒಟ್ಟು 6 ಮಲತ್ಯಾಜ್ಯ ಸಂಸ್ಕರಣಾ ಘಟಕ (FSTP-Fecal Sladge Treatment Plant) ಗಳು ಕಾರ್ಯಾರಂಭಗೊಂಡಿದ್ದು, ಖಾಸಗಿ ಸಕ್ಕಿಂಗ್ ವಾಹನ ಮಾಲೀಕರು ಗ್ರಾಮೀಣ ಭಾಗದಲ್ಲಿ ಸಕ್ಕಿಂಗ್ ಮಾಡಿಕೊಂಡು ತರುವ ಮಲ ತ್ಯಾಜ್ಯವನ್ನು ಈ ಘಟಕಗಳಲ್ಲೇ ಕಡ್ಡಾಯವಾಗಿ ವಿಲೇವಾರಿ ಮಾಡಬೇಕು.**

ಇದನ್ನು ಮೀರಿ ಎಲ್ಲಾದರೂ ಸಾರ್ವಜನಿಕ ಸ್ಥಳಗಳಲ್ಲಿ ಸುರಿಯುವುದು ಕಂಡು ಬಂದಲ್ಲಿ ಅಂತಹ ವಾಹನ ಮಾಲೀಕರ ವಿರುದ್ಧ ಕಾನೂನು ಕ್ರಮ ಜರುಗಿಸಲಾಗುವುದು ಎಂದು ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ.ನವೀನ್ ಭಟ್.ವೈ.ರವರು ತಿಳಿಸಿದ್ದಾರೆ. ಈ ಬಗ್ಗೆ ಮಾಹಿತಿ ನೀಡಿ ಮಾತನಾಡಿ, ಜಿಲ್ಲೆಯ ಚಿಕ್ಕಬಳ್ಳಾಪುರ ತಾಲ್ಲೂಕಿನ ಪೋಶೆಟ್ಟಿಹಳ್ಳಿ(ಕೊಲುಮೇನಹಳ್ಳಿ ಗ್ರಾಮ), ಗೌರಿಬಿದನೂರು ತಾಲ್ಲೂಕಿನ ಹುದುಗೂರು, ಶಿಡ್ಲಘಟ್ಟ ತಾಲ್ಲೂಕಿನ ಮಳಮಾಚನಹಳ್ಳಿ ಮತ್ತು ದೊಡ್ಡತೇಕಹಳ್ಳಿ, ಚಿಂತಾಮಣಿ ತಾಲ್ಲೂಕಿನ ಕೆಂಚಾರ್ಲಹಳ್ಳಿ (ಮರಬಲ್ಲಿ ಗ್ರಾಮ) ಹಾಗೂ ಬಾಗೇಪಲ್ಲಿ ತಾಲ್ಲೂಕಿನ ಬಿಳ್ಳೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಮಲ ತ್ಯಾಜ್ಯ ಸಂಸ್ಕರಣಾ ಘಟಕಗಳನ್ನು ನಿರ್ಮಾಣ ಮಾಡಲಾಗಿದೆ. ಪ್ರಸ್ತುತ ಎಲ್ಲಾ ಘಟಕಗಳು ಕಾರ್ಯಚರಣೆಯಲ್ಲಿದ್ದು,



ಗ್ರಾಮೀಣ ಪ್ರದೇಶದ ಗೃಹ ಶೌಚಾಲಯಗಳ ಗುಂಡಿಗಳಿಂದ ಸಕ್ಕಿಂಗ್ ಮಾಡಿಕೊಂಡು ಬರುವ ಖಾಸಗಿ ಸಕ್ಕಿಂಗ್ ಯಂತ್ರ ವಾಹನಗಳ ಮಾಲೀಕರು, ಮಲ ತ್ಯಾಜ್ಯವನ್ನು ಕಡ್ಡಾಯವಾಗಿ ಈ ಘಟಕಗಳಿಗೆ ತಂದು ವೈಜ್ಞಾನಿಕವಾಗಿ ವಿಲೇವಾರಿ ಮಾಡಬೇಕು ಒಂದು ವೇಳೆ ಸಾರ್ವಜನಿಕ ಸ್ಥಳಗಳಲ್ಲಿ ಮಲ ತ್ಯಾಜ್ಯ ಸುರಿಯುವುದು ಕಂಡು ಬಂದಲ್ಲಿ ಅಂತಹವರ ವಿರುದ್ಧ ಕ್ರಿಮಿನಲ್ ಕೇಸು ದಾಖಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ. ಜಿಲ್ಲೆಯನ್ನು ಈಗಾಗಲೇ ಬಯಲು ಬಹಿರ್ದೇಸೆ ಮುಕ್ತ ಜಿಲ್ಲೆಯನ್ನಾಗಿ ಘೋಷಣೆ ಮಾಡಲಾಗಿದೆ. ಜಿಲ್ಲೆಯಲ್ಲಿ ಈವರೆಗೆ ಒಟ್ಟು 2,57,256 ವೈಯಕ್ತಿಕ ಗೃಹ ಶೌಚಾಲಗಳನ್ನು ನಿರ್ಮಾಣ ಮಾಡಲಾಗಿದೆ.

ಗ್ರಾಮೀಣ ಭಾಗದ ಕೆಲವು ಕಡೆಗಳಲ್ಲಿ ಶೌಚಾಲಯಗಳು ತುಂಬಿವೆ. ಮುಂದಿನ ದಿನಗಳಲ್ಲಿ ಬಹುತೇಕ ಶೌಚಾಲಯಗಳು ತುಂಬಲಿವೆ. ಹಾಗಾಗಿ ಸಕ್ಕಿಂಗ್ ವಾಹನ ಮಾಲೀಕರು ಯಾವುದೇ ಕಾರಣಕ್ಕೂ ಮಲ ತ್ಯಾಜ್ಯವನ್ನು ರಸ್ತೆ ಬದಿ, ಅರಣ್ಯ, ನದಿ-ಕುಂಟೆ, ಗುಡ್ಡಗಾಡು ಸೇರಿದಂತೆ ಇನ್ನಿತರೆ ಯಾವುದೇ ಸಾರ್ವಜನಿಕ ಸ್ಥಳಗಳಲ್ಲಿ ವಿಲೇವಾರಿ ಮಾಡಬಾರದು. ಇದು ಖಫಾಒ ಖಿಂಟಙ-2026 ಕಾಯ್ದೆ ಪ್ರಕಾರ ಅಪರಾಧವಾಗಿದ್ದು, ಸರ್ಕಾರ ನಿಗಧಿ ಪಡಿಸಿದ ಈ ಈಖಖಿಕ ಘಟಕಗಳಲ್ಲೇ ವೈಜ್ಞಾನಿಕವಾಗಿ ವಿಲೇವಾರಿ ಮಾಡಬೇಕು ಎಂದು ಕಟ್ಟು ನಿಟ್ಟಿನ ಸೂಚನೆ ನೀಡಿದ್ದಾರೆ.

ಸಾರ್ವಜನಿಕರು ಕೂಡ ರಸ್ತೆಬದಿ, ಕೆರೆ, ಕುಂಟೆ, ನದಿ, ಅರಣ್ಯ, ಬೆಟ್ಟ ಗುಡ್ಡ ಸೇರಿದಂತೆ ಎಲ್ಲಾದರೂ ಸಾರ್ವಜನಿಕ ಸ್ಥಳಗಳಲ್ಲಿ ಮಲ ತ್ಯಾಜ್ಯವನ್ನು ಸುರಿಯುವುದು. ಕಸವನ್ನು ಎಲ್ಲೆಂದರಲ್ಲಿ ಸುರಿಯುವುದು ಕಂಡು ಬಂದಲ್ಲಿ ಸಹಾಯವಾಣಿ ಸಂಖ್ಯೆ 8884777235 ಗೆ ಕರೆ ಮಾಡಿ ದೂರು ಸಲ್ಲಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಗೌರಿಬಿದನೂರು ತಾಲ್ಲೂಕಿನ ಹುದುಗೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಮಲ ತ್ಯಾಜ್ಯ ಸಂಸ್ಕರಣಾ ಘಟಕಕ್ಕೆ ಜಿಲ್ಲಾ ಪಂಚಾಯಿತಿ ಸಿಇಓ ಡಾ.ನವೀನ್ ಭಟ್ ವೈ ಅವರು ಶನಿವಾರ ಭೇಟಿ ನೀಡಿ ಪರಿಶೀಲಿಸಿದರು.

# ಮಂತ್ರಿಗಿರಿಗೆ ಪೈಪೋಟಿ

**ವಿಜಯ ದುಂಬಿ ಸುದ್ದಿ....**

**ಬೆಂಗಳೂರು: ಸಚಿವ ಸ್ಥಾನಕ್ಕೆ ನಾಗೇಂದ್ರ ಅವರು ರಾಜೀನಾಮೆ ನೀಡಿದ ಬೆನ್ನಲ್ಲೆ ಕಾಂಗ್ರೆಸ್‌ನಲ್ಲಿ ಚಟುವಟಿಕೆಗಳು ಗರಿಗೆದರಿದ್ದು, ಖಾಲಿ ಇರುವ ಸಚಿವ ಸ್ಥಾನಕ್ಕೆ ಪೈಪೋಟಿ ಬಿರುಸುಗೊಂಡಿದೆ. ರಾಜ್ಯ ಸಚಿವ ಸಂಪುಟದಲ್ಲಿ 2 ಸ್ಥಾನಗಳು ಖಾಲಿ ಇದ್ದು, ಈ ಸ್ಥಾನಗಳಿಗೆ ಭಾರೀ ಪೈಪೋಟಿಯೇ ಏರ್ಪಟ್ಟಿದ್ದು, ಯಾರನ್ನು ಸಚಿವರನ್ನಾಗಿಸಬೇಕು ಎಂಬುದು ಕೈ ನಾಯಕರಿಗೆ ತಲೆನೋವಾಗಿದೆ.**

ಈ ಹಿಂದೆ ಎರಡನೇ ಹಂತದ ಸಂಪುಟ ವಿಸ್ತರಣೆಯಲ್ಲಿ



ಅಸಮಾಧಾನಗೊಂಡಿದ್ದ ಹಿರಿಯ ಶಾಸಕರಿಗೆ ಸಚಿವ ಸ್ಥಾನ ಭರವಸೆ ನೀಡಲಾಗಿತ್ತು. ಈಗ ಆ ಹಿರಿಯ ಶಾಸಕರಿಗೆ ಸಚಿವ ಸ್ಥಾನ ನೀಡಬೇಕೋ ಇಲ್ಲವೇ ವಾಲ್ಮೀಕಿ ಸಮುದಾಯದವರಿಗೆ ಸಚಿವ ಸ್ಥಾನ ನೀಡಬೇಕೆ ಎಂಬುದು ಈಗ ಕಾಂಗ್ರೆಸ್‌ನಲ್ಲಿ ಚರ್ಚೆಗೆ ಗ್ರಾಸವಾಗಿದೆ. ಸಚಿವ ನಾಗೇಂದ್ರ ರವರ ಸ್ಥಾನಕ್ಕೆ ವಾಲ್ಮೀಕಿ ಸಮುದಾಯದವರಿಗೆ ಸಚಿವ ಸ್ಥಾನ ನೀಡಬೇಕು ಎಂಬ ಒತ್ತಡಗಳು ಇವೆ. ಜತೆಗೆ ಸಚಿವ ಸಂಪುಟದಲ್ಲಿ ಮಹಿಳೆಯರಿಗೆ ಅವಕಾಶ ನೀಡಿಲ್ಲ. ಹಾಗಾಗಿ 3ನೇ ಹಂತದ ಸಚಿವ ಸಂಪುಟ ವಿಸ್ತರಣೆ ಅಷ್ಟು ಸುಲಭವಲ್ಲ. ಸಚಿವ ಸ್ಥಾನ ಸಿಗದೆ ಮುನಿಸಿಕೊಂಡಿರುವ ಹಿರಿಯ ಶಾಸಕ ಎಂ. ಕೃಷ್ಣಪ್ಪನವರಿಗೆ ಸಚಿವ ಸ್ಥಾನ ನೀಡಲೇಬೇಕಾದ ಅನಿವಾರ್ಯತೆ ಇದೆ. ಒಕ್ಕಲಿಗ ಸಮುದಾಯದ ಸಚಿವರೊಬ್ಬರಿಂದ ರಾಜೀನಾಮೆ ಕೊಡಿಸಿ, ಕೃಷ್ಣಪ್ಪನವರಿಗೆ ಸಂಪುಟದಲ್ಲಿ ಅವಕಾಶ ಮಾಡಿಕೊಡುವ ಬಗ್ಗೆ ಚರ್ಚೆಗಳು ನಡೆದಿದ್ದವಾದರೂ ಒಕ್ಕಲಿಗ ಸಮುದಾಯದ ಸಚಿವರುಗಳು ರಾಜೀನಾಮೆಗೆ ಹಿಂದೇಟು ಹಾಕಿರುವುದು 3ನೇ ಹಂತದ ಸಂಪುಟ ವಿಸ್ತರಣೆ ಕಗ್ಗಂಟ್ಟಾಗಿ ಪರಿಣಮಿಸಿದೆ. ನಾಗೇಂದ್ರ ರಾಜೀನಾಮೆಯಿಂದ ತೆರವಾಗಿರುವ ಸ್ಥಾನಕ್ಕೆ ವಾಲ್ಮೀಕಿ ಸಮುದಾಯಕ್ಕೆ ಸೇರಿದ ಅನ್ನಪೂರ್ಣ ತುಕರಾಂ ರವರಿಗೆ ಅವಕಾಶ ನೀಡಿ ಮಹಿಳೆಯರು ಮತ್ತು ವಾಲ್ಮೀಕಿ ಸಮುದಾಯ ಎರಡಕ್ಕೂ ಪ್ರಾತಿನಿಧ್ಯ ಕಲ್ಪಿಸುವ ಚಿಂತನೆ ಇದೆಯಾದರೂ ಪ್ರಥಮ ಬಾರಿಗೆ ಅದರಲ್ಲೂ ಉಪಚುನಾವಣೆಯಲ್ಲಿ ಗೆದ್ದಿರುವ ಅನ್ನಪೂರ್ಣ ತುಕರಾಂರವರಿಗೆ ಸಚಿವ ಸ್ಥಾನ ನೀಡುವ ಬಗ್ಗೆ ಕಾಂಗ್ರೆಸ್‌ನಲ್ಲಿ ಸ್ವಲ್ಪ ಮಟ್ಟಿಗೆ ವಿರೋಧ ವ್ಯಕ್ತವಾಗಿದೆ. ಅದರ ಬದಲು ಎರಡು ಮೂರು ಬಾರಿ ಗೆದ್ದಿರುವ ವಾಲ್ಮೀಕಿ ಸಮುದಾಯದ ಬೇರೆ ಶಾಸಕರನ್ನು ಮಂತ್ರಿ ಮಾಡಿ ಎಂಬ ಬೇಡಿಕೆಯೂ ಇದೆ. ಹೀಗಾಗಿ 3ನೇ ಹಂತದ ಸಂಪುಟ ವಿಸ್ತರಣೆ ಭಾರೀ ಸವಾಲಾಗಿ ಪರಿಣಮಿಸಿದೆ. ಯಾರನ್ನು ಕೈ ಬಿಡಬೇಕು, ಯಾರನ್ನು ಮಂತ್ರಿ ಮಾಡಬೇಕು, ಮಹಿಳಾ ಕೋಟಾದಲ್ಲಿ ಯಾರಿಗೆ ಅವಕಾಶ ಕಲ್ಪಿಸಬೇಕು ಎಂಬೆಲ್ಲಾ ವಿಚಾರಗಳು ಕಾಂಗ್ರೆಸ್ ನಾಯಕರ ತಲೆನೋವನ್ನು ಹೆಚ್ಚು ಮಾಡಿವೆ. ಖಾಲಿ ಇರುವ ಸ್ಥಾನದಲ್ಲಿ ಒಂದು ಸ್ಥಾನವನ್ನು ಕುರುಬ ಸಮುದಾಯದ ಬಸವರಾಜ ನೀಲಣ್ಣ ಶಿವಣ್ಣನವರಿಗೆ ನೀಡಬೇಕು ಎಂದು ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಒತ್ತಡ ಹೇರಿದ್ದಾರೆ. ಹಾಗಾಗಿ ವರಿಷ್ಠರು ಸಂಪುಟ ವಿಸ್ತರಣೆಯ ಬಿಕ್ಕಟ್ಟಿಗೆ ಯಾವ ಪರಿಹಾರ ಒದಗಿಸುತ್ತಾರೆ ಎಂಬುದು ಕುತೂಹಲ ಮೂಡಿಸಿದೆ. ಡಿಕೆಶಿ ಮತ್ತೆ ದೆಹಲಿಗೆ: ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಸಚಿವ ಬಿ. ನಾಗೇಂದ್ರ ರವರ ರಾಜೀನಾಮೆ, ಸಂಪುಟ ವಿಸ್ತರಣೆ ಎಲ್ಲದರ ಬಗ್ಗೆ ಎರಡು ದಿನಗಳ ಹಿಂದೆ ದೆಹಲಿಗೆ ತೆರಳಿ ಕಾಂಗ್ರೆಸ್ ವರಿಷ್ಠ ರಾಹುಲ್‌ಗಾಂಧಿಯವರ ಜತೆ ಚರ್ಚೆ ನಡೆಸಿದ್ದರು. ಈ ಚರ್ಚೆಯ ಸಂದರ್ಭದಲ್ಲಿ ರಾಹುಲ್‌ಗಾಂಧಿಯವರು ಮತ್ತೆ ಸೋಮವಾರ ದೆಹಲಿಗೆ ಬನ್ನಿ, 3ನೇ ಹಂತದ ಸಂಪುಟ ವಿಸ್ತರಣೆಯನ್ನು ಅಂತಿಮಗೊಳಿಸೋಣ ಎಂದು ಸೂಚಿಸಿದ್ದರು. ಅದರಂತೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸೋಮವಾರ ಮತ್ತೆ ದೆಹಲಿಗೆ ತೆರಳುತ್ತಿದ್ದಾರೆ. ಸೋಮವಾರ ದೆಹಲಿಯಲ್ಲಿ ವರಿಷ್ಠರು 3ನೇ ಹಂತದ ಸಂಪುಟ ವಿಸ್ತರಣೆ, ಯಾರನ್ನು ಸಂಪುಟಕ್ಕೆ ಸೇರಿಸಿಕೊಳ್ಳಬೇಕು, ಯಾರನ್ನು ಕೈಬಿಡಬೇಕು ಎಲ್ಲವನ್ನು ಇತ್ಯರ್ಥ ಮಾಡಲಿದ್ದಾರೆ. ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ರವರ ಜತೆ ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ರವರಿಗೂ ಸೋಮವಾರ ದೆಹಲಿಗೆ ಬರುವಂತೆ ಹೈಕಮಾಂಡ್ ಸೂಚಿಸಿದ್ದು, ಬಹುತೇಕ ಸೋಮವಾರ 3ನೇ ಹಂತದ ಸಂಪುಟ ವಿಸ್ತರಣೆಗೆ ಮುಹೂರ್ತ ನಿಗದಿಯಾಗಲಿದ್ದು, ಮುಂದಿನ ವಾರ ಸಂಪುಟ ವಿಸ್ತರಣೆಯಾಗುವ ಸಾಧ್ಯತೆಗಳು ಹೆಚ್ಚಿವೆ. ಆಕಾಂಕ್ಷಿಗಳು ದೆಹಲಿಗೆ ದೌಡು : ಮೂರನೇ ಹಂತದ ಸಚಿವ ಸಂಪುಟ ವಿಸ್ತರಣೆ ಸಂಬಂಧ ದೆಹಲಿಯಲ್ಲಿ ಸೋಮವಾರ ವರಿಷ್ಠರ ಸಭೆ ನಿಗದಿಯಾಗಿರುವ ನಡುವೆಯೇ ಸಚಿವ ಸ್ಥಾನದ ಮೇಲೆ ಕಣ್ಣಿಟ್ಟಿರುವ ಹಲವು ಶಾಸಕರು ದೆಹಲಿಗೆ ದೌಡಾಯಿಸಿದ್ದಾರೆ. ಸಚಿವ ಸಂಪುಟದಲ್ಲಿ ಖಾಲಿ ಇರುವ 2 ಸ್ಥಾನಗಳಿಗೆ ಪೈಪೋಟಿ ಇರುವಾಗಲೇ ಕೆಲವರನ್ನು 3-4 ಸಚಿವರನ್ನು ಕೈಬಿಟ್ಟು, ಹಿರಿಯರಾದ ನಮಗೆ ಅವಕಾಶ ಕೊಡಿ ಎಂದು ಕಾಂಗ್ರೆಸ್‌ನ 8-10 ಹಿರಿಯ ಶಾಸಕರು ಹೈಕಮಾಂಡ್ ನಾಯಕರಲ್ಲಿ ಮನವಿ ಮಾಡಿದ್ದಾರೆ.

# ಭಗತ್ ಸಿಂಗ್ ಚಾರಿಟೇಬಲ್ ಟ್ರಸ್ಟ್ ಅಧ್ಯಕ್ಷ ಸಂದೀಪ್ ರೆಡ್ಡಿ ಅವರಿಂದ ಉಚಿತಾ ಆರೋಗ್ಯ ಶಿಬಿರ

**ವಿಜಯ ದುಂಬಿ ಸುದ್ದಿ....**

**ಚಿಕ್ಕಬಳ್ಳಾಪುರ: ಬೆಂಗಳೂರಿನ ಈಸ್ಟ್ ಪಾಯಿಂಟ್ ಆಸ್ಪತ್ರೆಯ ಸಹಕಾರದೊಂದಿಗೆ ಭಗತ್ ಸಿಂಗ್ ಚಾರಿಟೇಬಲ್ ಟ್ರಸ್ಟ್ ಅಧ್ಯಕ್ಷ ಸಂದೀಪ್ ರೆಡ್ಡಿ ಅವರ ವತಿಯಿಂದ ತಾಲ್ಲೂಕಿನ ಎಸ್.ಗೊಲ್ಲಹಳ್ಳಿ ಗ್ರಾಮದಲ್ಲಿ ಶನಿವಾರ ಆರನೇ ಉಚಿತ ಆರೋಗ್ಯ ತಪಾಸಣಾ ಶಿಬಿರವನ್ನು ಆಯೋಜಿಸಲಾಗಿತ್ತು. ಸುತ್ತಮುತ್ತಲಿನ ಗ್ರಾಮಗಳ ಜನರಿಗಾಗಿ ಹಮ್ಮಿಕೊಂಡಿದ್ದ ಶಿಬಿರದಲ್ಲಿ 400ಕ್ಕೂ ಹೆಚ್ಚು ಮಂದಿ ಭಾಗವಹಿಸಿದ್ದರು.**

ಹೃದಯ, ಕಣ್ಣು, ಮೂಳೆ, ಕಿವಿ-ಮೂಗು-ಗಂಟಲು, ಚರ್ಮರೋಗ ಸೇರಿದಂತೆ ವಿವಿಧ ಆರೋಗ್ಯ ಸಮಸ್ಯೆಗಳಿಗೆ ತಜ್ಞ ವೈದ್ಯರಿಂದ ತಪಾಸಣೆ ಮಾಡಿಸಿಕೊಂಡು, ಸೂಕ್ತ ವೈದ್ಯಕೀಯ ಸಲಹೆ ಪಡೆದರು. ಶಿಬಿರದಲ್ಲಿ ರೋಗಿಗಳಿಗೆ ಉಚಿತವಾಗಿ ಔಷಧಿಗಳನ್ನು ವಿತರಿಸಲಾಯಿತು. ಅಗತ್ಯವಿರುವವರಿಗೆ ಕನ್ನಡಕಗಳನ್ನು ಸಹ ನೀಡಲಾಯಿತು.ಶಸ್ತ್ರಚಿಕಿತ್ಸೆ ಅಗತ್ಯವಿರುವ ರೋಗಿಗಳನ್ನು ಬೆಂಗಳೂರಿಗೆ ಕರೆದುಕೊಂಡು ಹೋಗಿ, ಶಸ್ತ್ರಚಿಕಿತ್ಸೆ ಪೂರ್ಣಗೊಂಡ ಬಳಿಕ



ಮತ್ತೆ ಗ್ರಾಮಕ್ಕೆ ಕರೆತರುವ ವ್ಯವಸ್ಥೆ ಮಾಡಲಾಗಿದೆ ಎಂದು ಆಯೋಜಕರು ತಿಳಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಸಂದೀಪ್ ರೆಡ್ಡಿ, ಆರೋಗ್ಯವಂತ ಸಮಾಜ ನಿರ್ಮಾಣಕ್ಕೆ ಪ್ರತಿಯೊಬ್ಬರೂ ಕೈಜೋಡಿಸಬೇಕು.ಬಡವರಿಗೆ ಜೀವನ ನಡೆಸುವುದೇ ಕಷ್ಟಕರವಾಗಿದ್ದು,ಇಂತಹ ಸಂದರ್ಭದಲ್ಲಿ ಆರೋಗ್ಯ ಸಮಸ್ಯೆಗಳು ಎದುರಾದರೆ ವೈದ್ಯಕೀಯ ವೆಚ್ಚ ಭರಿಸಲು ಸಾಧ್ಯವಾಗದೆ ಮತ್ತಷ್ಟು ಸಂಕಷ್ಟಕ್ಕೆ ಸಿಲುಕುತ್ತಾರೆ.

ಈ ಹಿನ್ನೆಲೆಯಲ್ಲಿ ಬಡವರಿಗೆ ನೆರವಾಗುವ ಉದ್ದೇಶದಿಂದ ಉಚಿತ ಆರೋಗ್ಯ ತಪಾಸಣಾ ಶಿಬಿರಗಳನ್ನು ಆಯೋಜಿಸಲಾಗುತ್ತಿದೆ ಎಂದರು.ಸರ್ಕಾರಿ ಆಸ್ಪತ್ರೆಗಳಲ್ಲಿ ಅಗತ್ಯ ಸೌಲಭ್ಯಗಳು ಸಮರ್ಪಕವಾಗಿ ಲಭ್ಯವಿದ್ದರೆ ಇಂತಹ ಆರೋಗ್ಯ ಶಿಬಿರಗಳನ್ನು ಆಯೋಜಿಸುವ ಪರಿಸ್ಥಿತಿ ಎದುರಾಗುತ್ತಿರಲಿಲ್ಲ. ಪ್ರತಿಯೊಬ್ಬರಿಗೂ ಗುಣಮಟ್ಟದ ಆರೋಗ್ಯ ಸೇವೆ ತಲುಪುವಂತಾಗಬೇಕು ಎಂದು ಅವರು ಹೇಳಿದರು. ನಾಗೇಂದ್ರಗೆ ತಡವಾದರೂ ರಾಜೀನಾಮೆ ಆಗಿದೆ ವಾಲ್ಮೀಕಿ ಅಭಿವೃದ್ಧಿ ನಿಗಮದ ಹಗರಣದ ಆರೋಪಕ್ಕೆ ಸಂಬಂಧಿಸಿದಂತೆ ನಾಗೇಂದ್ರ ಅವರ ರಾಜೀನಾಮೆ ಕುರಿತು ಪ್ರತಿಕ್ರಿಯಿಸಿದ ಸಂದೀಪ್ ರೆಡ್ಡಿ, ಹಗರಣದಲ್ಲಿ ಭಾಗಿಯಾಗಿರುವ ಆರೋಪ ಎದುರಿಸುತ್ತಿದ್ದ ನಾಗೇಂದ್ರ ಅವರು ಈ ಹಿಂದೆಯೇ ರಾಜೀನಾಮೆ ನೀಡಬೇಕಾಗಿತ್ತು.

ತಡವಾದರೂ ಇದೀಗ ರಾಜೀನಾಮೆ ನೀಡಿರುವುದು ಒಳ್ಳೆಯ ಬೆಳವಣಿಗೆ ಕೋಲಾರ ಹಾಗೂ ಚಿಕ್ಕಬಳ್ಳಾಪುರ ಜಿಲ್ಲೆಗಳಿಗೆ ಸಚಿವ ಸಂಪುಟದಲ್ಲಿ ಸೂಕ್ತ ಪ್ರಾತಿನಿಧ್ಯ ದೊರೆತಿಲ್ಲ ಇದೀಗ ಖಾಲಿಯಾಗಿರುವ ಸ್ಥಾನಕ್ಕೆ ಈ ಎರಡೂ ಜಿಲ್ಲೆಗಳಲ್ಲಿ ಕನಿಷ್ಠ ಒಬ್ಬರಿಗಾದರೂ ಸಚಿವ ಸ್ಥಾನ ನೀಡಬೇಕು ಎಂದು ಅವರು ಆಗ್ರಹಿಸಿದರು.ಶಿಬಿರದಲ್ಲಿ ವೈದ್ಯರು ಶಸ್ತ್ರಚಿಕಿತ್ಸೆಗೆ ಶಿಫಾರಸು ಮಾಡಿರುವವರು ಸೋಮವಾರ ಬೆಂಗಳೂರಿಗೆ ತೆರಳುವ ವ್ಯವಸ್ಥೆಯ ಸದುಪಯೋಗ ಪಡೆದುಕೊಳ್ಳಬೇಕು ಎಂದು ಸಂದೀಪ್ ರೆಡ್ಡಿ ಮನವಿ ಮಾಡಿದರು.

# ರೈತರಿಗೆ ಆಸರೆಯಾದ 'ವಿಬಿ-ಜಿ ರಾಮ್ ಜಿ' ಯೋಜನೆ



**ವಿಜಯ ದುಂಬಿ ಸುದ್ದಿ....**

**ಶಿಡ್ಲಘಟ್ಟ: ತಾಲೂಕಿನ ಗ್ರಾಮೀಣ ಭಾಗದ ಶ್ರಮಿಕರು ಮತ್ತು ರೈತರ ಆರ್ಥಿಕ ಸಬಲೀಕರಣಕ್ಕಾಗಿ ಜುಲೈ 1 ರಿಂದ ದೇಶಾದ್ಯಂತ ಜಾರಿಗೆ ಬಂದಿರುವ 'ವಿಕಸಿತ ಭಾರತ್ ಗ್ಯಾರಂಟಿ ಫಾರ್ ರೋಜ್‌ಗಾರ್ ಅಂಡ್ ಅಜೀವಿಕ ಮಿಷನ್ (ಗ್ರಾಮೀಣ)' (VB-G RAM G) ಯೋಜನೆಯಡಿ, ಬಶೆಟ್ಟಹಳ್ಳಿ ಮತ್ತು ದಿಬ್ಬೂರಹಳ್ಳಿ ಗ್ರಾಮ ಪಂಚಾಯತಿಗಳಲ್ಲಿ ವಿಶೇಷ ಜಾಗೃತಿ ಅಭಿಯಾನ ಹಾಗೂ ಜಾಬ್ ಕಾರ್ಡ್ ಮೇಳವನ್ನು ಹಮ್ಮಿಕೊಳ್ಳಲಾಯಿತು.**

ಅಭಿಯಾನದಲ್ಲಿ ಮಾತನಾಡಿದ ತಾಲೂಕು ಐಇಸಿ ಸಂಯೋಜಕರಾದ ಲೋಕೇಶ್, ಗ್ರಾಮೀಣ ಜನರ ಜೀವನೋಪಾಯಕ್ಕೆ ಭರವಸೆ ನೀಡುವ ಈ ಯೋಜನೆಯ ಮುಖ್ಯಾಂಶಗಳನ್ನು ಸಾರ್ವಜನಿಕರಿಗೆ ವಿವರವಾಗಿ ತಿಳಿಸಿಕೊಟ್ಟರು. ಯೋಜನೆಯಡಿ ದಿನಕ್ಕೆ 382 ಕೂಲಿ ನಿಗದಿಪಡಿಸಲಾಗಿದ್ದು, ವರ್ಷದಲ್ಲಿ ಒಟ್ಟು 125 ದಿನಗಳ ಖಾತರಿ ಉದ್ಯೋಗ ನೀಡಲಾಗುತ್ತದೆ. ರೈತರಿಗೆ ಅನುಕೂಲವಾಗುವಂತೆ ಬೆಳೆ ಕಟಾವು (ಸುಗ್ಗಿ) ಸಮಯದಲ್ಲಿ 60 ದಿನಗಳ ಕಾಲ ಬಿಡುವಿನ ಅವಕಾಶ ಕಲ್ಪಿಸಲಾಗಿದೆ. ಜಲಸಂರಕ್ಷಣೆ, ಗ್ರಾಮೀಣ ಮೂಲಸೌಕರ್ಯ ಅಭಿವೃದ್ಧಿ ಹಾಗೂ ಜೀವನೋಪಾಯ ಕಾಮಗಾರಿಗಳಿಗೆ ಹೆಚ್ಚಿನ ಒತ್ತು ನೀಡಲಾಗಿದೆ.

ರೈತರು ತಮ್ಮ ಜಮೀನಿನಲ್ಲಿ ವೈಯಕ್ತಿಕ ಕಾಮಗಾರಿಗಳಾದ ತೋಟಗಾರಿಕಾ ಬೆಳೆಗಳು, ಕೃಷಿ ಹೊಂಡ ನಿರ್ಮಾಣ ಹಾಗೂ ದನ/ಕುರಿ ಕೊಟ್ಟಿಗೆಗಳನ್ನು ಕಟ್ಟಿಕೊಳ್ಳಲು ಅವಕಾಶವಿದೆ. ಆಗಸ್ಟ್ 15 ರಿಂದ ಸೆಪ್ಟೆಂಬರ್ 15 ರವರೆಗೆ ತಾಲೂಕಿನಾದ್ಯಂತ ಜಾಬ್ ಕಾರ್ಡ್ ಮೇಳ ನಡೆಯುತ್ತಿದ್ದು, ಇದುವರೆಗೆ ಉದ್ಯೋಗ ಚೀಟಿ ಪಡೆಯದವರು ತಕ್ಷಣ ಅರ್ಜಿ ಸಲ್ಲಿಸಲು ಕೋರಲಾಗಿದೆ. ಆಸಕ್ತರು ತಮ್ಮ ಆಧಾರ್ ಕಾರ್ಡ್, ರೇಷನ್ ಕಾರ್ಡ್, ವೈಯಕ್ತಿಕ ಬ್ಯಾಂಕ್ ಖಾತೆ ಪುಸ್ತಕ ಮತ್ತು ಪಾಸ್‌ಪೋರ್ಟ್ ಸೈಜ್ ಫೋಟೋಗಳೊಂದಿಗೆ ಹತ್ತಿರದ ಗ್ರಾಮ ಪಂಚಾಯತಿಗೆ ಭೇಟಿ ನೀಡಿ ಉದ್ಯೋಗ ಚೀಟಿ ಪಡೆದುಕೊಳ್ಳಬಹುದು.

ಈ ಕಾರ್ಯಕ್ರಮದಲ್ಲಿ ಬಶೆಟ್ಟಹಳ್ಳಿ ಗ್ರಾಮ ಪಂ. ಕಾರ್ಯದರ್ಶಿ ಸರೋಜಮ್ಮ, ಇಂಜಿನಿಯರ್‌ಗಳಾದ ಗೌತಮ್ ರಾಜ್ ಹಾಗೂ ಬಾಬು, ಬಿಲ್ ಕಲೆಕ್ಟರ್, ಬಿ.ಎಫ್.ಟಿ ದೇವರಾಜು ಹಾಗೂ ನಾರಾಯಣಸ್ವಾಮಿ, ಜಿ.ಕೆ.ಎಂ ಸೇರಿದಂತೆ ಬಶೆಟ್ಟಹಳ್ಳಿ ಮತ್ತು ದಿಬ್ಬೂರಹಳ್ಳಿ ಗ್ರಾ.ಪಂ ಸಿಬ್ಬಂದಿ ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

# ಕೆನರಾ ಬ್ಯಾಂಕ್ ಗ್ರಾಮೀಣ ಸ್ವಯಂ ಉದ್ಯೋಗ ತರಬೇತಿ ಸಂಸ್ಥೆಗೆ ಕೇಂದ್ರ ಸರ್ಕಾರದ ಜಂಟಿ ಕಾರ್ಯದರ್ಶಿ ಭೇಟಿ.

**ವಿಜಯ ದುಂಬಿ ಸುದ್ದಿ....**

**ಚಿಕ್ಕಬಳ್ಳಾಪುರ: ಗ್ರಾಮೀಣ ಯುವಜನರು ಹಾಗೂ ಮಹಿಳೆಯರನ್ನು ಕೌಶಲ್ಯಾಧಾರಿತ ತರಬೇತಿಯ ಮೂಲಕ ಸ್ವಾವಲಂಬಿಗಳನ್ನಾಗಿ ಮಾಡುವಲ್ಲಿ ಗ್ರಾಮೀಣ ಸ್ವಯಂ ಉದ್ಯೋಗ ತರಬೇತಿ ಸಂಸ್ಥೆಗಳು ಮಹತ್ವದ ಪಾತ್ರ ವಹಿಸುತ್ತಿದ್ದು, ವಿಕಸಿತ ಭಾರತದ ನಿರ್ಮಾಣದಲ್ಲಿ ಇಂತಹ ಸಂಸ್ಥೆಗಳ ಕೊಡುಗೆ ಅತ್ಯಂತ ಮಹತ್ವದ್ದಾಗಿದೆ ಎಂದು ಕೇಂದ್ರ ಸರ್ಕಾರದ ಗ್ರಾಮೀಣಾಭಿವೃದ್ಧಿ ಸಚಿವಾಲಯದ ಜಂಟಿ ಕಾರ್ಯದರ್ಶಿ ಎಸ್. ಶಶಿಕುಮಾರ್ ಅವರು ತಿಳಿಸಿದರು.**

ಚಿಕ್ಕಬಳ್ಳಾಪುರ ತಾಲ್ಲೂಕಿನ ನಂದಿ ಹೋಬಳಿ ವ್ಯಾಪ್ತಿಯ ಚದಲಪುರದಲ್ಲಿರುವ ಕೆನರಾ ಬ್ಯಾಂಕ್ ಗ್ರಾಮೀಣ ಸ್ವಯಂ ಉದ್ಯೋಗ ತರಬೇತಿ ಸಂಸ್ಥೆಗೆ ಶನಿವಾರ ಅನಿರೀಕ್ಷಿತ ಭೇಟಿ ನೀಡಿದ ಅವರು, ಸಂಸ್ಥೆಯಲ್ಲಿ ನಡೆಯುತ್ತಿರುವ ವಿವಿಧ ಕೌಶಲ್ಯಾಧಾರಿತ ತರಬೇತಿ ಕಾರ್ಯಕ್ರಮಗಳನ್ನು ಪರಿಶೀಲಿಸಿದರು. ಈ ಸಂದರ್ಭದಲ್ಲಿ ತರಬೇತಿಯ ಗುಣಮಟ್ಟ, ಶಿಬಿರಾರ್ಥಿಗಳಿಗೆ ಒದಗಿಸಲಾಗುತ್ತಿರುವ ಊಟ





ಮತ್ತು ವಸತಿ ವ್ಯವಸ್ಥೆ ಹಾಗೂ ಸಂಸ್ಥೆಯ ಸ್ವಚ್ಛತೆ ಸೇರಿದಂತೆ ವಿವಿಧ ಸೌಲಭ್ಯಗಳನ್ನು ಪರಿಶೀಲಿಸಿ ಮಾಹಿತಿ ಪಡೆದುಕೊಂಡರು.

ನಂತರ ಸಂಸ್ಥೆಯಲ್ಲಿ ತರಬೇತಿ ಪಡೆಯುತ್ತಿರುವ ಹೊಲಿಗೆ ತರಬೇತಿ ಶಿಬಿರಾರ್ಥಿಗಳು ಹಾಗೂ ಕೃಷಿ ಉದ್ಯಮಶೀಲತಾ ತರಬೇತಿ ಪಡೆಯುತ್ತಿರುವವರೊಂದಿಗೆ ಸಂವಾದ ನಡೆಸಿದರು. ತರಬೇತಿಯ ಗುಣಮಟ್ಟ ಉತ್ತಮವಾಗಿದ್ದು, ಗ್ರಾಮೀಣ ಪ್ರದೇಶದ ಯುವಕರು ಮತ್ತು ಮಹಿಳೆಯರಿಗೆ ಸ್ವಂತ ಉದ್ಯಮ ಆರಂಭಿಸಲು ಇಂತಹ ತರಬೇತಿ ಸಂಸ್ಥೆಗಳು ಉತ್ತಮ ವೇದಿಕೆಯಾಗಿವೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ತರಬೇತಿ ಪೂರ್ಣಗೊಳಿಸಿದ ನಂತರ ಶಿಬಿರಾರ್ಥಿಗಳು ಸ್ವಂತ ಉದ್ಯಮ ಆರಂಭಿಸಲು ಅಗತ್ಯವಿರುವ



ಬ್ಯಾಂಕ್ ಸಾಲ ಸೌಲಭ್ಯ ಹಾಗೂ ಇತರೆ ಹಣಕಾಸಿನ ನೆರವು ಸುಲಭವಾಗಿ ದೊರೆಯುವಂತೆ ವ್ಯವಸ್ಥೆ ಕಲ್ಪಿಸುವುದು ಅತ್ಯಂತ ಮುಖ್ಯವಾಗಿದೆ.

ತರಬೇತಿ ಪಡೆದ ಪ್ರತಿಯೊಬ್ಬರೂ ತಮ್ಮ ಕೌಶಲ್ಯವನ್ನು ಬಳಸಿಕೊಂಡು ಸ್ವಾವಲಂಬಿಗಳಾಗುವ ಜೊತೆಗೆ ಇತರರಿಗೂ ಉದ್ಯೋಗಾವಕಾಶ ಸೃಷ್ಟಿಸುವಂತಾಗಬೇಕು ಎಂದು ಅವರು ಹೇಳಿದರು. ಪ್ರಸ್ತುತ ತರಬೇತಿ ಪಡೆಯುತ್ತಿರುವ ಶಿಬಿರಾರ್ಥಿಗಳು ಹಾಗೂ ಸಂಸ್ಥೆಯಲ್ಲಿ ಈ ಹಿಂದೆ ತರಬೇತಿ ಪಡೆದು ಉದ್ಯಮ ಆರಂಭಿಸಿರುವ ಹಳೆಯ ಶಿಬಿರಾರ್ಥಿಗಳೊಂದಿಗೂ ಸಹ ಜಂಟಿ ಕಾರ್ಯದರ್ಶಿಗಳು ಸಂವಾದ ನಡೆಸಿದರು. ತರಬೇತಿ ಪೂರ್ಣಗೊಂಡ ಬಳಿಕ ಸ್ವಂತ ಉದ್ಯಮ ಆರಂಭಿಸುವ ಸಂದರ್ಭದಲ್ಲಿ ಎದುರಾಗುತ್ತಿರುವ ಸಮಸ್ಯೆಗಳು, ಬ್ಯಾಂಕ್ ಮತ್ತು ಇತರೆ ಹಣಕಾಸು ಸೌಲಭ್ಯಗಳನ್ನು ಪಡೆಯುವ ವಿಧಾನ ಹಾಗೂ ತರಬೇತಿ ಸಂಸ್ಥೆಯಿಂದ ಶಿಬಿರಾರ್ಥಿಗಳು ಹೊಂದಿರುವ ಹೆಚ್ಚುವರಿ ನಿರೀಕ್ಷೆಗಳ ಕುರಿತು ಮಾಹಿತಿ ಪಡೆದುಕೊಂಡರು.

ಈ ಸಂದರ್ಭದಲ್ಲಿ ಕೆನರಾ ಬ್ಯಾಂಕ್ ಪ್ರಧಾನ ಮಹಾಪ್ರಬಂಧಕ ಶ್ರೀನಾಥ್ ಜೋಶಿ, ಹಿರಿಯ ಮಹಾಪ್ರಬಂಧಕ ಜಗನ್ನಾಥ್ ರಾವ್, ರುಡ್‌ಸೆಟ್ ಸಂಸ್ಥೆಯ ಡೈರೆಕ್ಟರ್ ಜನರಲ್ ರಾಜು ಎನ್. ಕೋಲಿ, ನ್ಯಾಷನಲ್ ಸ್ಕಿಲ್ ಮಿಷನ್‌ನ ಆಶಿಷ್ ಸಿನ್ಹಾ, ನ್ಯಾಷನಲ್ ಕಂಟ್ರೋಲರ್ ಆರ್. ಆರ್. ಸಿಂಗ್, ಲೀಡ್ ಬ್ಯಾಂಕ್ ಮ್ಯಾನೇಜರ್ ಅರುಣ್ ಕುಮಾರ್, ಸಿ.ಬಿ.ಆರ್.ಸಿ.ಟಿ. ನಿರ್ದೇಶಕ ಎ. ನಾರಾಯಣಸ್ವಾಮಿ ಹಾಗೂ ಕೆನರಾ ಬ್ಯಾಂಕ್ ಗ್ರಾಮೀಣ ಸ್ವಯಂ ಉದ್ಯೋಗ ತರಬೇತಿ ಸಂಸ್ಥೆಯ ಸಿಬ್ಬಂದಿ ಉಪಸ್ಥಿತರಿದ್ದರು.

# ರೈತರನ್ನು ನೆಲದ ಮೇಲೆ ಕೂರಿಸಿದ ಅಧಿಕಾರಿಗಳ ವರ್ತನೆಗೆ ವ್ಯಾಪಕ ಆಕ್ರೋಶ

ವಿಜಯ ದುಂಬಿ ಸುದ್ದಿ....

**ಕಲಬುರಗಿ: ಜಿಲ್ಲೆಯ ಸೇಡಂ ಪಟ್ಟಣದ ತಹಸೀಲ್ದಾರ್ ಕಚೇರಿಯಲ್ಲಿ ರೈತರ ಸಮಸ್ಯೆಗಳನ್ನು ಆಲಿಸಲು ಆಯೋಜಿಸಿದ್ದ ಸಭೆಯಲ್ಲಿ ರೈತರನ್ನು ನೆಲದ ಮೇಲೆ ಕೂರಿಸಿ, ಅಧಿಕಾರಿಗಳು ಕುರ್ಚಿಗಳಲ್ಲಿ ಕುಳಿತು ಸಭೆ ನಡೆಸಿದ ಘಟನೆಗೆ ರೈತರು ಹಾಗೂ ವಿವಿಧ ಮುಖಂಡರು ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.**



ಸಹಾಯಕ ಜಿಲ್ಲಾಧಿಕಾರಿ ಪ್ರಭುರೆಡ್ಡಿ ಅವರ ನೇತೃತ್ವದಲ್ಲಿ ನಡೆದ ಸಭೆಯಲ್ಲಿ ತಹಸೀಲ್ದಾರ್ ಸೇರಿದಂತೆ ಪುರಸಭೆಯ ಮುಖ್ಯಧಿಕಾರಿ ಗ್ರೇಡ್?1 ಹಾಗೂ ಗ್ರೇಡ್?2 ಅಧಿಕಾರಿಗಳು ಉಪಸ್ಥಿತರಿದ್ದರು. ಸಭೆಯಲ್ಲಿ ವಯೋವೃದ್ಧ ರೈತರು, ಮಹಿಳೆಯರು, ಚಿಕ್ಕ ಮಕ್ಕಳು ಹಾಗೂ ರೈತ ಮುಖಂಡರು ಸೇ–ರಿದಂತೆ ಹಲವರು ಭಾಗವಹಿಸಿದ್ದರು. ಆದರೆ ರೈತ–ರಿಗೆ ಸೂಕ್ತ ಆಸನ ವ್ಯವಸ್ಥೆ ಕಲ್ಪಿಸದೆ ನೆಲದ ಮೇಲೆ ಕೂರಿಸಲಾಗಿದೆ ಎಂಬ ಆರೋಪ ಕೇಳಿಬಂದಿದೆ.

ರೈತರು ನೆಲದ ಮೇಲೆ ಕುಳಿತಿದ್ದ ಸಂದರ್ಭದಲ್ಲಿ ಅಧಿಕಾರಿಗಳು ಕುರ್ಚಿಗಳ ಮೇಲೆ ಕುಳಿತು ಕಾಲಿನ ಮೇಲೆ ಕಾಲು ಹಾಕಿಕೊಂಡು ಸಭೆಯಲ್ಲಿ ಭಾಗವಹಿಸಿರುವುದು ರೈತರ ಅಸಮಾಧಾನಕ್ಕೆ ಕಾರಣವಾಗಿದೆ. ಅಧಿಕಾರಿಗಳ ಈ ವರ್ತನೆ ರೈತರನ್ನು ಅವಮಾನಿಸಿದಂತಾಗಿದೆ ಎಂದು ಹಲವು ರೈತ ಮುಖಂಡರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

"ರೈತರು ಬೆವರು ಸುರಿಸಿ ಬೆಳೆ ಬೆಳೆದಾಗ ಮಾತ್ರ ಸಮಾಜ ಸುಖವಾಗಿ ಬದುಕಲು ಸಾಧ್ಯ. ಇಂತಹ ರೈತರನ್ನೇ ಗೌರವದಿಂದ ನಡೆಸಿಕೊಳ್ಳಬೇಕಾದ ಅಧಿಕಾರಿಗಳು ಕನಿಷ್ಠ ಆಸನ ವ್ಯವಸ್ಥೆಯನ್ನೂ ಮಾಡದೆ ನೆಲದ ಮೇಲೆ ಕೂ–ರಿಸಿರುವುದು ಖಂಡನೀಯ" ಎಂದು ರೈತ ಮುಖಂಡರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಜಿಲ್ಲೆಯಲ್ಲಿ ಬರಗಾಲದ ಪರಿಸ್ಥಿತಿ ನಿರ್ಮಾಣವಾಗಿದ್ದು, ರೈತರು ಸಂಕಷ್ಟದಲ್ಲಿದ್ದಾರೆ. ಬೆಳೆ, ನೀರು ಹಾಗೂ ವಿವಿಧ ಸಮಸ್ಯೆಗಳಿಂದ ಕಂಗಾಲಾಗಿರುವ ರೈತರು ಅಧಿಕಾರಿಗಳ ಮುಂದೆ ತಮ್ಮ ಅಳಲು ತೋಡಿಕೊಳ್ಳಲು ಬಂದಾಗ ಅವರಿಗೆ ಗೌರವಯುತವಾಗಿ ವರ್ತಿಸುವುದು ಅಧಿಕಾರಿಗಳ ಜವಾಬ್ದಾ–ರಿಯಾಗಿದೆ ಎಂದು ಮುಖಂಡರು ತಿಳಿಸಿದ್ದಾರೆ.

"ಅಧಿಕಾರಿಗಳು ಜನರ ಸೇವಕರು. ಜನರು ಮತ್ತು ರೈತರು ಪಾವತಿಸುವ ತೆರಿಗೆ ಹಣದಿಂದಲೇ ಸರ್ಕಾರದ ವ್ಯವಸ್ಥೆ ನಡೆಯುತ್ತಿದೆ. ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ತಮ್ಮನ್ನು 'ಪ್ರಧಾನ ಸೇವಕ' ಎಂದು ಹೇಳಿಕೊಂಡಿರುವಾಗ, ಕೆಳಹಂತದ ಅಧಿಕಾರಿಗಳೂ ತಾವು ಸಾರ್ವಜನಿಕರ ಸೇವಕರು ಎಂಬುದನ್ನು ಮರೆಯಬಾರದು" ಎಂದು ರೈತ ಮುಖಂಡರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ರೈತರ ಸಮಸ್ಯೆ ಆಲಿಸುವ ಸಭೆಗಳಲ್ಲೇ ರೈತರಿಗೆ ಗೌರವ ಸಿಗದಿದ್ದರೆ ಅವರ ಸಮಸ್ಯೆಗಳಿಗೆ ಪರಿಹಾರ ಹೇಗೆ ಸಿಗಲಿದೆ ಎಂಬ ಪ್ರಶ್ನೆಯೂ ಇದೀಗ ಸಾರ್ವಜನಿಕ ವಲಯದಲ್ಲಿ ಕೇಳಿಬರುತ್ತಿದೆ. ಘಟನೆ ಕುರಿತು ಜಿಲ್ಲಾಡಳಿತ ಸೂಕ್ತ ಗಮನಹರಿಸಿ, ಮುಂದಿನ ದಿನಗಳಲ್ಲಿ ರೈತರ ಸಭೆಗಳಲ್ಲಿ ಅಗತ್ಯ ಮೂಲಸೌಕರ್ಯ ಹಾಗೂ ಗೌರವಯುತ ವ್ಯವಸ್ಥೆ ಕಲ್ಪಿಸಬೇಕು ಎಂದು ರೈತರು ಒತ್ತಾಯಿಸಿದ್ದಾರೆ.

## ನೆರೆಮನೆಯವರ ನಾಯಿಯನ್ನು ಗುಂಡಿಕ್ಕಿ ಕೊಂದ ನಿವೃತ್ತ ಸೇನಾ ಸಿಬ್ಬಂದಿ

ವಿಜಯ ದುಂಬಿ ಸುದ್ದಿ....

**ಖಮ್ಮಂ (ತೆಲಂಗಾಣ): ತೆಲಂಗಾಣದ ಖಮ್ಮಂ ಜಿಲ್ಲೆಯಲ್ಲಿ ದ್ವೇಷದ ಹಿನ್ನೆಲೆಯಲ್ಲಿ ನೆರೆಮನೆಯವರ ಸಾಕು ನಾಯಿಯನ್ನು ಏರ್‌ಗನ್‌ನಿಂದ ಗುಂಡಿಕ್ಕಿ ಕೊಂದಿರುವ ಅಮಾನವೀಯ ಘಟನೆ ಮುಡಿಗೊಂಡ ಮಂಡಲದ ಮುತಾರಂ ಗ್ರಾಮದಲ್ಲಿ ವರದಿಯಾಗಿದೆ. ನಿವೃತ್ತ ಸೇನಾ ಸಿಬ್ಬಂದಿಯೊಬ್ಬರು ನೆರೆಮನೆಯವರ ಸಾಕು ನಾಯಿಯನ್ನು ಗುಂಡಿಕ್ಕಿ ಕೊಂದಿರುವುದು ಸ್ಥಳೀಯವಾಗಿ ತೀವ್ರ ಆಕ್ರೋಶಕ್ಕೆ ಕಾರಣವಾಗಿದೆ.**

ದೂರುದಾರ ರಾಮು ಎಂಬುವವರು ತಮ್ಮ ಮನೆಯಲ್ಲಿ



ಸಾಕು ನಾಯಿಯೊಂದನ್ನು ಪ್ರೀತಿಯಿಂದ ಸಾಕುತ್ತಿದ್ದರು. ಈ ನಾಯಿ ಆಗಾಗ್ಗೆ ನೆರೆಮನೆಯಲ್ಲಿ ವಾಸಿಸುತ್ತಿದ್ದ ನಿವೃತ್ತ ಸೇನಾ ಸಿಬ್ಬಂದಿ ರೌತು ಜನಯ್ಯ ಅವರ ಮನೆ ಬಳಿ ತೆರಳುತ್ತಿತ್ತು. ಈ ವಿಚಾರವಾಗಿ ಜನಯ್ಯ ನಾಯಿಯ ಮೇಲೆ ದ್ವೇಷ ಹಾಗೂ ಅಸಮಾಧಾನ ಬೆಳೆಸಿಕೊಂಡಿದ್ದರು ಎನ್ನಲಾಗಿದೆ. ಇದೇ ಕಾರಣಕ್ಕೆ ಕೋಪಗೊಂಡ ಅವರು ಏರ್‌ಗನ್ ಬಳಸಿ ನಾಯಿಯ ಮೇಲೆ ನೇರವಾಗಿ ಗುಂಡು ಹಾ–ರಿಸಿದ್ದಾರೆ. ಗುಂಡೇಟಿನಿಂದ ಗಂಭೀರವಾಗಿ ಗಾಯಗೊಂಡ ನಾಯಿ ಸ್ಥಳದಲ್ಲೇ ಮೃತಪಟ್ಟಿದೆ ಎಂದು ತಿಳಿದುಬಂದಿದೆ. ಘಟನೆ ಕುರಿತು ನಾಯಿಯ ಮಾಲೀಕ ರಾಮು ಅವರು ಮುಡಿಗೊಂಡ ಪೊಲೀಸ್ ಠಾಣೆಗೆ ತೆರಳಿ ದೂರು ದಾಖಲಿಸಿದ್ದಾರೆ. ನಿವೃತ್ತ ಸೇನಾ ಸಿಬ್ಬಂದಿ ಜನಯ್ಯ ಉದ್ದೇಶಪೂರ್ವಕವಾಗಿ ನಾಯಿಯ ಮೇಲೆ ಗುಂಡು ಹಾರಿಸಿ ಕೊಂದಿದ್ದಾರೆ ಎಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ. ರಾಮು ಅವರ ದೂರಿನ ಆಧಾರದ ಮೇಲೆ ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದು, ಕೃತ್ಯಕ್ಕೆ ಬಳಸಲಾದ ಏರ್‌ಗನ್ ಹಾಗೂ ನಾಯಿಯ ಸಾವಿಗೆ ಸಂಬಂಧಿಸಿದ ಇತರ ಸಾಕ್ಷ್ಯಾಧಾರಗಳನ್ನು ಸಂಗ್ರಹಿಸಿ ತನಿಖೆ ಮುಂದುವರಿಸಿದ್ದಾರೆ. ಸಾಕುಪ್ರಾಣಿಗಳ ಮೇಲಿನ ದೌರ್ಜನ್ಯ ಹಾಗೂ ಅವುಗಳ ಬಗ್ಗೆ ಹೆಚ್ಚುತ್ತಿರುವ ಅಸಹಿಷ್ಣುತೆಗೆ ಇಂತಹ ಘಟನೆಗಳು ಸಾಕ್ಷಿಯಾಗಿವೆ. ಪ್ರಾಣಿಗಳ ಮೇಲಿನ ಕ್ರೌರ್ಯ ತಡೆಗಟ್ಟುವ ಕಾನೂನುಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸುವುದು ಹಾಗೂ ಇಂತಹ ಘಟನೆಗಳ ಮರುಕಳಿಕೆಗೆ ಕಡಿವಾಣ ಹಾಕಲು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುವ ಅಗತ್ಯವಿದೆ ಎಂದು ಪ್ರಾಣಿ ಹಕ್ಕುಗಳ ಹೋರಾಟಗಾರರು ಒತ್ತಾಯಿಸಿದ್ದಾರೆ.

## ದೇಶಾದ್ಯಂತ 41 ಅಗತ್ಯ ವಸ್ತುಗಳ ಬೆಲೆ ಸ್ಥಿರತೆಗೆ ಮುಂದಾದ ಕೇಂದ್ರ

ವಿಜಯ ದುಂಬಿ ಸುದ್ದಿ....

**ನವದೆಹಲಿ: ಶ್ರಾವಣ ಬಂತೆಂದರೆ ಹಬ್ಬ–ಹರಿದಿನ, ಧಾರ್ಮಿಕ ಮಹೋತ್ಸವ ಹಾಗೂ ವಿವಾಹ ಸಮಾರಂಭಗಳ ಸಂಭ್ರಮ ಆರಂಭವಾಗುತ್ತದೆ. ಈ ಸಂದರ್ಭದಲ್ಲಿ ಸಹಜವಾಗಿಯೇ ಅಗತ್ಯ ವಸ್ತುಗಳ ಬೆಲೆ ಏರಿಕೆಯಾಗುವ ಸಾಧ್ಯತೆ ಇರುತ್ತದೆ. ಆದರೆ, ಈ ಬಾರಿ ಹಬ್ಬಗಳ ಋತುವಿನ ಆರಂಭದಿಂದಲೇ ಬೆಲೆ ಸ್ಥಿರತೆಗೆ ಕೇಂದ್ರ ಸರ್ಕಾರ ಆದ್ಯತೆ ನೀಡಿದೆ.**



ನಾಗರ ಪಂಚಮಿ, ವರಮಹಾಲಕ್ಷ್ಮಿ, ಗಣೇಶ ಚತುರ್ಥಿ, ದಸರಾ ಹಾಗೂ ದೀಪಾವಳಿಯಂತಹ ಹಬ್ಬಗಳ ಸಂದರ್ಭದಲ್ಲಿ ಹಾಲು, ಬೇಳೆಕಾಳು, ತರಕಾರಿ ಸೇರಿದಂತೆ 41 ಬಗೆಯ ಅಗತ್ಯ ವಸ್ತುಗಳ ಬೆಲೆ ಏರಿಕೆಯನ್ನು ನಿಯಂತ್ರಿಸಲು ಕೇಂದ್ರ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕ ವ್ಯವಹಾರಗಳ ಸಚಿವ ಪ್ರಲ್ಹಾದ ಜೋಶಿ ಅವರ ನೇತೃತ್ವದಲ್ಲಿ ಸರ್ಕಾರ ಮುಂಜಾಗ್ರತಾ ಕ್ರಮಗಳನ್ನು ಕೈಗೊಂಡಿದೆ. NCCF, NAFED, ಕೇಂದ್ರೀಯ ಭಂಡಾರ್ ಹಾಗೂ ಇತರ ಚಿಲ್ಲರೆ ಮಾರಾಟ ಮಳಿಗೆಗಳ ಮೂಲಕ ಗ್ರಾಹಕರಿಗೆ ಕೈಗೆಟುಕುವ ದರದಲ್ಲಿ ಅಗತ್ಯ ವಸ್ತುಗಳು ಲಭ್ಯವಾಗುವಂತೆ ಕ್ರಮ ಕೈಗೊಳ್ಳಲಾಗಿದೆ. ಇದಕ್ಕೆ ನಿದರ್ಶನವೆಂಬಂತೆ ಈರುಳ್ಳಿ ಬೆಲೆ ನಿಯಂತ್ರಣಕ್ಕೆ ಮುಂದಾಗಿರುವ ಕೇಂದ್ರ ಸರ್ಕಾರ, ನಾಸಿಕ್‌ನಿಂದ ದೇಶದ ಐದು ಪ್ರಮುಖ ನಗರಗಳಿಗೆ ಕಾಂದಾ ಎಕ್ಸ್‌ಪ್ರೆಸ್ ರೈಲು ಮೂಲಕ ಈರುಳ್ಳಿ ಪೂರೈಕೆಗೆ ಚಾಲನೆ ನೀಡಿದೆ. 35ಕ್ಕೆ ಈರುಳ್ಳಿ ಲಭ್ಯ ಈಗಾಗಲೇ ದೆಹಲಿಯ ಮಾರುಕಟ್ಟೆಗಳಲ್ಲಿ ಕೆಜಿಗೆ ?35ರ ದರದಲ್ಲಿ ಈರುಳ್ಳಿ ಲಭ್ಯವಾಗುವಂತೆ ಕ್ರಮ ಕೈಗೊಳ್ಳಲಾಗಿದೆ.

## ಬರಗಾಲ ಘೋಷಣೆಯಲ್ಲಿ ಕಲಬುರಗಿ ಜಿಲ್ಲೆ ಕೈ ಬಿಟ್ಟ ಸರಕಾರ, ಜೆಡಿಎಸ್ ಜಿಲ್ಲಾಧ್ಯಕ್ಷ ಬಾಲರಾಜ್ ಗುತ್ತೇದಾರ್ ಆಕ್ರೋಶ

ವಿಜಯ ದುಂಬಿ ಸುದ್ದಿ....

**ಕಲಬುರಗಿ: ರಾಜ್ಯದಲ್ಲೇ ಮಳೆ ಕೊರತೆಯಿಂದಾಗಿ ಕಲಬುರಗಿ ಜಿಲ್ಲೆಯಲ್ಲಿ ಸಾಕಷ್ಟು ಪ್ರಮಾಣದಲ್ಲಿ ರೈತರ ಬೆಳೆಗಳು ಒಣಗಿ ಹೋಗಿದ್ದರೂ ರಾಜ್ಯ ಸರ್ಕಾರ ಘೋಷಿಸಿರುವ ಬರಗಾಲ ತಾಲೂಕುಗಳಲ್ಲಿ ಕಲಬುರಗಿ ಜಿಲ್ಲೆ ಮತ್ತು ಯಾವುದೇ ತಾಲೂಕುಗಳು ಬರಗಾಲ ಪೀಡಿತ ಪ್ರದೇಶವೆಂದು ಘೋಷಣೆ ಮಾಡದೆ ಇರುವ ರಾಜ್ಯ ಸರ್ಕಾರ ನಮ್ಮ ಭಾಗಕ್ಕೆ ಅನ್ಯಾಯ ಮಾಡಿದೆ ಎಂದು ಕಲಬುರಗಿ ಜಿಲ್ಲಾ ಜೆಡಿಎಸ್ ಪಕ್ಷದ ಅಧ್ಯಕ್ಷ ಬಾಲರಾಜ್ ಗುತ್ತೇದಾರ ಆಕ್ರೋಶ ವ್ಯಕ್ತಪಡಿಸಿದ್ದಾರೆ.**

ಈ ಕುರಿತು ಸುದ್ದಿಗಾರರೊಂದಿಗೆ ಮಾತನಾಡಿದ ಅವರು,ಕಳೆದ ವಿಧಾನಸಭೆ ಹಾಗೂ ಲೋಕಸಭೆ ಚುನಾವಣೆಯ ಸಂದರ್ಭದಲ್ಲಿ ನಿರೀಕ್ಷೆಗಿಂತ ಹೆಚ್ಚು ಇಲ್ಲಿಯ ಜನರು ಕಾಂಗ್ರೆಸ್ ಪಕ್ಷಕ್ಕೆ ಮತ ಹಾಕಿ ಬೆಂಬಲಿಸಿದ್ದಾರೆ.ಆದರೆ ರಾಜ್ಯ ಸರಕಾರ ಬರಗಾಲ ಘೋಷಣೆಯಲ್ಲಿ ನಮ್ಮ ಜಿಲ್ಲೆಗೆ ಅನ್ಯಾಯ ಮಾಡಿದ್ದು ಖಂಡನೀಯವಾಗಿದೆ ಎಂದು ತಿಳಿಸಿದ್ದಾರೆ.



ಆಡಳಿತ ಪಕ್ಷದ ಶಾಸಕರು ರಾಜ್ಯ ಸರ್ಕಾರದ ಮೇಲೆ ಒತ್ತಡ ಹಾಕಿ ನಮ್ಮ ಜಿಲ್ಲೆಯು ಬರಗಾಲ ಪೀಡಿತ ಪ್ರದೇಶವೆಂದು ಘೋಷಣೆ ಮಾಡುವುದರ ಜತೆಗೆ ಪ್ರತಿ ಎಕರೆಗೆ 25 ಸಾವಿರ ರೂ. ಪರಿಹಾರ ಒದಗಿಸಬೇಕು. ಇಲ್ಲದಿದ್ದರೆ ಮುಂದಿನ ದಿನಗಳಲ್ಲಿ ಆಡಳಿತ ಪಕ್ಷದ ಶಾಸಕರಿಗೆ ಜಿಲ್ಲೆಯ ಜನರು ತಕ್ಕ ಪಾಠ ಕಲಿಸುತ್ತಾರೆ ಎಂದು ಹೇಳಿದರು ಮುಂಗಾರು ಬೆಳೆಗಳು,ವಿಶೇಷವಾಗಿ ತೊಗರಿ,ಹತ್ತಿ ಬೆಳೆ ತೀವ್ರ ಸಂಕಷ್ಟಕ್ಕೆ ಸಿಲುಕಿರುವ ಹಿನ್ನೆಲೆಯಲ್ಲಿ,ಜಿಲ್ಲೆಯ ಎಲ್ಲ ರೈತರಿಗೆ ಮಳೆ ಕೊರತೆ ಇದೆ. ತಾಲೂಕುಗಳನ್ನು ಬರಗಾಲ ಪೀಡಿತ ಪ್ರದೇಶವೆಂದು ಘೋಷಿಸಬೇಕು.ಆದ–ರೆ ರಾಜ್ಯ ಸರ್ಕಾರ ಇಡೀ ಕಲಬುರಗಿ ಜಿಲ್ಲೆಯನ್ನೇ ಕಡೆಗಣಿಸಿರುವುದು ನಮ್ಮ ಜಿಲ್ಲೆಯ ರೈತರಿಗೆ ಮಾಡಿರುವ ಘೋರ ಅನ್ಯಾಯವಾಗಿದೆ.ಈಗಾಗಲೇ ರೈತರು ಸಾಕಷ್ಟು ಸಾಲ ಮಾಡಿ ಬಿತ್ತನೆ ಮಾಡಿರುವುದರಿಂದ ತೀವ್ರ ಸಂಕಷ್ಟದಲ್ಲಿ ಇದ್ದಾರೆ.

ಹೀಗಿರುವಾಗ ರೈತರ ನೆರವಿಗೆ ಧಾವಿಸಬೇಕಾದ ರಾಜ್ಯ ಸರ್ಕಾರವೇ ಇಡೀ ಕಲಬುರಗಿ ಜಿಲ್ಲೆಯ ರೈತರನ್ನು ಕಡೆಗಣಿಸುವ ಮೂಲಕ ರೈತರಿಗೆ ಅನ್ಯಾಯ ಮಾಡಿರೀವು ಸರಿಯಲ್ಲ ಅಲ್ಲದೇ ಮಳೆ ಕೊರತೆಯಿಂದಾಗಿ ಜಿಲ್ಲೆಯ ಕೃಷಿ ಆಧಾರಿತ ಆರ್ಥಿಕ ಚಟುವಟಿಕೆಗಳಿಗೆ ತೊಂದರೆಯಾಗಿದೆ.

ಜಿಲ್ಲೆಯ ಪ್ರಮುಖ ವಾಣಿಜ್ಯ ಬೆಳೆಯಾದ ತೊಗರಿ ಬೆಳೆ ಮೇಲೆ ಹೆಚ್ಚಿನ ಪರಿಣಾಮ ಎದುರಾಗಿದೆ.ಸಾವಿರಾರು ರೈತ ಕುಟುಂಬಗಳ ಬದುಕು ತೊಗರಿ ಬೆಳೆಯನ್ನೇ ಅವಲಂಬಿಸಿದೆ.ಜಿಲ್ಲೆಯ ಆರ್ಥಿಕತೆಯೂ ಕೃಷಿಯೊಂದಿಗೆ ನೇರವಾಗಿ ಬೆಸೆದುಕೊಂಡಿದೆ.

ತೊಗರಿ ಬೇಳೆ ಮಿಲ್ಗಳು,ಕೃಷಿ ಉತ್ಪನ್ನಗಳು,ಗೋದಾಮುಗಳು,ಸಾರಿಗೆ,ಬೀಜ ಸಂಸ್ಕರಣಾ ಘಟಕಗಳು ಸೇರಿ ಅನೇಕ ಕೃಷಿ ಆಧಾರಿತ ಉದ್ಯಮಗಳು ಕೃಷಿ ಉತ್ಪಾದನೆಯನ್ನೇ ಅವಲಂಬಿಸಿವೆ.ಬೆಳೆ ಹಾನಿಯಾದರೆ ಅದರ ಪರಿಣಾಮ ರೈತರಿಗೆ ಮಾತ್ರ ಸೀಮಿತವಾಗದೆ. ವ್ಯಾಪಾರ,ಕೈಗಾರಿಕೆ,ಉದ್ಯೋಗ ಹಾಗೂ ಜಿಲ್ಲೆಯ ಒಟ್ಟಾರೆ ಆರ್ಥಿಕ ಚಟುವಟಿ–ಕೆಗಳ ಮೇಲೂ ಬೀಳಲಿದೆ.ರಾಜ್ಯ ಸರ್ಕಾರ ತಕ್ಷಣವೇ ನೆರವಿಗೆ ಧಾವಿಸಬೇಕು ಎಂದು ರೈತರ

# ಮತ್ತೊಂದು ಪ್ರವಾಹ ಸಾಧ್ಯತೆ : ನೇಪಾಳಕ್ಕೆ ಎಚ್ಚರಿಕೆ ನೀಡಿದ ಚೀನಾ

ವಿಜಯ ದುಂಬಿ ಸುದ್ದಿ....

**ಕಠ್ಮಂಡು: ನೇಪಾಳದ ಲೆಂಡೆ ನದಿ ವ್ಯವಸ್ಥೆಯ ಮೇಲ್ಭಾಗದಲ್ಲಿ ರೂಪುಗೊಂಡಿರುವ ಸರೋವರ ಯಾವುದೇ ಕ್ಷಣದಲ್ಲಿ ಒಡೆಯಬಹುದು ಎಂದು ಚೀನಾ ಮತ್ತೊಮ್ಮೆ ನೇಪಾಳಕ್ಕೆ ಎಚ್ಚರಿಕೆ ನೀಡಿದೆ.**



ಸರೋವರದ ನೀರಿನ ಬಣ್ಣದಲ್ಲಿ ಆಗುತ್ತಿರುವ ಬದಲಾವಣೆ ಹೆಚ್ಚುತ್ತಿರುವ ಅಪಾಯದ ಸೂಚನೆಯಾಗಿದೆ. ಸರೋವರ ಒಡೆದರೂ ನದಿಯ ಹರಿವು ಗರಿಷ್ಠ ಸೆಕೆಂಡಿಗೆ 500 ಘನ ಮೀಟರ್‌ಗಳಷ್ಟೇ ತಲುಪಬಹುದು. ಹೀಗಾಗಿ ಕೆಳಭಾಗದ ಪ್ರದೇಶಗಳಲ್ಲಿನ ನದಿಗಳ ಹರಿವು ಸ್ವಲ್ಪ ಹೆಚ್ಚಾಗಬಹುದೇ ಹೊರತು, ಗಮನಾರ್ಹ ಪ್ರಮಾಣದಲ್ಲಿ ಏರಿಕೆಯಾಗುವ ಸಾಧ್ಯತೆ ಕಡಿಮೆ ಎಂದು ಬೀಜಿಂಗ್ ತಿಳಿಸಿದೆ. ಈ ವಾರದ ಆರಂಭದಲ್ಲಿ ನೇಪಾಳ ಮತ್ತು ಟಿಬೆಟ್‌ನ ಕೆಲವು ಭಾಗಗಳನ್ನು ಮುಳುಗಿಸಿದ ಭೀಕರ ಪ್ರವಾಹದ ಬಳಿಕ ಈ ಸರೋವರ ರೂಪುಗೊಳ್ಳಲು ಆರಂಭಿಸಿದೆ. ಸರೋವರದ ನೀರಿನ ಬಣ್ಣ ನಿರಂತರವಾಗಿ ಗಾಢವಾಗುತ್ತಿರುವುದು ಅದು ಯಾವುದೇ ಕ್ಷಣದಲ್ಲಿ ಒಡೆಯುವ ಸಾಧ್ಯತೆಯನ್ನು ಸೂಚಿಸುತ್ತದೆ ಎಂದು ಚೀನಾದ ಅಧಿಕಾರಿಗಳು ನೇಪಾಳದ ವಿದೇಶಾಂಗ ಸಚಿವಾಲಯದೊಂದಿಗೆ ಹಂಚಿಕೊಂಡ ಸಂದೇಶದಲ್ಲಿ ತಿಳಿಸಿದ್ದಾರೆ.

ಪ್ರವಾಸ ಕೈಪಿಡಿಗಳನ್ನು ಓದುವುದು ಸರೋವರದಲ್ಲಿನ ನೀರಿನ ಪ್ರಮಾಣ ಹೆಚ್ಚಾಗುತ್ತಿರುವುದರಿಂದ ಕೆಳಭಾಗದ ಪ್ರದೇಶಗಳಲ್ಲಿ ವಾಸಿಸುವ ಸಮುದಾಯಗಳು ಮುನ್ನೆಚ್ಚರಿಕೆ ವಹಿಸುವಂತೆ ಚೀನಾ ಅಧಿಕಾರಿಗಳು ಸಲಹೆ ನೀಡಿದ್ದಾರೆ. ನೇಪಾಳ ಮತ್ತು ಟಿಬೆಟ್‌ನಲ್ಲಿ ಭೀಕರ ಪ್ರವಾಹಕ್ಕೆ ಕಾರಣವಾಗಿದೆ ಎನ್ನಲಾದ ಹಿಮನದಿ ಕುಸಿತದ ಪರಿಣಾಮವಾಗಿ ಈ ನೈಸರ್ಗಿಕ ಅಣೆಕಟ್ಟು ಸರೋವರ ರೂಪುಗೊಂಡಿದೆ. ಕುಸಿದ ಶಿಲಾಖಂಡರಾಶಿಗಳು ನೈಸರ್ಗಿಕ ಅಣೆಕಟ್ಟಿನಂತೆ ನಿರ್ಮಾಣಗೊಂಡಿದ್ದು, ಅದರ ಹಿಂದೆ ನೀರು ಸಂಗ್ರಹವಾಗಿದೆ. ಚೀನಾದ ಕಡೆಯ ಚೋಚೆನ್ ನದಿ ಹಾಗೂ ನೇಪಾಳದ ಕಡೆಯ ಪುರೆಪು ನದಿಯ ಸಂಗಮದ ಸಮೀಪ ಈ ಸರೋವರ ರೂಪುಗೊಂಡಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಚೀನಾದ ಜಲಸಂಪನ್ಮೂಲ ಸಚಿವಾಲಯದ ಪ್ರಕಾರ, ಸರೋವರದಲ್ಲಿನ ನೀರಿನ ಮಟ್ಟ ಕ್ರಮೇಣ ಏರುತ್ತಿದೆ. ನಿನ್ನೆಯವರೆಗೆ ಸರೋವರದಲ್ಲಿ ಸುಮಾರು 25 ಲಕ್ಷ ಘನ ಮೀಟರ್ ನೀರು ಸಂಗ್ರಹವಾಗಿದೆ. ಸರೋವರ ಒಡೆದರೆ ಸಂಭವಿಸಬಹುದಾದ ಹಾನಿಯ ಪ್ರಮಾಣವನ್ನು ಅಂದಾಜಿಸಲು ಚೀನಾ ಪ್ರವಾಹ ಮಾದರಿಯನ್ನು ರೂಪಿಸಿ ಅಧ್ಯಯನ ನಡೆಸಿದೆ. ಈ ಮೂಲಕ ಕೆಳಭಾಗದ ಪ್ರದೇಶಗಳ ಮೇಲೆ ಉಂಟಾಗಬಹುದಾದ ಪರಿಣಾಮವನ್ನು ನಿರ್ಣಯಿಸಲಾಗುತ್ತಿದೆ ಎಂದು ತಿಳಿಸಿದೆ.

# ಕಳಪೆ ಗುಣಮಟ್ಟದ ಔಷಧಿ ಸರಬರಾಜು ಕುರಿತು ತನಿಖೆಗೆ ಸಮಿತಿ ರಚನೆ : ಯು.ಟಿ.ಖಾದರ್

ವಿಜಯ ದುಂಬಿ ಸುದ್ದಿ....

**ಬೆಂಗಳೂರು: ಕಳೆದ ನಾಲ್ಕು ವರ್ಷಗಳಿಂದ ಕಡಿಮೆ ಗುಣಮಟ್ಟದ ಔಷಧಿಗಳು ಸರಬರಾಜಾಗಿರುವ ಕುರಿತು ತನಿಖೆ ನಡೆಸಿ ವರದಿ ನೀಡಲು ತಜ್ಞರ ಸಮಿತಿಯೊಂದನ್ನು ರಚಿಸಲಾಗುವುದು ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಯು.ಟಿ. ಖಾದರ್ ತಿಳಿಸಿದ್ದಾರೆ.**



ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಒಟ್ಟು 98 ವಿವಿಧ ಔಷಧಿಗಳ ಗುಣಮಟ್ಟದ ಬಗ್ಗೆ ಆಕ್ಷೇಪಗಳು ಕೇಳಿಬಂದಿವೆ. ಈ ಕುರಿತು ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿಯವರೊಂದಿಗೆ ಚರ್ಚೆ ನಡೆಸಲಾಗಿದೆ. ತಜ್ಞರ ಸಮಿತಿಯನ್ನು ರಚಿಸಿ ಸಮಗ್ರ ವರದಿ ನೀಡುವಂತೆ ಸೂಚಿಸಲಾಗಿದೆ. ವರದಿ ಬಂದ ಬಳಿಕ ಲೋಪಗಳಿದ್ದರೆ ಅವುಗಳನ್ನು ಸರಿಪಡಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದರು.

ಔಷಧಿ ಸರಬರಾಜಿನ ಟೆಂಡರ್ ಪ್ರಕ್ರಿಯೆಯಲ್ಲಿ ಕೆಲವು ಲೋಪದೋಷಗಳಿರುವುದು ನಿಜ. ಟೆಂಡರ್ ಕರೆದು ಔಷಧಿ ಸರಬರಾಜಿನ ಗುತ್ತಿಗೆ ನೀಡುವ ಹಂತದಲ್ಲಿ ವರದಿಯಲ್ಲಿ ಆಕ್ಷೇಪಗಳು ಕಂಡುಬಂದರೆ ಟೆಂಡರ್ ರದ್ದುಪಡಿಸಬೇಕಾಗುತ್ತದೆ. ಬಳಿಕ ಹೊಸದಾಗಿ ಗುತ್ತಿಗೆ ನೀಡುವ ಪ್ರಕ್ರಿಯೆ ಆರಂಭಿಸಬೇಕಾಗುತ್ತದೆ. ಇದಕ್ಕೆ ಮತ್ತೆ ಆರು ತಿಂಗಳ ಕಾಲಾವಕಾಶ ಬೇಕಾಗುತ್ತದೆ. ಇದು ಪ್ರತಿಬಾರಿಯೂ ಎದುರಾಗುತ್ತಿರುವ ಸಾಮಾನ್ಯ ಸಮಸ್ಯೆಯಾಗಿದ್ದು, ಇದಕ್ಕೆ ಶಾಶ್ವತ ಪರಿಹಾರ ಕಂಡುಕೊಳ್ಳಲು ಪ್ರಯತ್ನಿಸಲಾಗುತ್ತಿದೆ ಎಂದು ಹೇಳಿದರು. ಔಷಧಿ ಸರಬರಾಜಿನ ಗುತ್ತಿಗೆ ಪಡೆದ ಕಂಪನಿಗಳು ನೇರವಾಗಿ ಜಿಲ್ಲಾ ಕೇಂದ್ರಗಳಿಗೆ ಔಷಧಿಗಳನ್ನು ಪೂರೈಸುತ್ತವೆ. ಹೀಗಾಗಿ ಸರಬರಾಜಿನಲ್ಲಿ ಯಾವುದೇ ವಿಳಂಬವಾಗುವುದಿಲ್ಲ. ವೈದ್ಯರು ಅಗತ್ಯವಿರುವ ಔಷಧಿಗಳ ಪಟ್ಟಿಯನ್ನು ನೀಡುತ್ತಾರೆ. ತಜ್ಞರ ಸಮಿತಿ ಅದನ್ನು ಪರಿಶೀಲಿಸಿ ಶಿಫಾರಸು ಮಾಡುತ್ತದೆ. ಬಳಿಕ ಕರ್ನಾಟಕ ರಾಜ್ಯ ವೈದ್ಯಕೀಯ ಸರಬರಾಜು ನಿಗಮ ಟೆಂಡರ್ ಕರೆದು ಗುತ್ತಿಗೆ ನೀಡುತ್ತದೆ ಎಂದು ಸಚಿವರು ವಿವರಿಸಿದರು.

# ನೇಪಾಳದಲ್ಲಿ ಸಿಲುಕಿರುವ ಭಾರತೀಯರ ರಕ್ಷಣೆ ತೀವ್ರಗೊಳಿಸಲು ಮೋದಿಗೆ ಖರ್ಗೆ ಪತ್ರ

ವಿಜಯ ದುಂಬಿ ಸುದ್ದಿ....

**ನವದೆಹಲಿ: ಪ್ರವಾಹ ಪೀಡಿತ ನೇಪಾಳದಲ್ಲಿ ಸಿಲುಕಿರುವ ಎಲ್ಲಾ ಭಾರತೀಯರ ರಕ್ಷಣೆ ಹಾಗೂ ಸ್ಥಳಾಂತರ ಕಾರ್ಯಾಚರಣೆಗಳನ್ನು ತೀವ್ರಗೊಳಿಸಿ, ಅವರು ಸುರಕ್ಷಿತವಾಗಿ ಭಾರತಕ್ಕೆ ಮರಳಲು ಅಗತ್ಯ ವ್ಯವಸ್ಥೆ ಮಾಡುವಂತೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಪ್ರಧಾನಿ ನರೇಂದ್ರ ಮೋದಿ ಅವರಿಗೆ ಪತ್ರ ಬರೆದು ಒತ್ತಾಯಿಸಿದ್ದಾರೆ.**



ಪ್ರಧಾನಿಗೆ ಬರೆದ ಪತ್ರದಲ್ಲಿ ಖರ್ಗೆ ಅವರು, ನೇಪಾಳ ಸರ್ಕಾರದೊಂದಿಗೆ ಸಮನ್ವಯ ಸಾಧಿಸಿ ಪ್ರವಾಹದಿಂದ ಬಾಧಿತವಾಗಿರುವ ಜನರಿಗೆ ಸಾಕಷ್ಟು ಮಾನವೀಯ ಹಾಗೂ ಪರಿಹಾರ ನೆರವು ಒದಗಿಸುವಂತೆಯೂ ಮನವಿ ಮಾಡಿದ್ದಾರೆ.

ನೆರೆಯ ರಾಷ್ಟ್ರದಲ್ಲಿ ಸಂಭವಿಸಿರುವ ವಿನಾಶಕಾರಿ ಪ್ರವಾಹದ ಬಗ್ಗೆ ಕಳವಳ ವ್ಯಕ್ತಪಡಿಸಿರುವ ಅವರು, ದುರಂತದಿಂದ ವ್ಯಾಪಕವಾಗಿ ಜೀವಹಾನಿ ಹಾಗೂ ಆಸ್ತಿಪಾಸ್ತಿ ನಷ್ಟ ಸಂಭವಿಸಿದೆ ಎಂದು ಹೇಳಿದ್ದಾರೆ. ಇತ್ತೀಚಿನ ಮಾಧ್ಯಮ ವರದಿಗಳನ್ನು ಉಲ್ಲೇಖಿಸಿದ ಖರ್ಗೆ, 500ಕ್ಕೂ ಹೆಚ್ಚು ಮಂದಿ ಮೃತಪಟ್ಟಿದ್ದು, ಸುಮಾರು 1,000 ಮಂದಿ ನಾಪತ್ತೆಯಾಗಿದ್ದಾರೆ ಎಂದು ತಿಳಿಸಿದ್ದಾರೆ.

ಈ ದುರಂತದಿಂದ ಸಾವಿರಾರು ಜನರಿಗೆ ಆಹಾರ, ಔಷಧ, ಆಶ್ರಯ ಹಾಗೂ ಇತರ ಅಗತ್ಯ ವಸ್ತುಗಳ ತುರ್ತು ಅಗತ್ಯ ಎದುರಾಗಿದೆ ಎಂದು ಅವರು ಹೇಳಿದ್ದಾರೆ. ನೇಪಾಳ ಸರ್ಕಾರದೊಂದಿಗೆ ಸಮನ್ವಯ ಸಾಧಿಸಿ ಸಂತ್ರಸ್ತರಿಗೆ ಅಗತ್ಯ ಮಾನವೀಯ ಹಾಗೂ ಪರಿಹಾರ ನೆರವು ದೊರೆಯುವಂತೆ ಕ್ರಮ ಕೈಗೊಳ್ಳಬೇಕು ಎಂದು ಮನವಿ ಮಾಡಿದ್ದಾರೆ.

ಭಾರತೀಯರ ಸುರಕ್ಷತೆ ಬಗ್ಗೆ ಕಳವಳ ಪ್ರವಾಹದಿಂದ ನೇಪಾಳದ ವಿವಿಧ ಭಾಗಗಳಲ್ಲಿ ಸಿಲುಕಿರುವ ಭಾರತೀಯ ಪ್ರಜೆಗಳು ಹಾಗೂ ಭಾರತೀಯ ಮೂಲದವರ ಬಗ್ಗೆಯೂ ಖರ್ಗೆ ಕಳವಳ ವ್ಯಕ್ತಪಡಿಸಿದ್ದಾರೆ.ವಿದೇಶಾಂಗ ವ್ಯವಹಾರಗಳ ಸಚಿವಾಲಯದ ಇತ್ತೀಚಿನ ಮಾಹಿತಿಯನ್ನು ಉಲ್ಲೇಖಿಸಿರುವ ಅವರು, ಸುಮಾರು 320 ಭಾರತೀಯ ಪ್ರಜೆಗಳು ಸಂಪರ್ಕಕ್ಕೆ ಸಿಗುತ್ತಿಲ್ಲ ಎಂದು ತಿಳಿಸಿದ್ದಾರೆ. ಸಿಲುಕಿರುವವರ ರಕ್ಷಣೆ ಹಾಗೂ ಸ್ಥಳಾಂತರ ಕಾರ್ಯಾಚರಣೆಗಳನ್ನು ತೀವ್ರಗೊಳಿಸಿ, ಅವರು ಸುರಕ್ಷಿತವಾಗಿ ಹಾಗೂ ಶೀಘ್ರವಾಗಿ ಭಾರತಕ್ಕೆ ಮರಳಲು ಅಗತ್ಯವಿರುವ ಎಲ್ಲ ವ್ಯವಸ್ಥೆಗಳನ್ನು ಮಾಡುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ನಿರ್ದೇಶನ ನೀಡಬೇಕು ಎಂದು ಪ್ರಧಾನಿ ಅವರನ್ನು ಒತ್ತಾಯಿಸಿದ್ದಾರೆ.

"ಈ ಕಷ್ಟದ ಸಮಯದಲ್ಲಿ ಭಾರತ ಸರ್ಕಾರ ಸಾಧ್ಯವಿರುವ ಎಲ್ಲ ನೆರವನ್ನು ಒದಗಿಸಲು ತಕ್ಷಣ ಕ್ರಮ ಕೈಗೊಳ್ಳಲಿದೆ ಎಂದು ನಾನು ಭಾವಿಸುತ್ತೇನೆ" ಎಂದು ಖರ್ಗೆ ಪತ್ರದಲ್ಲಿ ತಿಳಿಸಿದ್ದಾರೆ.

11 ಸದಸ್ಯರ ಭಾರತೀಯ ತಂಡ ನೇಪಾಳಕ್ಕೆ ಏತನ್ಮಧ್ಯೆ, ಹಠಾತ್ ಪ್ರವಾಹದಿಂದ ಭಾರಿ ಹಾನಿಗೊಳಗಾದ ನೇಪಾಳದಲ್ಲಿ ಸ್ಥಳೀಯ ಅಧಿಕಾರಿಗಳಿಗೆ ನೆರವಾಗಲು 11 ಸದಸ್ಯರ ಭಾರತೀಯ ತಂಡ ಶನಿವಾರ ನೇಪಾಳ ತಲುಪಿದೆ.ವೈದ್ಯಕೀಯ ಸಿಬ್ಬಂದಿ ಹಾಗೂ ಸುರಂಗ ರಕ್ಷಣಾ ತಜ್ಞರನ್ನು ಒಳಗೊಂಡಿರುವ ಈ ತಂಡವನ್ನು ನೇಪಾಳ ಸರ್ಕಾರದ ಮನವಿ ಮೇರೆಗೆ ಕಳುಹಿಸಲಾಗಿದೆ ಎಂದು ಭಾರತೀಯ ರಾಯಭಾರ ಕಚೇರಿ ಮೂಲಗಳು ತಿಳಿಸಿವೆ.

ಹಿಮಾಲಯ ರಾಷ್ಟ್ರದಲ್ಲಿ ಹಠಾತ್ ಪ್ರವಾಹದಿಂದ ತೀವ್ರವಾಗಿ ಬಾಧಿತವಾಗಿರುವ ಪ್ರದೇಶಗಳಲ್ಲಿ ದೊಡ್ಡ ಪ್ರಮಾಣದ ರಕ್ಷಣಾ ಹಾಗೂ ಪರಿಹಾರ ಕಾರ್ಯಾಚರಣೆಗಳು ನಡೆಯುತ್ತಿವೆ. ರಸುವಾ ಸೇರಿದಂತೆ ಹಲವು ಪ್ರದೇಶಗಳು ಭಾರಿ ಪ್ರವಾಹಕ್ಕೆ ತುತ್ತಾಗಿದ್ದು, ವಸತಿ ಪ್ರದೇಶಗಳು, ರಸ್ತೆಗಳು, ಸೇತುವೆಗಳು ಹಾಗೂ ಜಲವಿದ್ಯುತ್ ಮೂಲಸೌಕರ್ಯಗಳಿಗೆ ವ್ಯಾಪಕ ಹಾನಿಯಾಗಿದೆ.

# ನೇಪಾಳದಲ್ಲಿ ಪ್ರವಾಹದಿಂದ 600 ಮಂದಿ ಸಾವು: ಕ್ಷಣ ಕ್ಷಣಕ್ಕೂ ಹೆಚ್ಚುತ್ತಿರುವ ಸಾವಿನ ಸಂಖ್ಯೆ

ವಿಜಯ ದುಂಬಿ ಸುದ್ದಿ....

**ಕಠ್ಮಂಡು: ನೇಪಾಳದಲ್ಲಿ ಸಂಭವಿಸಿದ ಭೀಕರ ಪ್ರವಾಹದಲ್ಲಿ ಸಾವನ್ನಪ್ಪಿದವರ ಸಂಖ್ಯೆ 600 ದಾಟಿದ್ದು, ದೇಶದ ಆರೋಗ್ಯ ಮತ್ತು ಆಡಳಿತ ವ್ಯವಸ್ಥೆಯನ್ನು ತೀವ್ರ ಒತ್ತಡಕ್ಕೆ ಸಿಲುಕಿಸಿದೆ. ಹೆಚ್ಚುತ್ತಿರುವ ಶವಗಳ ಸಂಖ್ಯೆಯು ಆಸ್ಪತ್ರೆ ಶವಾಗಾರಗಳಲ್ಲಿ ಸ್ಥಳಾವಕಾಶದ ಕೊರತೆಗೆ ಕಾರಣವಾಗುತ್ತಿದೆ. ದೇಶದ ಶವಾಗಾರಗಳ ಒಟ್ಟು ಸಾಮರ್ಥ್ಯವು ಸುಮಾರು 350 ಶವಗಳನ್ನು ಮಾತ್ರ ಇರಿಸಲು ಸಾಧ್ಯವಾಗಿದೆ ಮತ್ತು ಪ್ರವಾಹ ಸಂತ್ರಸ್ತರ ಸಂಖ್ಯೆ ಹೆಚ್ಚುತ್ತಿರುವುದರಿಂದ ಶವಾಗಾರಗಳನ್ನು ಸಂಗ್ರಹಿಸುವುದು ಒಂದು ದೊಡ್ಡ ಸವಾಲಾಗಿದೆ.**



ಪ್ರವಾಹದಲ್ಲಿ ಸಾವನ್ನಪ್ಪಿದವರ ಅಧಿಕೃತ ಸಂಖ್ಯೆ ಈಗಾಗಲೇ 600 ದಾಟಿದೆ, 2,500 ಕ್ಕೂ ಹೆಚ್ಚು ಜನರು ಇನ್ನೂ ಕಾಣೆಯಾಗಿದ್ದಾರೆ. ಸಾವಿನ ಸಂಖ್ಯೆ ಮತ್ತಷ್ಟು ಹೆಚ್ಚಾಗುವ ಭಯವಿದೆ. ಮೃತದೇಹಗಳನ್ನು ಸಂಗ್ರಹಿಸಲು ಶವಾಗಾರಗಳಲ್ಲಿ ಸ್ಥಳಾವಕಾಶದ ಕೊರತೆಯ ಹಿನ್ನೆಲೆಯಲ್ಲಿ, ಶವಾಗಾರಗಳಲ್ಲಿ ಶೂನ್ಯ ಡಿಗ್ರಿ ಸೆಲ್ಸಿಯಸ್ ತಾಪಮಾನದಲ್ಲಿ ಮೃತರನ್ನು ಸಂರಕ್ಷಿಸಲು ಆಡಳಿತವು ತಾತ್ಕಾಲಿಕ ಸೌಲಭ್ಯಗಳನ್ನು ಸ್ಥಾಪಿಸಿದೆ. ಕಾಣೆಯಾದವರ ಕುಟುಂಬಗಳು ಬಂದು ಶವಗಳನ್ನು ಗುರುತಿಸಲು ಅನುಕೂಲವಾಗುವಂತೆ ಅಗತ್ಯ ವ್ಯವಸ್ಥೆಗಳನ್ನು ಮಾಡಲಾಗಿದೆ. ಮುಖಗಳನ್ನು ಗುರುತಿಸಲು ಕಷ್ಟಕರವಾಗಿರುವ ಶವಗಳ ಛಾಯಾಚಿತ್ರಗಳನ್ನು ಕುಟುಂಬಗಳಿಗೆ ತೋರಿಸಲಾಗುತ್ತಿದೆ. ಗುರುತಿಸಲಾಗದ ಶವಗಳಿಂದ ಬೆರಳಚ್ಚುಗಳು ಮತ್ತು ಡಿಎನ್ಎ ಮಾದರಿಗಳನ್ನು ಸಂಗ್ರಹಿಸಲಾಗುತ್ತಿದೆ ಮತ್ತು ಮಾರ್ಗಸೂಚಿಗಳ ಪ್ರಕಾರ ಮುಂದಿನ ಕ್ರಮ ಕೈಗೊಳ್ಳಲಾಗುತ್ತಿದೆ.

ನೇಪಾಳ ಸರ್ಕಾರವು ರಕ್ಷಣಾ ಮತ್ತು ಶೋಧ ಕಾರ್ಯಾಚರಣೆಗಳಲ್ಲಿ ಸ್ಥಳೀಯ ಭದ್ರತಾ ಪಡೆಗಳೊಂದಿಗೆ ಭಾರತ ಮತ್ತು ಚೀನಾದ ವಿಶೇಷ ರಕ್ಷಣಾ ತಂಡಗಳ ಸಹಾಯವನ್ನು ಸಹ ಪಡೆಯುತ್ತಿದೆ. ಬಲಿಪಶುಗಳ ಸಂಬಂಧಿಕರು ಅವುಗಳನ್ನು ಗುರುತಿಸಿ ಅವುಗಳನ್ನು ಪಡೆಯುವವರೆಗೆ ಪೊಲೀಸರು ಶವಗಳನ್ನು ತಾತ್ಕಾಲಿಕ ಕೇಂದ್ರಗಳಲ್ಲಿ ಸುರಕ್ಷಿತವಾಗಿಡಲು ಹೆಣಗಾಡುತ್ತಿದ್ದಾರೆ. ಈ ನೈಸರ್ಗಿಕ ವಿಕೋಪದ ಸಮಯದಲ್ಲಿ ನೇಪಾಳಕ್ಕೆ ಅಂತರರಾಷ್ಟ್ರೀಯ ಸಮುದಾಯದಿಂದ ಹೆಚ್ಚಿನ ತುರ್ತು ಸಹಾಯದ ಅಗತ್ಯವಿದೆ. ಹಂತ ಹಂತವಾಗಿ ಗುರುತಿನ ಪ್ರಕ್ರಿಯೆ ಶವಗಳನ್ನು ಗುರುತಿಸಲು ನೇಪಾಳ ಪೊಲೀಸರು ಹಂತ ಹಂತವಾಗಿ ಪ್ರಕ್ರಿಯೆಯನ್ನು ಅನುಸರಿಸುತ್ತಿದ್ದಾರೆ.

ಚೇತರಿಸಿಕೊಂಡ ಶವವನ್ನು ಮೊದಲು ನೋಂದಾಯಿಸಲಾಗುತ್ತದೆ ಮತ್ತು ಸಾಧ್ಯವಾದರೆ, ಛಾಯಾಚಿತ್ರ ತೆಗೆಯಲಾಗುತ್ತದೆ. ದೇಹವು ಮಣ್ಣು, ಮಣ್ಣು ಅಥವಾ ಭಗ್ನಾವಶೇಷಗಳಿಂದ ಮುಚ್ಚಲ್ಪಟ್ಟಿದ್ದರೆ, ಅದನ್ನು ಸ್ವಚ್ಛಗೊಳಿಸಲಾಗುತ್ತದೆ ಮತ್ತು ಗುರುತಿನ ಸಂಖ್ಯೆಯನ್ನು ಹೊಂದಿರುವ ಟ್ಯಾಗ್ ಅನ್ನು ದೇಹದ ಚೀಲಕ್ಕೆ ಜೋಡಿಸಲಾಗುತ್ತದೆ. ನಂತರ ಶವಗಳನ್ನು ಕಡಿಮೆ ತಾಪಮಾನದಲ್ಲಿ ಸಂರಕ್ಷಣೆಗಾಗಿ ತಾತ್ಕಾಲಿಕ ಸೌಲಭ್ಯಗಳಿಗೆ ಸ್ಥಳಾಂತರಿಸಲಾಗುತ್ತದೆ. ಕಾಣೆಯಾದವರ ಕುಟುಂಬಗಳು ಬಂದಾಗ, ಚೇತರಿಸಿಕೊಂಡ ಶವಗಳ ಛಾಯಾಚಿತ್ರಗಳನ್ನು ತೋರಿಸುವ ಮೂಲಕ ಗುರುತಿನ ಪ್ರಕ್ರಿಯೆಯನ್ನು ಕೈಗೊಳ್ಳಲಾಗುತ್ತದೆ. ಮುಖ ಗುರುತಿಸುವಿಕೆ ಸಾಧ್ಯವಾಗದ ಸಂದರ್ಭಗಳಲ್ಲಿ, ಬೆರಳಚ್ಚುಗಳು ಮತ್ತು ಡಿಎನ್ಎ ಮಾದರಿಗಳನ್ನು ಸಂಗ್ರಹಿಸುವುದು ಒಂದು ಪ್ರಮುಖ ಹಂತವಾಗಿದೆ. ಇದರಿಂದ ಭವಿಷ್ಯದಲ್ಲಿ ವೈಜ್ಞಾನಿಕವಾಗಿ ಗುರುತಿಸಲಾಗದ ದೇಹಗಳನ್ನು ತಕ್ಷಣ ಗುರುತಿಸಲು ಸಾಧ್ಯವಾಗುತ್ತದೆ.

## ನಾಯಕನ ಆತ್ಮಚರಿತ್ರೆ ರಾಜಕೀಯ ಮತ್ತು ಸಾಹಿತ್ಯ ವಲಯಗಳಲ್ಲಿ ಸಂಚಲನ ಮೂಡಿಸಿದೆ.

ವಿಜಯ ದುಂಬಿ ಸುದ್ದಿ....

**ನವದೆಹಲಿ: ಹಿರಿಯ ಯುಪಿಎ ನಾಯಕಿ ಮತ್ತು ಮಾಜಿ ಕಾಂಗ್ರೆಸ್ ಅಧ್ಯಕ್ಷೆ ಸೋನಿಯಾ ಗಾಂಧಿಯವರ ಬಹುನಿರೀಕ್ಷಿತ ಆತ್ಮಚರಿತ್ರೆ 'ಬಿಲಾಂಗಿಂಗ್: ಎ ಜರ್ನಿ ಆಫ್ ಲವ್' ಬಿಡುಗಡೆಯು ರಾಜಕೀಯ ಮತ್ತು ಸಾಹಿತ್ಯ ವಲಯಗಳಲ್ಲಿ ಬಿಸಿ ಚರ್ಚೆಗೆ ಕಾರಣವಾಗಿದೆ. ಪುಸ್ತಕದ ಒಪ್ಪಂದ ಮತ್ತು ಸಂಪಾದಕೀಯ ಬದಲಾವಣೆಗಳ ಕುರಿತು ಪ್ರಕಾಶನ ಸಂಸ್ಥೆ ಮತ್ತು ಕಾಂಗ್ರೆಸ್ ನಡುವೆ ಮಾತಿನ ಸಮರ ಭುಗಿಲೆದ್ದಿದೆ. ನವೆಂಬರ್ 10 ರಂದು ಜಾಗತಿಕವಾಗಿ ಬಿಡುಗಡೆಯಾಗಲಿರುವ ಆತ್ಮಚರಿತ್ರೆಯನ್ನು ಭಾರತದಲ್ಲಿ ಪ್ರಕಟಿಸಬೇಕಿದ್ದ ಪೆಂಗ್ವಿನ್ ರಾಂಡಮ್ ಹೌಸ್ ಇಂಡಿಯಾ, ಭಾರತೀಯ ಆವೃತ್ತಿಯ ಪ್ರಕಾಶಕರಲ್ಲ ಎಂದು ಅಧಿಕೃತವಾಗಿ ಸ್ಪಷ್ಟಪಡಿಸಿದೆ.**




ಹಸ್ತಪ್ರತಿಯಲ್ಲಿ ಕೆಲವು ಸಂಪಾದಕೀಯ ಬದಲಾವಣೆಗಳು ಮತ್ತು ಸತ್ಯ-ಪರಿಶೀಲನಾ ಶಿಫಾರಸುಗಳನ್ನು ಮಾಡುವುದು ಪ್ರಕಾಶನ ಸಂಸ್ಥೆಯ ಸಾಮಾನ್ಯ ಪ್ರಕ್ರಿಯೆ ಎಂದು ಪೆಂಗ್ವಿನ್ ಸಮರ್ಥಿಸಿಕೊಂಡಿದೆ. ಆದಾಗ್ಯೂ, ಲೇಖಕಿ ಸೋನಿಯಾ ಗಾಂಧಿ ಪ್ರಕಾಶಕರು ಸೂಚಿಸಿದ ಬದಲಾವಣೆಗಳಿಗೆ ಒಪ್ಪದ ನಂತರ ಇಬ್ಬರ ನಡುವಿನ ಒಪ್ಪಂದವು ಮುರಿದುಬಿದ್ದಿದೆ ಎಂದು ಹೇಳಲಾಗಿದೆ. ಪುಸ್ತಕದ ಭಾರತೀಯ ಪ್ರಕಾಶನ ಹಕ್ಕುಗಳಿಗಾಗಿ ಹಾರ್ಪರ್‌ಕಾಲಿನ್ಸ್ ಮತ್ತು ಇತರ ಪ್ರಕಾಶನ ಸಂಸ್ಥೆಗಳೊಂದಿಗೆ ಮಾತುಕತೆ ನಡೆಯುತ್ತಿದೆ ಎಂದು ವರದಿಯಾಗಿದೆ. ಕಾಂಗ್ರೆಸ್ ಆಕ್ರೋಶ, ಗಂಭೀರ ಆರೋಪಗಳು ಪುಸ್ತಕದ ಪ್ರಕಟಣೆಯಲ್ಲಿ ವಿಳಂಬವು ಕೇಂದ್ರ ಸರ್ಕಾರದ ಪರೋಕ್ಷ ರಾಜಕೀಯ ಒತ್ತಡದಿಂದಾಗಿ ಎಂದು ಹಿರಿಯ ಕಾಂಗ್ರೆಸ್ ನಾಯಕರು ಆರೋಪಿಸಿದ್ದಾರೆ. ಪ್ರಧಾನಿ ನರೇಂದ್ರ ಮೋದಿ, ಆರ್‌ಎಸ್‌ಎಸ್ ಮತ್ತು ಚೀನಾದ ಆಕ್ರಮಣದ ಬಗ್ಗೆ ಸೂಕ್ಷ್ಮ ಮತ್ತು ನಿರ್ಣಾಯಕ ಅಂಶಗಳನ್ನು ಕೈಬಿಡಲು ಅಥವಾ ಬದಲಾಯಿಸಲು ಪ್ರಕಾಶಕರ ಮೇಲೆ ಒತ್ತಡ ಹೇರಲಾಗಿದೆ ಎಂದು ಕಾಂಗ್ರೆಸ್ ನಾಯಕ ಅಶೋಕ್ ಗೆಹ್ಲೋಟ್ ಆರೋಪಿಸಿದ್ದಾರೆ. ಜಾಗತಿಕವಾಗಿ ಅದರ ಮೂಲ ರೂಪದಲ್ಲಿ ಪ್ರಕಟವಾಗುವ ಆದರೆ ಭಾರತದಲ್ಲಿ ಮಾತ್ರ ಬದಲಾವಣೆಗಳೊಂದಿಗೆ ಪುಸ್ತಕವನ್ನು ಪ್ರಕಟಿಸುವ ನಿರ್ಧಾರವು ಅಭಿವ್ಯಕ್ತಿ ಸ್ವಾತಂತ್ರ್ಯದ ಕಗ್ಗೊಲೆಯಾಗಿದೆ ಎಂದು ವಿರೋಧ ಪಕ್ಷದ ನಾಯಕರು ಆರೋಪಿಸಿದ್ದಾರೆ. ಬಿಜೆಪಿ ಆರೋಪಗಳನ್ನು ತಿರಸ್ಕರಿಸಿದ ಬಿಜೆಪಿ ಮತ್ತು ಬಲಪಂಥೀಯ ಚಿಂತಕರು ಕಾಂಗ್ರೆಸ್ ಪಕ್ಷವು ರಾಜಕೀಯ ಲಾಭಕ್ಕಾಗಿ ಆಧಾರರಹಿತ ಆರೋಪಗಳನ್ನು ಮಾಡುತ್ತಿದೆ ಎಂದು ತಿರುಗೇಟು ನೀಡಿದ್ದಾರೆ. ಯಾವುದೇ ಆತ್ಮಚರಿತ್ರೆ ಅಥವಾ ಕೃತಿಯಲ್ಲಿ ಜೀವಂತ ವ್ಯಕ್ತಿಗಳ ವಿರುದ್ಧ ಮತ್ತು ದೇಶದ ಭದ್ರತೆ ಅಥವಾ ಗಡಿರೇಖೆಗಳಿಗೆ ಸಂಬಂಧಿಸಿದ ಸೂಕ್ಷ್ಮ ವಿಷಯಗಳ ವಿರುದ್ಧ ಆರೋಪಗಳಿದ್ದಾಗ ಕಾನೂನು ಮತ್ತು ಸಂಪಾದಕೀಯ ದೃಷ್ಟಿಕೋನದಿಂದ ಸತ್ಯ ಪರಿಶೀಲನೆ ನಡೆಸುವುದು ಪ್ರಕಾಶನ ಸಂಸ್ಥೆಗಳ ಜವಾಬ್ದಾರಿಯಾಗಿದೆ ಎಂದು ಬಿಜೆಪಿ ನಾಯಕರು ಹೇಳಿದ್ದಾರೆ. ಪ್ರತಿ ಸಂಪಾದಕೀಯ ಭಿನ್ನಾಭಿಪ್ರಾಯವನ್ನು ಪುರಾವೆಗಳಿಲ್ಲದೆ ಸರ್ಕಾರದ ಹಸ್ತಕ್ಷೇಪ ಎಂದು ಬಿಂಬಿಸುವುದು ಸರಿಯಲ್ಲ ಎಂದು ಅವರು ದಾಳಿ ಮಾಡಿದ್ದಾರೆ. ಆತ್ಮಚರಿತ್ರೆಗಳು ಭಾರತೀಯ ರಾಜಕೀಯಕ್ಕೆ ಹೊಸದಲ್ಲ. ಇತ್ತೀಚಿನ ದಿನಗಳಲ್ಲಿ, ಪ್ರಮುಖ ರಾಜಕೀಯ ನಾಯಕರು ಮತ್ತು ಸೇನಾ ಅಧಿಕಾರಿಗಳ ಪುಸ್ತಕಗಳನ್ನು ಪ್ರಕಟಿಸುವ ಅಥವಾ ವಿತರಿಸುವಲ್ಲಿ ಪ್ರಕಾಶಕರು ಎಚ್ಚರಿಕೆಯ ಹೆಜ್ಜೆ ಇಡುತ್ತಿದ್ದಾರೆ, ಇದು ಮತ್ತೊಮ್ಮೆ ಚರ್ಚೆಗೆ ಬಂದಿದೆ. ಸೋನಿಯಾ ಗಾಂಧಿಯವರ ಈ ಆತ್ಮಚರಿತ್ರೆಯು ಅವರ ಮೂರು ದಶಕಗಳ ರಾಜಕೀಯ ಪ್ರಯಾಣ, ಕಠಿಣ ದಿನಗಳು ಮತ್ತು ಪ್ರಮುಖ ರಾಜಕೀಯ ನಿರ್ಧಾರಗಳ ಒಳನೋಟಗಳನ್ನು ಒಳಗೊಂಡಿದೆ ಎಂದು ಹೇಳಲಾಗುತ್ತದೆ.

# 65 ಬಿಲಿಯನ್ ಬ್ಯಾರೆಲ್ ವೆನೆಜುವೆಲಾದ ತೈಲವನ್ನು ಅಮೆರಿಕ ತನ್ನ ವಶಕ್ಕೆ ತೆಗೆದುಕೊಳ್ಳಲಿದೆ: ಟ್ರಂಪ್ ಘೋಷಣೆ

ವಿಜಯ ದುಂಬಿ ಸುದ್ದಿ....

**ವಾಷಿಂಗ್ಟನ್: ದಕ್ಷಿಣ ಅಮೆರಿಕಾದಲ್ಲಿರುವ 65 ಬಿಲಿಯನ್ ಬ್ಯಾರೆಲ್ ವೆನೆಜುವೆಲಾದ ತೈಲ ನಿಕ್ಷೇಪಗಳನ್ನು ನಿಯಂತ್ರಣಕ್ಕೆ ತೆಗೆದುಕೊಳ್ಳುವ ಒಪ್ಪಂದಕ್ಕೆ ಅಮೆರಿಕ ಬಂದಿರುವುದಾಗಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಘೋಷಿಸಿದ್ದಾರೆ.**

ಸಾಮಾಜಿಕ ಮಾಧ್ಯಮದಲ್ಲಿ ಈ ಬಗ್ಗೆ ಮಾಹಿತಿ ನೀಡಿದ ಟ್ರಂಪ್, ಅಮೆರಿಕದ ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರೂಬಿಯೊ, ರಕ್ಷಣಾ ಕಾರ್ಯದರ್ಶಿ ಪೀಟ್ ಹೆಗ್ಸೆತ್ ಮತ್ತು ವೆನೆಜುವೆಲಾದ ಮಧ್ಯಂತರ ಅಧ್ಯಕ್ಷ ಡೆಲ್ಸಿ ರೊಡ್ರಿಗಸ್ ಅವರು ಒಪ್ಪಂದದ ಮಾತುಕತೆಗಳಲ್ಲಿ ಭಾಗವಹಿಸಿದ್ದಾರೆ ಎಂದು ಹೇಳಿದರು.



ವೆನೆಜುವೆಲಾದೊಂದಿಗೆ ವಿಶ್ವ ಇತಿಹಾಸದಲ್ಲಿಯೇ ಅಮೆರಿಕವು ಅತಿದೊಡ್ಡ ತೈಲ ಒಪ್ಪಂದವನ್ನು ಮಾಡಿಕೊಂಡಿದೆ ಎಂದು ಟ್ರಂಪ್ ತಮ್ಮ ಪೋಸ್ಟ್‌ನಲ್ಲಿ ಹೇಳಿದ್ದಾರೆ. ವೆನೆಜುವೆಲಾದ ಅಧ್ಯಕ್ಷ ನಿಕೋಲಸ್ ಮಡುರೊ ಅವರನ್ನು ಅಮೆರಿಕದ ಮಿಲಿಟರಿ ಕಾರ್ಯಾಚರಣೆಯಲ್ಲಿ ಬಂಧಿಸಿ ಮಾದಕವಸ್ತು ಕಳ್ಳಸಾಗಣೆ ಮತ್ತು ಮಾದಕವಸ್ತು ಭಯೋತ್ಪಾದನೆ ಆರೋಪದ ಮೇಲೆ ಅಮೆರಿಕಕ್ಕೆ ಕರೆದೊಯ್ಯಲಾದ ಸುಮಾರು ಒಂಬತ್ತು ತಿಂಗಳ ನಂತರ ಒಪ್ಪಂದದ ಘೋಷಣೆಯಾಗಿದೆ.

ಇರಾನ್ ಯುದ್ಧವು ಅಂತ್ಯದ ಯಾವುದೇ ಲಕ್ಷಣವಿಲ್ಲದೆ ಆರು ತಿಂಗಳ ಕಾಲ ಮುಂದುವರಿದಿರುವುದರಿಂದ ಅಮೆರಿಕದ ತೈಲ ಬೆಲೆಗಳು ಏರುತ್ತಿರುವುದರಿಂದ ಟ್ರಂಪ್ ಆಡಳಿತವು ಹೆಚ್ಚುತ್ತಿರುವ ಒತ್ತಡದಲ್ಲಿದೆ. ಏತನ್ಮಧ್ಯೆ, ಆಗಸ್ಟ್ ಆರಂಭದಲ್ಲಿ 300 ಮಿಲಿಯನ್ ಬ್ಯಾರೆಲ್‌ಗಳಿಗಿಂತ ಕಡಿಮೆ ಇರುವ ತನ್ನ ಕಾರ್ಯತಂತ್ರದ ಪೆಟ್ರೋಲಿಯಂ ಮೀಸಲು ಪ್ರದೇಶದಿಂದ ಅಮೆರಿಕ ತೈಲವನ್ನು ಹೊರತೆಗೆದಿದೆ ಎಂದು ವರದಿಯಾಗಿದೆ. ವೆನೆಜುವೆಲಾ ವಿಶ್ವದ ಅತಿದೊಡ್ಡ ತೈಲ ಉತ್ಪಾದಕ ರಾಷ್ಟ್ರವಾಗಿದ್ದು, ಅಂದಾಜು 303 ಶತಕೋಟಿ ಬ್ಯಾರೆಲ್ ಕಚ್ಚಾ ತೈಲವು ತನ್ನ ನಿಕ್ಷೇಪಗಳಲ್ಲಿದೆ, ಇದು ಜಾಗತಿಕ ತೈಲ ನಿಕ್ಷೇಪಗಳ ಸುಮಾರು 17 ಪ್ರತಿಶತದಷ್ಟಿದೆ ಎಂದು ಯುಎಸ್ ಇಂಧನ ಮಾಹಿತಿ ಆಡಳಿತ ತಿಳಿಸಿದೆ. ಆದಾಗ್ಯೂ, ವೆನೆಜುವೆಲಾ ತನ್ನ ಹಳೆಯ ಮತ್ತು ಹದಗೆಡುತ್ತಿರುವ ಮೂಲಸೌಕರ್ಯದಿಂದಾಗಿ ಪ್ರಸ್ತುತ ಜಾಗತಿಕ ತೈಲ ಉತ್ಪಾದನೆಯ ಕೇವಲ 1 ಪ್ರತಿಶತವನ್ನು ಮಾತ್ರ ಉತ್ಪಾದಿಸುತ್ತದೆ ಎಂದು ತಜ್ಞರು ಹೇಳುತ್ತಾರೆ.

# ನೇಪಾಳಕ್ಕೆ ಆಗಮಿಸಿದ 11 ಸದಸ್ಯರ ಭಾರತೀಯ ಸುರಂಗ ರಕ್ಷಣಾ ತಜ್ಞರ ತಂಡ

ವಿಜಯ ದುಂಬಿ ಸುದ್ದಿ....

**ಕಠ್ಮಂಡು: 500 ಕ್ಕೂ ಹೆಚ್ಚು ಜನರು ಸಾವನ್ನಪ್ಪಿ, ಸುಮಾರು 2,000 ಜನರು ಕಾಣೆಯಾಗಿರುವ ಹಠಾತ್ ಪ್ರವಾಹದ ಹಿನ್ನೆಲೆಯಲ್ಲಿ ರಕ್ಷಣಾ ಕಾರ್ಯಾಚರಣೆಯಲ್ಲಿ ಸ್ಥಳೀಯ ಅಧಿಕಾರಿಗಳಿಗೆ ಸಹಾಯ ಮಾಡಲು 11 ಸದಸ್ಯರ ಭಾರತೀಯ ತಂಡ ಇಂದು ನೇಪಾಳಕ್ಕೆ ಆಗಮಿಸಿದೆ. ನೇಪಾಳ ಸರ್ಕಾರದ ಕೋರಿಕೆಯ ಮೇರೆಗೆ ವೈದ್ಯಕೀಯ ಸಿಬ್ಬಂದಿ ಮತ್ತು ಸುರಂಗ ರಕ್ಷಣಾ ತಜ್ಞರನ್ನು ಒಳಗೊಂಡ ಈ ತಂಡವನ್ನು ಕಳುಹಿಸಲಾಗಿದೆ ಎಂದು ಭಾರತೀಯ ರಾಯಭಾರ ಕಚೇರಿ ಮೂಲಗಳು ತಿಳಿಸಿವೆ.**

ಹಠಾತ್ ಪ್ರವಾಹದಿಂದ ತೀವ್ರವಾಗಿ ಹಾನಿಗೊಳಗಾದ ಹಿಮಾಲಯನ್ ರಾಷ್ಟ್ರದಲ್ಲಿ ಬೃಹತ್ ರಕ್ಷಣಾ ಮತ್ತು ಪರಿಹಾರ ಕಾರ್ಯಾಚರಣೆಗಳಲ್ಲಿ ಸಹಾಯ ಮಾಡಲು ಭಾರತೀಯ ತಂಡವನ್ನು ನಿಯೋಜಿಸಲಾಗಿದೆ.



ರಸುವಾ ಸೇರಿದಂತೆ ಮಧ್ಯ ನೇಪಾಳದ ಹಲವಾರು ಪ್ರದೇಶಗಳಲ್ಲಿ ಬುಧವಾರ ಭಾರಿ ಹಠಾತ್ ಪ್ರವಾಹ ಸಂಭವಿಸಿದ್ದು, 500 ಕ್ಕೂ ಹೆಚ್ಚು ಜನರು ಸಾವನ್ನಪ್ಪಿದ್ದಾರೆ. ಪ್ರವಾಹವು ವಸತಿ ಪ್ರದೇಶಗಳು, ರಸ್ತೆಗಳು, ಸೇತುವೆಗಳು ಮತ್ತು ಜಲವಿದ್ಯುತ್ ಮೂಲಸೌಕರ್ಯಗಳಿಗೆ ವ್ಯಾಪಕ ಹಾನಿಯನ್ನುಂಟುಮಾಡಿದೆ. ಸ್ಥಳೀಯ ಪರಿಸ್ಥಿತಿಗಳು ಮತ್ತು ಒರಟಾದ ಭೂಪ್ರದೇಶವನ್ನು ಚೆನ್ನಾಗಿ ತಿಳಿದಿರುವ ತನ್ನದೇ ಆದ ಭದ್ರತಾ ಪಡೆಗಳ ಗರಿಷ್ಠ ನಿಯೋಜನೆಗೆ ಆದ್ಯತೆ ನೀಡುವುದಾಗಿ ನೇಪಾಳ ನಿನ್ನೆ ಹೇಳಿತ್ತು.

ಆದಾಗ್ಯೂ, ಅತ್ಯಂತ ಸಂಕೀರ್ಣವಾದ ಭೌತಿಕ ರಚನೆಗಳಲ್ಲಿ ರಕ್ಷಣಾ ಕಾರ್ಯಾಚರಣೆಗಳನ್ನು ನಡೆಸಲು ವಿಶೇಷ ತಾಂತ್ರಿಕ ಕೌಶಲ್ಯಗಳು ಅಗತ್ಯವಿರುವ ಸಂದರ್ಭಗಳಲ್ಲಿ ಅಂತರರಾಷ್ಟ್ರೀಯ ಸಹಾಯವನ್ನು ಪಡೆಯಲು ಸರ್ಕಾರ ಸಿದ್ಧವಾಗಿದೆ ಎಂದು ವಿದೇಶಾಂಗ ಸಚಿವ ಶಿಶಿರ್ ಖನಾಲ್ ಹೇಳಿದ್ದಾರೆ. 42 ಬೈಲಿ ಸೇತುವೆಗಳ ನಿರ್ಮಾಣಕ್ಕೆ ವಿನಂತಿ ನೇಪಾಳವು ಪ್ರವಾಹ ಪೀಡಿತ ಪ್ರದೇಶಗಳಲ್ಲಿ ಸಾರಿಗೆ ಸಂಪರ್ಕವನ್ನು ಪುನಃಸ್ಥಾಪಿಸಲು 42 ಬೈಲಿ ಸೇತುವೆಗಳನ್ನು ನಿರ್ಮಿಸಲು ಸಹಾಯ ಮಾಡುವಂತೆ ಭಾರತ ಮತ್ತು ಚೀನಾವನ್ನು ವಿನಂತಿಸಿದೆ. ಈ ಪೋರ್ಟಬಲ್ ಸೇತುವೆಗಳನ್ನು ಭಾರೀ ಯಂತ್ರೋಪಕರಣಗಳು ಅಥವಾ ವಿಶೇಷ ಉಪಕರಣಗಳ ಅಗತ್ಯವಿಲ್ಲದೆ ತ್ವರಿತವಾಗಿ ಜೋಡಿಸಲು ವಿನ್ಯಾಸಗೊಳಿಸಲಾಗಿದೆ ಮತ್ತು ಪ್ರವಾಹದಿಂದ ಹಾನಿಗೊಳಗಾದ ರಸ್ತೆ ಸಂಪರ್ಕವನ್ನು ತ್ವರಿತವಾಗಿ ಪುನಃಸ್ಥಾಪಿಸಲು ಸಹಾಯ ಮಾಡುತ್ತದೆ.

# ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕೆರೆಗಳ ಅತಿಕ್ರಮಣ ತೆರವು

ವಿಜಯ ದುಂಬಿ ಸುದ್ದಿ....

**ಬೆಂಗಳೂರು: ಕೆರೆಗಳು ಗ್ರಾಮೀಣ ಪ್ರದೇಶದ ಜನರ ಜೀವನಾಡಿಯಾಗಿದ್ದು, ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕೆರೆಗಳ ಒತ್ತುವರಿ ತೆರವುಗೊಳಿಸಲು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ್ ಬಿ ಖಂಡ್ರೆ ಮುಂದಾಗಿದ್ದಾರೆ.**

ಈ ಸಂಬಂಧ ಇಲಾಖೆಯ ಕಾರ್ಯದರ್ಶಿಗೆ ಲಿಖಿತ ಸೂಚನೆ ನೀಡಿರುವ ಅವರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವ್ಯಾಪ್ತಿಯಲ್ಲಿರುವ ಕೆರೆಗಳ ಸಂಖ್ಯೆ, ಯಾವ



ಕೆರೆಗಳ ವಿಸ್ತೀರ್ಣ ಮತ್ತು ಈ ಒತ್ತುವರಿ ತೆರವುಗೊಳಿಸಲು ತೆಗೆದುಕೊಂಡ ಕ್ರಮಗಳ ಬಗ್ಗೆ 10 ದಿನಗಳಲ್ಲಿ ಸಂಪೂರ್ಣ ಮಾಹಿತಿಯನ್ನು ಸಲ್ಲಿಸುವಂತೆ ಕೇಳಿಕೊಂಡಿದ್ದಾರೆ. ಮುಂದಿನ 30 ವರ್ಷಗಳಲ್ಲಿ ಗ್ರಾಮೀಣ ಪ್ರದೇಶಗಳಲ್ಲಿ ಜನಸಂಖ್ಯೆ ಹೆಚ್ಚಳವನ್ನು ಗಮನದಲ್ಲಿಟ್ಟುಕೊಂಡು, ಸರ್ಕಾರವು ಮೇಲ್ಮೈ ನೀರಿನಿಂದ ಶುದ್ಧ ಕುಡಿಯುವ ನೀರನ್ನು ಪೂರೈಸುವ ಯೋಜನೆಯನ್ನು ರೂಪಿಸಿದೆ ಮತ್ತು ಈ ನಿಟ್ಟಿನಲ್ಲಿ, ಸರೋವರಗಳು ಮತ್ತು ಸರೋವರಗಳಂತಹ ಪ್ರಮುಖ ಸಿಹಿನೀರಿನ ಮೂಲಗಳ ಸಂರಕ್ಷಣೆ ಅತ್ಯಗತ್ಯ ಮತ್ತು ಅನಿವಾರ್ಯವಾಗಿದೆ ಎಂದು ಈಶ್ವರ್ ಖಂಡ್ರೆ ಪತ್ರದಲ್ಲಿ ತಿಳಿಸಿದ್ದಾರೆ.

ಭೂಮಿಯ ಮೇಲಿನ ಸಿಹಿನೀರಿನ ಮೂಲವಾದ ಸರೋವರಗಳು ಮತ್ತು ಕೊಳಗಳ ರಕ್ಷಣೆ, ಸುಸ್ಥಿರ ನಿರ್ವಹಣೆ ಮತ್ತು ಪಾತ್ರದ ಬಗ್ಗೆ ಜಾಗತಿಕ ಜಾಗೃತಿ ಮೂಡಿಸುವ ಉದ್ದೇಶದಿಂದ ಪ್ರತಿ ವರ್ಷ ಆಗಸ್ಟ್ 27 ರಂದು ಆಚರಿಸಲಾಗುವ ವಿಶ್ವ ಸರೋವರ ದಿನದಂದು ಸಚಿವರು ಈ ಸೂಚನೆಯನ್ನು ನೀಡಿದರು, ಏಕೆಂದರೆ ಸರೋವರಗಳು ನಾಗರಿಕತೆಯ ಅಭಿವೃದ್ಧಿಯಲ್ಲಿ ಮಹತ್ವದ ಪಾತ್ರ ವಹಿಸುತ್ತವೆ.

# ಉಜ್ಬೇಕಿಸ್ತಾನ್–ಕಿರ್ಗಿಸ್ತಾನ್ ಪ್ರವಾಸಕ್ಕೆ ಪ್ರಧಾನಿ ಮೋದಿ ತೆರಳಿದರು

ವಿಜಯ ದುಂಬಿ ಸುದ್ದಿ....

**ನವದೆಹಲಿ: ಪ್ರಧಾನಿ ನರೇಂದ್ರ ಮೋದಿ ಇಂದು ಉಜ್ಬೇಕಿಸ್ತಾನ್ ಮತ್ತು ಕಿರ್ಗಿಸ್ತಾನ್ ಗಣರಾಜ್ಯಕ್ಕೆ ಎರಡು ರಾಷ್ಟ್ರಗಳ ಪ್ರವಾಸ ಕೈಗೊಂಡಿದ್ದು, ಶಾಂತಿ, ಸ್ಥಿರತೆ ಮತ್ತು ಸಮೃದ್ಧಿಯ ಹಂಚಿಕೆಯ ಅನ್ವೇಷಣೆಯನ್ನು ಮುಂದುವರಿಸುವುದಾಗಿ ಹೇಳಿದ್ದಾರೆ. ಈ ಭೇಟಿಯ ಸಮಯದಲ್ಲಿ ಅವರು ಖಅಔ ಶೃಂಗಸಭೆಯಲ್ಲಿಯೂ ಭಾಗವಹಿಸಲಿದ್ದಾರೆ ಮತ್ತು ಭಾರತದ ಸಂಘಟನೆಯ ದೃಷ್ಟಿಕೋನವನ್ನು ಮತ್ತಷ್ಟು ಹೆಚ್ಚಿಸಲು ಮತ್ತು ಭಯೋತ್ಪಾದನೆಯ ಹಿಡುಗಿನಿಂದ ಮುಕ್ತವಾದ ಪ್ರದೇಶವನ್ನು ನಿರ್ಮಿಸಲು ಸಹ ಸದಸ್ಯ ರಾಷ್ಟ್ರಗಳೊಂದಿಗೆ ಕೆಲಸ ಮಾಡಲು ಎದುರು ನೋಡುತ್ತಿರುವುದಾಗಿ ಹೇಳಿದರು.**




=ಮೋದಿ ಅವರು ಮೊದಲು ಆಗಸ್ಟ್ 29–30 ರಿಂದ ಉಜ್ಬೇಕಿಸ್ತಾನ್‌ಗೆ ಭೇಟಿ ನೀಡಲಿದ್ದಾರೆ ಮತ್ತು ನಂತರ ಆಗಸ್ಟ್ 30 ರಿಂದ ಸೆಪ್ಟೆಂಬರ್ 1 ರವರೆಗೆ ಶೃಂಗಸಭೆಯಲ್ಲಿ ಭಾಗವಹಿಸಲು ಕಿರ್ಗಿಸ್ತಾನ್ ಗಣರಾಜ್ಯದ ರಾಜಧಾನಿ ಬಿಷ್ಕೆಕ್‌ಗೆ ಪ್ರಯಾಣಿಸಲಿದ್ದಾರೆ. ತಮ್ಮ ಭೇಟಿಯು ಮಧ್ಯ ಏಷ್ಯಾದಲ್ಲಿ ಭಾರತದ ಕಾರ್ಯತಂತ್ರದ ಪಾಲುದಾರಿಕೆಯನ್ನು ಮತ್ತಷ್ಟು ಬಲಪಡಿಸುತ್ತದೆ ಮತ್ತು ಈ ಪ್ರದೇಶದೊಂದಿಗೆ ನಾಗರಿಕ–ಜನರ ಸಂಪರ್ಕವನ್ನು ಗಾಢಗೊಳಿಸುತ್ತದೆ ಎಂದು ಮೋದಿ ವಿಶ್ವಾಸ ವ್ಯಕ್ತಪಡಿಸಿದರು. "ಈ ಭೇಟಿಯು ಭಾರತದ ವಿಶ್ವದೊಂದಿಗೆ ಸಂಬಂಧದ ಹೃದಯಭಾಗದಲ್ಲಿರುವ ಶಾಂತಿ, ಸ್ಥಿರತೆ ಮತ್ತು ಹಂಚಿಕೆಯ ಸಮೃದ್ಧಿಯ ಅನ್ವೇಷಣೆಯನ್ನು ಮುನ್ನಡೆಸುತ್ತದೆ," ಎಂದು ಮೋದಿ ತಮ್ಮ ನಿರ್ಗಮನ ಹೇಳಿಕೆಯಲ್ಲಿ ತಿಳಿಸಿದ್ದಾರೆ. ಭಾರತವು 2017 ರಿಂದ ಖಅಔ ಯ ಸಕ್ರಿಯ ಮತ್ತು ರಚನಾತ್ಮಕ ಸದಸ್ಯ ರಾಷ್ಟ್ರವಾಗಿದೆ. ಭಾರತದ ಭದ್ರತೆ, ಸಂಪರ್ಕ ಮತ್ತು ಅವಕಾಶಗಳ ದೃಷ್ಟಿಕೋನವನ್ನು ಮತ್ತಷ್ಟು ಹೆಚ್ಚಿಸಲು ಮತ್ತು ನೆರೆಹೊರೆ ಮತ್ತು ಅದರಾಚೆಗೆ ಶಾಂತಿ ಮತ್ತು ಸ್ಥಿರತೆಗೆ ಬೆದರಿಕೆ ಹಾಕುವ ಭಯೋತ್ಪಾದನೆ,

ಪ್ರತ್ಯೇಕತಾವಾದ ಮತ್ತು ಉಗ್ರವಾದದ ಹಿಡುಗಿನಿಂದ ಮುಕ್ತವಾದ ಪ್ರದೇಶವನ್ನು ನಿರ್ಮಿಸಲು ಸಹ ಸದಸ್ಯ ರಾಷ್ಟ್ರಗಳೊಂದಿಗೆ ಕೆಲಸ ಮಾಡಲು ಎದುರು ನೋಡುತ್ತಿದ್ದೇನೆ ಎಂದು ಮೋದಿ ಹೇಳಿದರು. ಉಜ್ಬೇಕಿಸ್ತಾನ್‌ನೊಂದಿಗೆ ಸಹಕಾರವನ್ನು ಹೆಚ್ಚಿಸುವುದು ಉಜ್ಬೇಕಿಸ್ತಾನ್ ಅಧ್ಯಕ್ಷ ಶವ್ಕತ್ ಮಿರ್ಜಿಯೋಯೆವ್ ಅವರ ಆಹ್ವಾನದ ಮೇರೆಗೆ ಆಗಸ್ಟ್ 29–30 ರವರೆಗೆ ತಾಷ್ಕೆಂಟ್‌ಗೆ ಭೇಟಿ ನೀಡುತ್ತಿರುವುದಾಗಿ ಮೋದಿ ಹೇಳಿದರು. ಭಾರತ–ಉಜ್ಬೇಕಿಸ್ತಾನ್ ಕಾರ್ಯತಂತ್ರದ ಪಾಲುದಾರಿಕೆ ಇತ್ತೀಚಿನ ವರ್ಷಗಳಲ್ಲಿ ಗಮನಾರ್ಹ ಪ್ರಗತಿಯನ್ನು ಸಾಧಿಸಿದೆ ಎಂದು ಅವರು ಹೇಳಿದರು. ವ್ಯಾಪಾರ ಮತ್ತು ಹೂಡಿಕೆ, ಡಿಜಿಟಲ್ ಸಂಪರ್ಕ, ರಕ್ಷಣೆ ಮತ್ತು ಇಂಧನ ಕ್ಷೇತ್ರಗಳಲ್ಲಿ ಸಹಕಾರವನ್ನು ಮತ್ತಷ್ಟು ಗಾಢಗೊಳಿಸುವ ಕುರಿತು ಅಧ್ಯಕ್ಷ ಮಿರ್ಜಿಯೋಯೆವ್ ಅವರೊಂದಿಗೆ ಚರ್ಚಿಸಲು ಎದುರು ನೋಡುತ್ತಿದ್ದೇನೆ ಎಂದು ಅವರು ಹೇಳಿದರು.

"ಅಭಿವೃದ್ಧಿ ಹೊಂದಿದ ಭಾರತ" ಮತ್ತು "ಯುವ ಉಜ್ಬೇಕಿಸ್ತಾನ್" ನ ತಮ್ಮ ಹಂಚಿಕೆಯ ದೃಷ್ಟಿಕೋನವನ್ನು ಅನುಸರಿಸುವ ಬಗ್ಗೆ ಎರಡೂ ದೇಶಗಳು ಚರ್ಚಿಸಲಿವೆ ಎಂದು ಮೋದಿ ಹೇಳಿದರು. ಭಾರತ ಮತ್ತು ಉಜ್ಬೇಕಿಸ್ತಾನ್ ನಡುವಿನ ನಿಕಟ ಸಾಂಸ್ಕೃತಿಕ ಮತ್ತು ಜನರಿಂದ ಜನರ ನಡುವಿನ ಸಂಬಂಧಗಳಿಗೆ ಗೌರವ ಸಲ್ಲಿಸಲು ತಾಷ್ಕೆಂಟ್ ಸ್ಟೇಟ್ ಓರಿಯಂಟಲ್ ಸ್ಟಡೀಸ್ ವಿಶ್ವವಿದ್ಯಾಲಯದಲ್ಲಿರುವ ಶಾಸ್ತ್ರಿ ಸ್ಮಾರಕ ಮತ್ತು ಮಹಾತ್ಮ ಗಾಂಧಿ ಕೇಂದ್ರಕ್ಕೂ ಭೇಟಿ ನೀಡುವುದಾಗಿ ಅವರು ಹೇಳಿದರು. ಬಿಷ್ಕೆಕ್‌ನಲ್ಲಿ ನಡೆಯುವ ಎಸ್‌ಸಿಒ ಶೃಂಗಸಭೆ ಕಿರ್ಗಿಸ್ತಾನ್ ಗಣರಾಜ್ಯದ ಅಧ್ಯಕ್ಷ ಸದಿರ್ ಝುಪರೋವ್ ಅವರ ಆಹ್ವಾನದ ಮೇರೆಗೆ, ಪ್ರಧಾನಿ ಮೋದಿ ಅವರು ಎಸ್‌ಸಿಒ ಸ್ಥಾಪನೆಯ 25 ನೇ ವಾರ್ಷಿಕೋತ್ಸವವನ್ನು ಗುರುತಿಸುವ 26 ನೇ ಶೃಂಗಸಭೆಯಲ್ಲಿ ಭಾಗವಹಿಸಲು ತಾಷ್ಕೆಂಟ್‌ನಿಂದ ಬಿಷ್ಕೆಕ್‌ಗೆ ಪ್ರಯಾಣಿಸಲಿದ್ದಾರೆ.

ಅಧ್ಯಕ್ಷ ಸದಿರ್ ಝುಫರೋವ್ ಸೇರಿದಂತೆ ಇತರ ನಾಯಕರನ್ನು ಭೇಟಿ ಮಾಡಲು ಮತ್ತು ಮಧ್ಯ ಏಷ್ಯಾದ ಶ್ರೀಮಂತ ಜೀವನ ಪರಂಪರೆಯನ್ನು ಪ್ರದರ್ಶಿಸುವ 6 ನೇ ವಿಶ್ವ ಅಲೆಮಾರಿ ಕ್ರೀಡಾಕೂಟದ ಉದ್ಘಾಟನಾ ಸಮಾರಂಭದಲ್ಲಿ ಭಾಗವಹಿಸಲು ಎದುರು ನೋಡುತ್ತಿದ್ದೇನೆ ಎಂದು ಮೋದಿ ಹೇಳಿದರು. ಪ್ರಧಾನಿ ಮೋದಿ ಅವರು ಶೃಂಗಸಭೆಯನ್ನು ಉದ್ದೇಶಿಸಿ ಮಾತನಾಡಲಿದ್ದಾರೆ ಮತ್ತು ಭದ್ರತೆ, ಸಂಪರ್ಕ ಮತ್ತು ಅವಕಾಶಗಳಿಗೆ ಸಂಬಂಧಿಸಿದ ಭಾರತದ ಆದ್ಯತೆಗಳನ್ನು ವಿವರಿಸಲಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಮೋದಿ ವಿವಿಧ ದೇಶಗಳ ನಾಯಕರೊಂದಿಗೆ ದ್ವಿಪಕ್ಷೀಯ ಸಭೆಗಳನ್ನು ಸಹ ನಡೆಸಲಿದ್ದಾರೆ.

# ಡಿಕೆಶಿ ಟೀಮ್‌ನ ಮೊದಲ ವಿಕೆಟ್ ಉರುಳಿಸಿದ ಬಿಜೆಪಿ, ಕಣ್ಣೀರಿಡುತ್ತ ನಾಗೇಂದ್ರ ರಾಜೀನಾಮೆ

ವಿಜಯ ದುಂಬಿ ಸುದ್ದಿ....

**ಬೆಂಗಳೂರು: ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಹಣ ವರ್ಗಾವಣೆ ಹಗರಣ ರಾಜ್ಯ ರಾಜಕಾರಣದಲ್ಲಿ ತೀವ್ರ ಸಂಚಲನ ಮೂಡಿಸಿದ್ದು, ಅಂತಿಮವಾಗಿ ಸಚಿವ ಬಿ. ನಾಗೇಂದ್ರ ಅವರು ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡುವ ಮೂಲಕ ಪ್ರಕರಣಕ್ಕೆ ತಾತ್ಕಾಲಿಕ ರಾಜಕೀಯ ವಿರಾಮ ಬಿದ್ದಿದೆ.**

ಈ ಬೆಳವಣಿಗೆಯ ಹಿಂದೆ ವಿರೋಧ ಪಕ್ಷಗಳಾದ ಬಿಜೆಪಿ ಮತ್ತು ಜೆಡಿಎಸ್ ನಡೆಸಿದ ಸಂಘಟಿತ ಹೋರಾಟ ಪ್ರಮುಖ ಪಾತ್ರ ವಹಿಸಿದೆ. ಸರ್ಕಾರದ ಮೇಲೆ ನಿರಂತರ ಒತ್ತಡ ಹೇರುವಲ್ಲಿ ಹಾಗೂ ಸದನದ ಒಳಗೆ ಮತ್ತು ಹೊರಗೆ ಆಡಳಿತಾರೂಢ ಕಾಂಗ್ರೆಸ್ ಸರ್ಕಾರವನ್ನು ಇಕ್ಕಟ್ಟಿಗೆ ಸಿಲುಕಿಸುವಲ್ಲಿ ಎನ್‌ಡಿಎ ಮೈತ್ರಿಕೂಟ ಯಶಸ್ವಿಯಾಗಿದೆ. ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ನಂತರ ಬಿಜೆಪಿ ಮತ್ತು ಜೆಡಿಎಸ್ ನಡುವೆ ಅಷ್ಟೊಂದು ಬಲವಾದ ಸಮನ್ವಯತೆ ಕಂಡುಬಂದಿರಲಿಲ್ಲ. ಆದರೆ ವಾಲ್ಮೀಕಿ ನಿಗಮದ ಹಗರಣದ ವಿಷಯದಲ್ಲಿ ಎರಡೂ ಪಕ್ಷಗಳು ತಮ್ಮ ಆಂತರಿಕ ಭಿನ್ನಾಭಿಪ್ರಾಯಗಳನ್ನು ಬದಿಗಿಟ್ಟು ಒಂದೇ ವೇದಿಕೆಯಲ್ಲಿ ನಿಂತವು.

ಕಾಂಗ್ರೆಸ್ ಸರ್ಕಾರದ ವಿರುದ್ಧ ಪ್ರತಿಪಕ್ಷಗಳು ಹಲವು ವಿಚಾರಗಳಲ್ಲಿ ಧ್ವನಿ ಎತ್ತಿದ್ದರೂ, ಬಿಜೆಪಿ ಮತ್ತು ಜೆಡಿಎಸ್ ಒಂದೇ ವಿಚಾರವನ್ನು ಕೇಂದ್ರವಾಗಿಸಿಕೊಂಡು ಉಭಯ ಸದನಗಳಲ್ಲೂ ಸಮನ್ವಯದಿಂದ ಹೋರಾಟ ನಡೆಸಿ ಸರ್ಕಾರದ ಮೇಲೆ ಪರಿಣಾಮ ಬೀರುವ ಮಟ್ಟಿಗೆ ಒತ್ತಡ



ಸೃಷ್ಟಿಸಿರುವುದು ಗಮನಾರ್ಹ ಬೆಳವಣಿಗೆಯಾಗಿದೆ.

ವಿಧಾನಮಂಡಲ ಅಧಿವೇಶನದ ಸಂದರ್ಭದಲ್ಲಿ ಉಭಯ ಪಕ್ಷಗಳ ನಾಯಕರು ಜಂಟಿಯಾಗಿ ಸರ್ಕಾರದ ವಿರುದ್ಧ ಹೋರಾಟ ರೂಪಿಸಿದರು. ಸದನದ ಒಳಗೆ ಮತ್ತು ಹೊರಗೆ ಪ್ರತಿಭಟನೆಗಳನ್ನು ತೀವ್ರಗೊಳಿಸುವ ಮೂಲಕ ಸರ್ಕಾರವನ್ನು ತರಾಟೆಗೆ ತೆಗೆದುಕೊಳ್ಳುವಲ್ಲಿ ಬಿಜೆಪಿ ಮತ್ತು ಜೆಡಿಎಸ್ ಶಾಸಕರು ಯಶಸ್ವಿಯಾದರು. ಅಧಿವೇಶನದ ಆರಂಭದಿಂದಲೂ ಸಚಿವ ಬಿ. ನಾಗೇಂದ್ರ ಅವರ ರಾಜೀನಾಮೆಗೆ ಪಟ್ಟು ಹಿಡಿದಿದ್ದ ಬಿಜೆಪಿ ಮತ್ತು ಜೆಡಿಎಸ್, ಯಾವುದೇ ಕಾರಣಕ್ಕೂ ಸರ್ಕಾರದ ಮೇಲಿನ ಒತ್ತಡವನ್ನು ಸಡಿಲಗೊಳಿಸಲಿಲ್ಲ. ನಿಗಮದ ಹಣ ಅಕ್ರಮವಾಗಿ ಬೇರೆಡೆಗೆ ವರ್ಗಾವಣೆಯಾಗಿದೆ ಎಂಬ ಗಂಭೀರ ಆರೋಪಗಳು ಹಾಗೂ ತನಿಖೆಯಲ್ಲಿ ಹೊರಬಂದ ಅಂಶಗಳು ಸರ್ಕಾರದ ನೈತಿಕತೆಯನ್ನೇ ಪ್ರಶ್ನಿಸುವಂತಾಗಿದ್ದವು.

ವಿರೋಧ ಪಕ್ಷಗಳ ಸಂಘಟಿತ ಹೋರಾಟದ ಪರಿಣಾಮ ಕಾಂಗ್ರೆಸ್ ಹೈಕಮಾಂಡ್ ಹಾಗೂ ಮುಖ್ಯಮಂತ್ರಿ, ಸಚಿವ ನಾಗೇಂದ್ರ ಅವರನ್ನು ಸಂಪುಟದಲ್ಲಿ ಮುಂದುವರಿಸುವುದರಿಂದ ಪಕ್ಷ ಹಾಗೂ ಸರ್ಕಾರದ ವರ್ಚಸ್ಸಿಗೆ ಮತ್ತಷ್ಟು ಹಾನಿಯಾಗಬಹುದು ಎಂಬ ನಿರ್ಧಾರಕ್ಕೆ ಬಂದರು ಎನ್ನಲಾಗಿದೆ. ಪರಿಣಾಮವಾಗಿ ರಾಜಕೀಯ ಒತ್ತಡದ ನಡುವೆ ಬಿ. ನಾಗೇಂದ್ರ ಅವರು ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಬೇಕಾಯಿತು.

ಈ ಬೆಳವಣಿಗೆ ರಾಜ್ಯದ ವಿರೋಧ ಪಕ್ಷಗಳಿಗೆ ಹೊಸ ಆತ್ಮವಿಶ್ವಾಸ ನೀಡಿದೆ. ಬಿಜೆಪಿ ಮತ್ತು ಜೆಡಿಎಸ್ ಒಟ್ಟಾಗಿ ನಿಂತರೆ ಆಡಳಿತಾರೂಢ ಕಾಂಗ್ರೆಸ್ ಸರ್ಕಾರದ ಮೇಲೆ ಎಷ್ಟು ಪರಿಣಾಮಕಾರಿಯಾಗಿ ರಾಜಕೀಯ ಒತ್ತಡ ಹೇರಬಹುದು ಎಂಬುದು ಈ ಹೋರಾಟದಿಂದ ಸ್ಪಷ್ಟವಾಗಿದೆ. ಸ್ಥಳೀಯ ನಾಯಕರು ಹಾಗೂ ಪಕ್ಷದ ವರಿಷ್ಠರಿಗೂ ಮೈತ್ರಿಕೂಟದ ಒಗ್ಗಟ್ಟಿನ ಶಕ್ತಿಯ ಅರಿವಾಗಿದೆ. ಮುಂಬರುವ ದಿನಗಳಲ್ಲಿ ಕಾಂಗ್ರೆಸ್ ಸರ್ಕಾರದ ವಿರುದ್ಧ ಇನ್ನಷ್ಟು ತೀವ್ರ ಹಾಗೂ ಸಂಘಟಿತ ಹೋರಾಟಗಳನ್ನು ನಡೆಸಲು ಈ ಬೆಳವಣಿಗೆ ಎನ್‌ಡಿಎ ಮೈತ್ರಿಕೂಟಕ್ಕೆ ಬಲ ನೀಡುವ ಸಾಧ್ಯತೆಯಿದೆ. ಭ್ರಷ್ಟಾಚಾರದ ಆರೋಪಗಳನ್ನು ಮುಂದಿಟ್ಟುಕೊಂಡು ಸರ್ಕಾರದ ಜನಪ್ರಿಯತೆಗೆ ಧಕ್ಕೆ ತರಲು ವಿರೋಧ ಪಕ್ಷಗಳು ಈ ಬೆಳವಣಿಗೆಯನ್ನು ಮುಂದಿನ ದಿನಗಳಲ್ಲಿ ರಾಜಕೀಯ ಅಸ್ತ್ರವಾಗಿ ಬಳಸಿಕೊಳ್ಳುವ ಸಾಧ್ಯತೆಯೂ ಇದೆ. ನಾಗೇಂದ್ರ ಅವರ ರಾಜೀನಾಮೆಯನ್ನು ಬಿಜೆಪಿ-ಜೆಡಿಎಸ್ ಮೈತ್ರಿಕೂಟ ತನ್ನ ಹೋರಾಟದ ಮೊದಲ ಪ್ರಮುಖ ರಾಜಕೀಯ ಯಶಸ್ಸು ಎಂದು ಬಿಂಬಿಸಿಕೊಳ್ಳುವ ಸಾಧ್ಯತೆಯಿದೆ.

ಇಲ್ಲಿ ಮುಖ್ಯವಾಗುವುದು ಕೇವಲ ನಾಗೇಂದ್ರ ಅವರ ರಾಜೀನಾಮೆಯಲ್ಲ. ಬಿಜೆಪಿ ಮತ್ತು ಜೆಡಿಎಸ್ ಒಗ್ಗಟ್ಟಿನಿಂದ ಹೋರಾಟ ನಡೆಸಿದರೆ ಸರ್ಕಾರದ ಮೇಲೆ ಪರಿಣಾಮಕಾರಿ ರಾಜಕೀಯ ಒತ್ತಡ ಹೇರಲು ಸಾಧ್ಯ ಎಂಬ ಸಂದೇಶ ಎರಡೂ ಪಕ್ಷಗಳ ನಾಯಕರಿಗೆ ದೊರೆತಿರುವುದು. ಎನ್‌ಡಿಎ ಮೈತ್ರಿಗೆ ಹೊಸ ಆತ್ಮವಿಶ್ವಾಸ

ರೂಪುಗೊಂಡ ಬಿಜೆಪಿ-ಜೆಡಿಎಸ್ ಮೈತ್ರಿ ಕರ್ನಾಟಕದ ರಾಜಕೀಯದಲ್ಲಿ ಹೊಸ ಸಮೀಕರಣಕ್ಕೆ ಕಾರಣವಾಗಿತ್ತು. ಆದರೆ ವಿಧಾನಮಂಡಲದ ಒಳಗೆ ಈ ಮೈತ್ರಿ ಎಷ್ಟರ ಮಟ್ಟಿಗೆ ಪರಿಣಾಮಕಾರಿಯಾಗಿ ಕೆಲಸ ಮಾಡಲಿದೆ ಎಂಬ ಪ್ರಶ್ನೆಯೂ ಇತ್ತು. ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದ ಪ್ರಕರಣದಲ್ಲಿ ನಡೆದ ಹೋರಾಟ ಆ ಪ್ರಶ್ನೆಗೆ ಒಂದು ಮಟ್ಟಿಗೆ ಉತ್ತರ ನೀಡಿದೆ. ಎರಡೂ ಪಕ್ಷಗಳು ತಮ್ಮ ರಾಜಕೀಯ ಹಿತಾಸಕ್ತಿಗಳು ಹಾಗೂ ಹಿಂದಿನ ಭಿನ್ನಾಭಿಪ್ರಾಯಗಳನ್ನು ಬದಿಗಿಟ್ಟು, ಸರ್ಕಾರದ ವಿರುದ್ಧ ನಿರ್ದಿಷ್ಟ ವಿಷಯವನ್ನು ಮುಂದಿಟ್ಟುಕೊಂಡು ಒಗ್ಗಟ್ಟಾಗಿ ಹೋರಾಡಿದರೆ ಅದರ ರಾಜಕೀಯ ಪರಿಣಾಮ ದೊಡ್ಡದಾಗಬಹುದು ಎಂಬುದು ಈ ಬೆಳವಣಿಗೆಯಿಂದ ಸ್ಪಷ್ಟವಾಗಿದೆ. ಇದು ಬಿಜೆಪಿ ಮತ್ತು ಜೆಡಿಎಸ್‌ನ ಕೆಳಹಂತದ ಕಾರ್ಯಕರ್ತರಿಗೂ ಹೊಸ ಉತ್ಸಾಹ ನೀಡುವ ಸಾಧ್ಯತೆಯಿದೆ.

ನಾಗೇಂದ್ರ ಪ್ರಕರಣದ ಬೆಳವಣಿಗೆ ಮುಂದಿನ ದಿನಗಳಲ್ಲಿ ಬಿಜೆಪಿ-ಜೆಡಿಎಸ್ ರಾಜಕೀಯ ಕಾರ್ಯತಂತ್ರದ ಮೇಲೂ ಪರಿಣಾಮ ಬೀರುವ ಸಾಧ್ಯತೆಯಿದೆ. ಈವರೆಗೆ ಪ್ರತ್ಯೇಕವಾಗಿ ಅಥವಾ ಕೆಲವೊಮ್ಮೆ ಪರಸ್ಪರ ಭಿನ್ನ ನಿಲುವುಗಳೊಂದಿಗೆ ಸರ್ಕಾರವನ್ನು ಎದುರಿಸುತ್ತಿದ್ದ ಎರಡು ಪಕ್ಷಗಳು, ಸರ್ಕಾರದ ವಿರುದ್ಧದ ಪ್ರಮುಖ ವಿಚಾರಗಳಲ್ಲಿ ಕನಿಷ್ಠ ಸಾಮಾನ್ಯ ರಾಜಕೀಯ ವೇದಿಕೆಯನ್ನು ರೂಪಿಸಿಕೊಳ್ಳುವ ಸಾಧ್ಯತೆ ಹೆಚ್ಚಾಗಿದೆ. ಮುಂದಿನ ದಿನಗಳಲ್ಲಿ ಕಾಂಗ್ರೆಸ್ ಸರ್ಕಾರದ ವಿರುದ್ಧ ಹಲವು ಆಡಳಿತಾತ್ಮಕ ಹಾಗೂ ರಾಜಕೀಯ ವಿಚಾರಗಳು ಮುನ್ನೆಲೆಗೆ ಬರಬಹುದು. ಇಂತಹ ಸಂದರ್ಭಗಳಲ್ಲಿ ಬಿಜೆಪಿ ಮತ್ತು ಜೆಡಿಎಸ್ ಒಂದೇ ಧ್ವನಿಯಲ್ಲಿ ಹೋರಾಟ ನಡೆಸಿದರೆ, ಸರ್ಕಾರದ ಮೇಲೆ ಒತ್ತಡ ಮತ್ತಷ್ಟು ಹೆಚ್ಚಿಸುವ ಅವಕಾಶವೂ ಇದೆ.

# ವೆನೆಜುವೆಲಾದ 65 ಶತಕೋಟಿ ಬ್ಯಾರೆಲ್ ತೈಲದ ಮೇಲೆ ಅಮೆರಿಕದ ಹಿಡಿತ :ಟ್ರಂಪ್ ಘೋಷಣೆ

ವಿಜಯ ದುಂಬಿ ಸುದ್ದಿ....

**ವಾಷಿಂಗ್ಟನ್: ದಕ್ಷಿಣ ಅಮೆರಿಕದ ವೆನೆಜುವೆಲಾದ 65 ಶತಕೋಟಿ ಬ್ಯಾರೆಲ್ ತೈಲ ಸಂಗ್ರಹದ ಮೇಲೆ ನಿಯಂತ್ರಣ ಸಾಧಿಸಲು ಅಮೆರಿಕ ಒಪ್ಪಂದ ಮಾಡಿಕೊಂಡಿದೆ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಘೋಷಿಸಿದ್ದಾರೆ.**

ಸಾಮಾಜಿಕ ಜಾಲತಾಣದಲ್ಲಿ ಈ ಕುರಿತು ಮಾಹಿತಿ ನೀಡಿರುವ ಟ್ರಂಪ್, ಅಮೆರಿಕದ ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರೂಬಿಯೊ, ರಕ್ಷಣಾ ಕಾರ್ಯದರ್ಶಿ ಪೀಟ್ ಹೆಗ್ಸೆತ್ ಹಾಗೂ ವೆನೆಜುವೆಲಾದ ಹಂಗಾಮಿ ಅಧ್ಯಕ್ಷೆ ಡೆಲ್ಸಿ ರೊಡ್ರಿಗಸ್ ಅವರು ಒಪ್ಪಂದದ ಮಾತುಕತೆಯಲ್ಲಿ ಭಾಗವಹಿಸಿದ್ದರು ಎಂದು ತಿಳಿಸಿದ್ದಾರೆ.

ಅಮೆರಿಕವು ವೆನೆಜುವೆಲಾ



ಜತೆ ವಿಶ್ವ ಇತಿಹಾಸದಲ್ಲೇ ಅತಿದೊಡ್ಡ ತೈಲ ಒಪ್ಪಂದ ಮಾಡಿಕೊಂಡಿದೆ ಎಂದು ಟ್ರಂಪ್ ತಮ್ಮ ಪೋಸ್ಟ್‌ನಲ್ಲಿ ಹೇಳಿದ್ದಾರೆ.

ವೆನೆಜುವೆಲಾ ಅಧ್ಯಕ್ಷ ನಿಕೊಲಸ್ ಮದುರೊ ಅವರನ್ನು ಅಮೆರಿಕ ಸೇನಾ ಕಾರ್ಯಾಚರಣೆ ನಡೆಸಿ ಬಂಧಿಸಿ, ಮಾದಕವಸ್ತು ಕಳ್ಳಸಾಗಣೆ ಹಾಗೂ ನಾರ್ಕೊ-ಭಯೋತ್ಪಾದನೆ ಆರೋಪದಡಿ ಅಮೆರಿಕಕ್ಕೆ ಕರೆದೊಯ್ದ ಸುಮಾರು ಒಂಬತ್ತು ತಿಂಗಳ ಬಳಿಕ ಈ ಒಪ್ಪಂದದ ಘೋಷಣೆ ಹೊರಬಿದ್ದಿದೆ.

ಇರಾನ್ ಯುದ್ಧ ಆರು ತಿಂಗಳು ಪೂರೈಸಿದರೂ ಅಂತ್ಯಗೊಳ್ಳುವ ಲಕ್ಷಣಗಳು ಕಾಣದ ಹಿನ್ನೆಲೆಯಲ್ಲಿ ಅಮೆರಿಕದಲ್ಲಿ ಪೆಟ್ರೋಲ್ ಬೆಲೆ ಏರಿಕೆಯಾಗುತ್ತಿರುವ ಬಗ್ಗೆ ಟ್ರಂಪ್ ಸರ್ಕಾರದ ಮೇಲೆ ಒತ್ತಡ ಹೆಚ್ಚಾಗಿದೆ. ಈ ನಡುವೆ ಅಮೆರಿಕ ತನ್ನ ಕಾರ್ಯತಂತ್ರದ ಪೆಟ್ರೋಲಿಯಂ ಸಂಗ್ರಹದಿಂದ ತೈಲವನ್ನು ಬಳಸಿಕೊಂಡಿದ್ದು, ಆಗಸ್ಟ್ ಆರಂಭದಲ್ಲಿ ಅದರ ಪ್ರಮಾಣ 300 ಮಿಲಿಯನ್ ಬ್ಯಾರೆಲ್‌ಗಿಂತ ಕಡಿಮೆಯಾಗಿತ್ತು ಎಂದು ವರದಿಯಾಗಿದೆ.

ವೆನೆಜುವೆಲಾ ವಿಶ್ವದಲ್ಲೇ ಅತಿದೊಡ್ಡ ತೈಲ ಸಂಗ್ರಹ ಹೊಂದಿರುವ ರಾಷ್ಟ್ರವಾಗಿದ್ದು, ಭೂಗರ್ಭದಲ್ಲಿ ಅಂದಾಜು 303 ಶತಕೋಟಿ ಬ್ಯಾರೆಲ್ ಕಚ್ಚಾ ತೈಲ ಸಂಗ್ರಹವಿದೆ. ಇದು ಜಾಗತಿಕ ತೈಲ ಸಂಗ್ರಹದ ಸುಮಾರು ಶೇ.17ರಷ್ಟಾಗಿದೆ ಎಂದು ಅಮೆರಿಕದ ಇಂಧನ ಮಾಹಿತಿ ಆಡಳಿತ ತಿಳಿಸಿದೆ. ಆದರೆ, ಹಳೆಯದಾದ ಮತ್ತು ಹದಗೆಟ್ಟಿರುವ ಮೂಲಸೌಕರ್ಯದ ಕಾರಣ ವೆನೆಜುವೆಲಾ ಪ್ರಸ್ತುತ ಜಾಗತಿಕ ತೈಲ ಉತ್ಪಾದನೆಯಲ್ಲಿ ಕೇವಲ ಶೇ.1ರಷ್ಟು ಮಾತ್ರ ಉತ್ಪಾದಿಸುತ್ತಿದೆ ಎಂದು ತಜ್ಞರು ಹೇಳಿದ್ದಾರೆ

## ಜ್ಞಾನಯೋಗಿ ಸಿದ್ದೇಶ್ವರ ಶ್ರೀಗಳ ಇಂಗ್ಲಿಷ್ ಪ್ರವಚನಗಳ 'ರಿಯಲೈಸೇಷನ್ ಆಫ್ ದ ಸೆಲ್ಫ್' ಕೃತಿ ಸಚಿವ ಎಂ.ಬಿ. ಪಾಟೀಲರಿಗೆ ಹಸ್ತಾಂತರ

ವಿಜಯ ದುಂಬಿ ಸುದ್ದಿ....

**ವಿಜಯಪುರ: ಜ್ಞಾನಯೋಗಿ ಸಿದ್ದೇಶ್ವರ ಶ್ರೀಗಳು ಇಂಗ್ಲಿಷ್‌ನಲ್ಲಿ ನೀಡಿರುವ ಪ್ರವಚನಗಳ ಸಂಗ್ರಹವಾದ 'ರಿಯಲೈಸೇಷನ್ ಆಫ್ ದ ಸೆಲ್ಫ್' ಪುಸ್ತಕವನ್ನು ಕೃತಿಯ ಲೇಖಕ, ಹಿರಿಯ ಸಾಹಿತಿ ಎಂ. ಎಸ್. ಚಾಂದಕವಟೆ ಅವರು ಕೈಗಾರಿಕೆ, ಮೂಲಸೌಲಭ್ಯ ಹಾಗೂ ವಿಜಯಪುರ ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ. ಪಾಟೀಲ ಅವರಿಗೆ ಶನಿವಾರ ನಗರದ ಗೃಹ ಕಚೇರಿಯಲ್ಲಿ ಹಸ್ತಾಂತರಿಸಿದರು.**

ಬೆಂಗಳೂರಿನ ಭಾರತೀಯ ವಿದ್ಯಾಭವನದ ಗಾಂಧಿ





ಸೆಂಟರ್ ಆಫ್ ಸೈನ್ಸ್ ಆ?ಯಂಡ್ ಹ್ಯೂಮನ್ ವ್ಯಾಲ್ಯುಸ್ ಸಂಸ್ಥೆ ಪ್ರಕಟಿಸಿರುವ ಈ ಕೃತಿ ಆಗಸ್ಟ್ 17ರಂದು ಧಾರವಾಡದ ಕರ್ನಾಟಕ ವಿದ್ಯಾವರ್ಧಕ ಸಂಘದಲ್ಲಿ ಬಿಡುಗಡೆಯಾಗಿತ್ತು. ಶ್ರೀ ಸಿದ್ದೇಶ್ವರ ಶ್ರೀಗಳ ಪ್ರವಚನಗಳ ಕನ್ನಡ ಪುಸ್ತಕಗಳು ಹಾಗೂ ವಿವಿಧ ಭಾಷಾಂತರ ಕೃತಿಗಳು ಸಾಕಷ್ಟು ಪ್ರಕಟವಾಗಿವೆ. ಆದರೆ ಶ್ರೀಗಳು ಸ್ವತಃ ಇಂಗ್ಲಿಷ್‌ನಲ್ಲಿ ನೀಡಿರುವ ಪ್ರವಚನಗಳ ಸಂಗ್ರಹ ಕೃತಿ ಪ್ರಕಟವಾಗಿರುವುದು ಇದೇ ಮೊದಲು ಎಂದು ಎಂ.ಎಸ್. ಚಾಂದಕವಟೆ ಅವರು ಸಚಿವರಿಗೆ ವಿವರಿಸಿದರು. ವಿಜಯಪುರದ ಜ್ಞಾನಯೋಗಾಶ್ರಮದಲ್ಲಿ ಶ್ರೀ ಸಿದ್ದೇಶ್ವರ ಶ್ರೀಗಳು ಇದ್ದ ಸಂದರ್ಭದಲ್ಲಿ ಪ್ರತಿ ಭಾನುವಾರ ಇಂಗ್ಲಿಷ್‌ನಲ್ಲಿ ಪ್ರವಚನ ನೀಡುತ್ತಿದ್ದರು. ಶ್ರೀಗಳಿಗೆ ಇಂಗ್ಲಿಷ್ ಭಾಷೆಯ ಮೇಲೂ ಉತ್ತಮ ಪ್ರಭುತ್ವವಿತ್ತು. ಅವರ ವಿಚಾರಧಾರೆ ದೇಶ ಹಾಗೂ ಅಂತಾರಾಷ್ಟ್ರೀಯ ಮಟ್ಟದಲ್ಲಿ ಹೆಚ್ಚಿನ ಜನರಿಗೆ ತಲುಪಬೇಕೆಂಬ ಉದ್ದೇಶದಿಂದ ಅಭಿಮಾನದಿಂದ ಈ ಕೃತಿಯನ್ನು ಸಂಗ್ರಹಿಸಿರುವುದಾಗಿ ಚಾಂದಕವಟೆ ತಿಳಿಸಿದರು. ಇದೇ ಸಂದರ್ಭದಲ್ಲಿ ಆಯ್ದ ಪ್ರವಚನಗಳ 'ಸಾಧಕರ ಜೀವನ ಪ್ರಸಂಗಗಳು' ಹಾಗೂ ಬುದ್ಧನ ಕುರಿತು ಶ್ರೀ ಸಿದ್ದೇಶ್ವರ ಶ್ರೀಗಳು ಹೇಳಿರುವ ವಿಚಾರಗಳನ್ನೊಳಗೊಂಡ 'ಬುದ್ಧನ ನೆನಹುಗಳು' ಕೃತಿಗಳನ್ನೂ ಸಚಿವರಿಗೆ ನೀಡಿದರು. ಕೃತಿಗಳನ್ನು ಸಂತಸದಿಂದ ಸ್ವೀಕರಿಸಿದ ಸಚಿವ ಎಂ.ಬಿ. ಪಾಟೀಲರು ಲೇಖಕ ಎಂ.ಎಸ್. ಚಾಂದಕವಟೆ ಅವರನ್ನು ಅಭಿನಂದಿಸಿದರು. ಲೇಖಕರು ಮತ್ತೊಂದು ಇಂಗ್ಲಿಷ್ ಕೃತಿಯ ರಚನೆಯಲ್ಲಿ ತೊಡಗಿದ್ದು, ಕೃತಿ ಪೂರ್ಣಗೊಂಡ ಬಳಿಕ ಪ್ರಕಟಿಸಲಾಗುವುದು ಎಂದು ತಿಳಿಸಿದರು.

# ನೇಪಾಳ ಪ್ರವಾಹ : ಇನ್ಫೋಸಿಸ್ ಪಬ್ಲಿಕ್ ಸರ್ವಿಸಸ್ ಮುಖ್ಯಸ್ಥ ಲಕ್ಷ್ ಗೋಪಿಸೆಟ್ಟಿ ನಾಪತ್ತೆ

ವಿಜಯ ದುಂಬಿ ಸುದ್ದಿ....

**ಕಠ್ಮಂಡು: ನೇಪಾಳ-ಟಿಬೆಟ್ ಗಡಿಯಲ್ಲಿ ಸಂಭವಿಸಿದ ಹಠಾತ್ ಪ್ರವಾಹ ಹಾಗೂ ಭೂಕುಸಿತದ ಭೀಕರ ದುರಂತದಲ್ಲಿ ಇನ್ಫೋಸಿಸ್ ಪಬ್ಲಿಕ್ ಸರ್ವಿಸಸ್ ಮುಖ್ಯಸ್ಥ ಲಕ್ಷ್ ಗೋಪಿಸೆಟ್ಟಿ ಅವರು ನಾಪತ್ತೆಯಾಗಿದ್ದಾರೆ.**

ವೈಯಕ್ತಿಕ ಭೇಟಿಗಾಗಿ ನೇಪಾಳಕ್ಕೆ ತೆರಳಿದ್ದ ಅವರನ್ನು ಸದ್ಯಕ್ಕೆ ಸಂಪರ್ಕಿಸಲು ಸಾಧ್ಯವಾಗುತ್ತಿಲ್ಲ ಎಂದು ಇನ್ಫೋಸಿಸ್ ಕಂಪನಿ ಅಧಿಕೃತವಾಗಿ ಖಚಿತಪಡಿಸಿದೆ. ಗೋಪಿಸೆಟ್ಟಿ ಅವರ ಸುರಕ್ಷತೆಯನ್ನು ಖಚಿತಪಡಿಸಿಕೊಳ್ಳಲು ಕಂಪನಿಯು ಸ್ಥಳೀಯ ಆಡಳಿತ ಹಾಗೂ ಅಧಿಕಾರಿಗಳೊಂದಿಗೆ ನಿರಂತರ ಸಂಪರ್ಕದಲ್ಲಿದೆ. ನೇಪಾಳದ ಪ್ರವಾಹ ಪೀಡಿತ ಪ್ರದೇಶದಲ್ಲಿ ಒಟ್ಟು 320 ಭಾರತೀಯರು ನಾಪತ್ತೆಯಾಗಿದ್ದಾರೆ ಹಾಗೂ ಸುಮಾರು 400 ಮಂದಿ ಚೀನಾದ ಭಾಗದಲ್ಲಿ ಸಿಲುಕಿಕೊಂಡಿದ್ದಾರೆ ಎಂದು ಭಾರತದ ವಿದೇಶಾಂಗ ವ್ಯವಹಾರಗಳ ಸಚಿವಾಲಯ ತಿಳಿಸಿದೆ. ಚೀನಾದ ಭಾಗದಲ್ಲಿ



ಸಿಲುಕಿಕೊಂಡಿದ್ದವರ ಪೈಕಿ 153 ಭಾರತೀಯರು ಸುರಕ್ಷಿತವಾಗಿ ನೇಪಾಳ ಪ್ರವೇಶಿಸಿದ್ದಾರೆ.

ಸಂಕಷ್ಟದಲ್ಲಿರುವ ಭಾರತೀಯರನ್ನು ರಕ್ಷಿಸಿ ವಾಪಸ್ ಕರೆತರಲು ಅಗತ್ಯವಿರುವ ಎಲ್ಲ ನೆರವನ್ನು ನೇಪಾಳ ಸರ್ಕಾರಕ್ಕೆ ನೀಡಲು ಭಾರತ ಸಿದ್ಧವಿದೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ.

"ನಮ್ಮ ಸಹೋದ್ಯೋಗಿ ಲಕ್ಷ್ ಗೋಪಿಸೆಟ್ಟಿ ಅವರ ಪತ್ತೆಗಾಗಿ ಸಂಬಂಧಪಟ್ಟ ಏಜೆನ್ಸಿಗಳೊಂದಿಗೆ ಕಾರ್ಯನಿರ್ವಹಿಸುತ್ತಿದ್ದೇವೆ. ಈ ಕಷ್ಟದ ಸಮಯದಲ್ಲಿ ಅವರ ಕುಟುಂಬಕ್ಕೆ ಅಗತ್ಯವಿರುವ ಸಂಪೂರ್ಣ ಬೆಂಬಲವನ್ನು ನೀಡಲಾಗುತ್ತಿದೆ" ಎಂದು ಇನ್ಫೋಸಿಸ್ ಪ್ರಕಟಣೆಯಲ್ಲಿ ತಿಳಿಸಿದೆ.

ಇನ್ಫೋಸಿಸ್ ಪಬ್ಲಿಕ್ ಸರ್ವಿಸಸ್ ಮುಖ್ಯಸ್ಥರಾಗಿರುವ ಗೋಪಿಸೆಟ್ಟಿ ಅವರು ಸಾರ್ವಜನಿಕ ವಲಯದ ಸಂಸ್ಥೆಗಳಿಗೆ ತಂತ್ರಜ್ಞಾನ ಹಾಗೂ ಕಾರ್ಯಾಚರಣೆಗಳ ಕುರಿತು ಸಲಹೆ ನೀಡುವಲ್ಲಿ ಪ್ರಮುಖ ಪಾತ್ರ ವಹಿಸುತ್ತಿದ್ದಾರೆ. ಇನ್ಫೋಸಿಸ್‌ಗೆ ಸೇರುವ ಮೊದಲು ಆಕ್ಸೆಂಚರ್‌ನಲ್ಲಿ ವ್ಯವಸ್ಥಾಪಕ ನಿರ್ದೇಶಕರಾಗಿ ಸೇವೆ ಸಲ್ಲಿಸಿದ್ದ ಅವರು, ಐಬಿಎಂ, ಪಿಡಬ್ಲ್ಯೂಸಿ ಹಾಗೂ ಎಚ್‌ಸಿಎಲ್‌ನಂತಹ ಪ್ರತಿಷ್ಠಿತ ಸಂಸ್ಥೆಗಳಲ್ಲಿ ಪ್ರಮುಖ ಜವಾಬ್ದಾರಿಗಳನ್ನು ನಿರ್ವಹಿಸಿದ್ದರು. ಪ್ರವಾಹ ಪೀಡಿತ ಪ್ರದೇಶಗಳಲ್ಲಿ ಸಿಲುಕಿರುವ ಇತರೆ ಭಾರತೀಯರ ರಕ್ಷಣೆ ಹಾಗೂ ನಾಪತ್ತೆಯಾಗಿರುವವರ ಪತ್ತೆಗಾಗಿ ರಾಜತಾಂತ್ರಿಕ ಮತ್ತು ರಕ್ಷಣಾ ಮಟ್ಟದಲ್ಲಿ ತೀವ್ರ ಪ್ರಯತ್ನಗಳು ಮುಂದುವರಿದಿವೆ.

# ಬಿಟ್‌ಕಾಯಿನ್ ಹಗರಣ : ಶ್ರೀಕಿ, ರಾಬಿನ್ ಖಂಡೇವಾಲಾ ಜಾಮೀನು ಅರ್ಜಿ ತಿರಸ್ಕೃತ

ವಿಜಯ ದುಂಬಿ ಸುದ್ದಿ....

**ಬೆಂಗಳೂರು: ರಾಜ್ಯಾದ್ಯಂತ ಸಂಚಲನ ಮೂಡಿಸಿದ್ದ ಬಿಟ್‌ಕಾಯಿನ್ ಹಗರಣ ಹಾಗೂ ಅಕ್ರಮ ಹಣ ವರ್ಗಾವಣೆ ಪ್ರಕರಣದಲ್ಲಿ ಬಂಧಿತರಾಗಿರುವ ಪ್ರಮುಖ ಆರೋಪಿಗಳಿಗೆ ನ್ಯಾಯಾಲಯದಿಂದ ಹಿನ್ನಡೆಯಾಗಿದ್ದು, ಜಾಮೀನು ಅರ್ಜಿ ತಿರಸ್ಕೃತಗೊಂಡಿದೆ. ಕುಖ್ಯಾತ ಹ್ಯಾಕರ್ ಶ್ರೀಕೃಷ್ಣ ಅಲಿಯಾಸ್ ಶ್ರೀಕಿ ಹಾಗೂ ಕ್ರಿಪ್ಟೋಕರೆನ್ಸಿ ಟ್ರೇಡರ್ ರಾಬಿನ್ ಖಂಡೇವಾಲಾ ಸಲ್ಲಿಸಿದ್ದ ಜಾಮೀನು ಅರ್ಜಿಯನ್ನು ವಿಚಾರಣೆ ನಡೆಸಿದ ಬೆಂಗಳೂರಿನ ವಿಶೇಷ ಪಿಎಂಎಲ್‌ಎ ನ್ಯಾಯಾಲಯವು ವಜಾಗೊಳಿಸಿದೆ. ಇಬ್ಬರೂ ಸದ್ಯ ಪರಪ್ಪನ ಅಗ್ರಹಾರ ಕೇಂದ್ರ ಕಾರಾಗೃಹದಲ್ಲಿ ನ್ಯಾಯಾಂಗ ಬಂಧನದಲ್ಲಿದ್ದಾರೆ.**

ಸರ್ಕಾರಿ ಹಾಗೂ ಖಾಸಗಿ ಜಾಲತಾಣಗಳು, ಕ್ರಿಪ್ಟೋ ಎಕ್ಸ್‌ಚೇಂಜ್‌ಗಳು ಮತ್ತು ಆನ್‌ಲೈನ್ ಗೇಮಿಂಗ್ ವೆಬ್‌ಸೈಟ್‌ಗಳನ್ನು ಹ್ಯಾಕ್ ಮಾಡಿ ಕೋಟ್ಯಂತರ ರೂ. ಮೌಲ್ಯದ ಬಿಟ್‌ಕಾಯಿನ್ ಹಾಗೂ ಇತರ ಡಿಜಿಟಲ್ ಆಸ್ತಿಗಳನ್ನು ಕಳವು ಮಾಡಿರುವ ಆರೋಪ ಶ್ರೀಕಿ ಮೇಲಿದೆ.



ಮತ್ತೊರ್ವ ಆರೋಪಿ ರಾಬಿನ್ ಖಂಡೇವಾಲಾ, ಶ್ರೀಕಿ ಹ್ಯಾಕ್ ಮಾಡಿದ್ದ ಬಿಟ್‌ಕಾಯಿನ್‌ಗಳು ಹಾಗೂ ಇತರ ಡಿಜಿಟಲ್ ಆಸ್ತಿಗಳನ್ನು ನಗದಾಗಿ ಪರಿವರ್ತಿಸಿ, ಪೂರ್ವಯೋಜಿತ ಸಂಚಿನಂತೆ ವಿವಿಧ ವ್ಯಕ್ತಿಗಳಿಗೆ ಹಣ ವರ್ಗಾವಣೆ ಮಾಡುತ್ತಿದ್ದನೆಂದು ಜಾರಿ ನಿರ್ದೇಶನಾಲಯದ (ಇಡಿ) ತನಿಖೆಯಲ್ಲಿ ತಿಳಿದುಬಂದಿದೆ.

ಕಳೆದ ಮೇ ತಿಂಗಳಲ್ಲಿ ಇಡಿ ಅಧಿಕಾರಿಗಳು ಶ್ರೀಕಿ ಮತ್ತು ರಾಬಿನ್ ಖಂಡೇವಾಲಾ ಅವರನ್ನು ಬಂಧಿಸಿದ್ದರು. ತನಿಖೆ ಚುರುಕುಗೊಳಿಸಿರುವ ಸಂಸ್ಥೆ ಈಗಾಗಲೇ ನ್ಯಾಯಾಲಯಕ್ಕೆ ದೋಷಾರೋಪಣ ಪಟ್ಟಿ (ಚಾರ್ಜ್‌ಶೀಟ್) ಸಲ್ಲಿಸಿದೆ. ಪ್ರಕರಣದ ತನಿಖೆಯ ಭಾಗವಾಗಿ ಕೆಲ ತಿಂಗಳ ಹಿಂದೆ ಯುವ ಕಾಂಗ್ರೆಸ್ ನಾಯಕ ಮೊಹಮದ್ ಹ್ಯಾರಿಸ್ ನಲಪಾಡ್ ಅವರ ನಿವಾಸ ಸೇರಿದಂತೆ ಹಲವು ಸ್ಥಳಗಳಲ್ಲೂ ಇಡಿ ಅಧಿಕಾರಿಗಳು ಶೋಧ ನಡೆಸಿದ್ದರು. ಜಾಮೀನು ಅರ್ಜಿ ವಿಚಾರಣೆ ವೇಳೆ ಇಡಿ ಪರ ವಿಶೇಷ ಅಭಿಯೋಜಕ ಮಧು ಎನ್. ರಾವ್ ವಾದ ಮಂಡಿಸಿ, ಆರೋಪಿಗಳು ಎಸಗಿದ್ದಾರೆ ಎನ್ನಲಾದ ಆರ್ಥಿಕ ಅಪರಾಧದ ಗಂಭೀರತೆ ಹಾಗೂ ತನಿಖೆಯಲ್ಲಿ ಲಭ್ಯವಾಗಿರುವ ಸಾಕ್ಷ್ಯಾಧಾರಗಳನ್ನು ನ್ಯಾಯಾಲಯದ ಮುಂದಿಟ್ಟರು. ಆರೋಪಿಗಳಿಗೆ ಜಾಮೀನು ನೀಡಿದರೆ ತನಿಖೆ ಹಾಗೂ ಸಾಕ್ಷ್ಯಾಧಾರಗಳಿಗೆ ಧಕ್ಕೆಯಾಗುವ ಸಾಧ್ಯತೆಯಿದೆ ಎಂದು ವಾದಿಸಿದರು.ಉಭಯ ಪಕ್ಷಗಳ ವಾದ-ಪ್ರತಿವಾದ ಆಲಿಸಿದ ವಿಶೇಷ ನ್ಯಾಯಾಲಯವು ಆರೋಪಗಳ ಗಂಭೀರತೆಯನ್ನು ಪರಿಗಣಿಸಿ ಇಬ್ಬರಿಗೂ ಜಾಮೀನು ನಿರಾಕರಿಸಿ ಆದೇಶಿಸಿದೆ.

ಏಪ್ರಿಲ್‌ನಲ್ಲಿ ಇಡಿ ದಾಳಿ

ಬಿಟ್‌ಕಾಯಿನ್ ಪ್ರಕರಣದ ತನಿಖೆಯನ್ನು ಮತ್ತಷ್ಟು ತೀವ್ರಗೊಳಿಸಿದ್ದ ಇಡಿ, 2026ರ ಏಪ್ರಿಲ್‌ನಲ್ಲಿ ಬೆಂಗಳೂರಿನ ವಿವಿಧ ಸ್ಥಳಗಳಲ್ಲಿ ದಾಳಿ ನಡೆಸಿತ್ತು. ಶ್ರೀಕಿ ಹಾಗೂ ಅವರೊಂದಿಗೆ ಸಂಪರ್ಕ ಹೊಂದಿದ್ದಾರೆಂದು ತನಿಖೆಯಲ್ಲಿ ಹೇಳಲಾದ ವ್ಯಕ್ತಿಗಳಿಗೆ ಸೇರಿದ ಸ್ಥಳಗಳಲ್ಲೂ ಶೋಧ ನಡೆಸಲಾಗಿತ್ತು.ಕಾಂಗ್ರೆಸ್ ನಾಯಕ ಮೊಹಮದ್ ಹ್ಯಾರಿಸ್ ನಲಪಾಡ್ ಹಾಗೂ ಅವರ ಸಹೋದರ ಓಮರ್ ಫಾರೂಕ್ ನಲಪಾಡ್‌ಗೆ ಸಂಬಂಧಿಸಿದ ಸ್ಥಳಗಳ ಮೇಲಿನ ಶೋಧವೂ ಈ ಹಂತದಲ್ಲಿ ರಾಜಕೀಯವಾಗಿ ಗಮನ ಸೆಳೆದಿತ್ತು. ದಾಳಿಗಳ ಬಳಿಕ ಮೇ 8, 2026ರಂದು ಶ್ರೀಕೃಷ್ಣ, ರಾಬಿನ್ ಖಂಡೇವಾಲಾ ಹಾಗೂ ಸುನೀಶ್ ಹೆಗ್ಡೆ ಅವರನ್ನು ಇಡಿ ಬಂಧಿಸಿತ್ತು. ಆರೋಪಿಗಳನ್ನು ನ್ಯಾಯಾಲಯದ ಮುಂದೆ ಹಾಜರುಪಡಿಸಲಾಗಿದ್ದು, ಆರಂಭಿಕ ಹಂತದಲ್ಲಿ ಇಡಿ ಕಸ್ಟಡಿಗೆ ಒಪ್ಪಿಸಲಾಗಿತ್ತು.

ಏನಿದು ಬಿಟ್‌ಕಾಯಿನ್ ಹಗರಣ?

ವಿರುದ್ಧ ಸರ್ಕಾರಿ ಹಾಗೂ ಖಾಸಗಿ ಜಾಲತಾಣಗಳು, ಕ್ರಿಪ್ಟೋ ಎಕ್ಸ್‌ಚೇಂಜ್‌ಗಳು ಮತ್ತು ಆನ್‌ಲೈನ್ ಗೇಮಿಂಗ್ ವೆಬ್‌ಸೈಟ್‌ಗಳನ್ನು ಹ್ಯಾಕ್ ಮಾಡಿ ಡಿಜಿಟಲ್ ಆಸ್ತಿಗಳನ್ನು ಕಳವು ಮಾಡಿರುವ ಆರೋಪಗಳಿವೆ. ತನಿಖಾ ಸಂಸ್ಥೆಗಳ ಪ್ರಕಾರ, ಕಳವು ಮಾಡಲಾದ ಬಿಟ್‌ಕಾಯಿನ್ ಹಾಗೂ ಇತರ ಕ್ರಿಪ್ಟೋ ಆಸ್ತಿಗಳನ್ನು

VIJYA DUMBI KANNADA DAILY EDITED,PUBLISHED AND OWNED BY,VIJYA PRiNTED AT MANJESHA,U#74,4TH,MAIN,7TH,CROSS,NEARCHOWDESHARI TEMPALE KAVERINAGARA,MAHADEVAPURA,POST BANGALORU KARNATAKAPUBLISHED Hosapalya Byrasandra Modalakote Po , Nelamangala to bengaluru rurala Karnataka 562123 EDITOR VIJYA